02 June 2026 Tuesday
SINCE 1957
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ
ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಾವು ಏನು ಹೇಳುತ್ತೇವೆ ಎನ್ನುವುದಕ್ಕಿಂತಲೂ, ಹೇಗೆ ಹೇಳುತ್ತೇವೆ ಎನ್ನುವುದೇ ಮುಖ್ಯ! ಮಾತಿನ ಮತ್ತು ಧ್ವನಿಗೂ ಅದರದೇ ಆದ ಮೌಲ್ಯವಿದೆ!

-ಸ್ನೇಹಾ ಆನಂದ್

info.varthaman@gmail.com



ಶಾಲಾ ಪ್ರಾರಂಭೋತ್ಸವ: ಎತ್ತಿನಗಾಡಿಯಲ್ಲಿ ಶಾಲೆಗೆ ಬಂದ ಚಿಟಿಡಿ — ಪುಟ ಸಂ. 2



ಆದಿವಾಸಿ ಮಹಿಳೆಯನ್ನು ಅಲೆಸುತ್ತಿರುವ ಪುರಸಭೆ ಮುಖ್ಯಾಧಿಕಾರಿ — ಪುಟ ಸಂ. 3



ಮೈಸೂರಿನಲ್ಲಿ ಸಡಗರದ ಹಾಲುದಿನ ಆಚರಣೆ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್
VARTHAMAN Volume: 69 Issue: 186 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ರಾಜ್ಯಸಭೆ, ವಿಧಾನ ಪರಿಷತ್ ಚುನಾವಣೆಗೆ ಅಭ್ಯರ್ಥಿಗಳ ಪೈಪೋಟಿ

# ನಾಮಪತ್ರ ಸಲ್ಲಿಕೆ ಆರಂಭ

**ಬೆಂಗಳೂರು:** ರಾಜ್ಯದ 4 ರಾಜ್ಯಸಭಾ ಸ್ಥಾನಗಳು ಹಾಗೂ ವಿಧಾನಸಭಾ ಸದಸ್ಯರಿಂದ ಆಯ್ಕೆಯಾಗುವ ವಿಧಾನ ಪರಿಷತ್ತಿನ 7 ಸ್ಥಾನಗಳ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಸೋಮವಾರದಿಂದ ಆರಂಭವಾಗಿದೆ. ಚುನಾವಣಾ ಆಯೋಗ ಈಗಾಗಲೇ ವೇಳಾಪಟ್ಟಿ ಪ್ರಕಟಿಸಿದ್ದು, ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ನಾಮಪತ್ರ ಸಲ್ಲಿಕೆಗಾಗಿ ವಿಧಾನಸೌಧದಲ್ಲಿ ಅಗತ್ಯ ವ್ಯವಸ್ಥೆಗಳನ್ನು ಮಾಡಲಾಗಿದೆ. ನಿಗದಿತ ಕೊಠಡಿಯಲ್ಲಿ ಚುನಾವಣಾಧಿಕಾರಿಗಳು ನಾಮಪತ್ರಗಳನ್ನು ಸ್ವೀಕರಿಸಲಿದ್ದು, ಭದ್ರತಾ ಕ್ರಮಗಳನ್ನೂ ಬಿಗಿಗೊಳಿಸಲಾಗಿದೆ. ಅಭ್ಯರ್ಥಿಗಳೊಂದಿಗೆ ಬರುವವರ ಸಂಖ್ಯೆಯ ಮೇಲೂ ನಿಯಮಗಳನ್ನು ಜಾರಿಗೊಳಿಸಲಾಗಿದೆ.



### ಟಿಕೆಟ್‌ಗಾಗಿ ಪಕ್ಷಗಳಲ್ಲಿ ಪೈಪೋಟಿ

ವಿಧಾನಸಭೆಯಲ್ಲಿನ ಸಂಖ್ಯಾಬಲದ ಆಧಾರದ ಮೇಲೆ ಸ್ಥಾನಗಳ ಹಂಚಿಕೆ ನಡೆಯಲಿರುವುದರಿಂದ ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳಲ್ಲಿ ಟಿಕೆಟ್‌ಗಾಗಿ ತೀವ್ರ ಪೈಪೋಟಿ ಆರಂಭವಾಗಿದೆ. ಅಭ್ಯರ್ಥಿಗಳ ಆಯ್ಕೆ ಕುರಿತು ಪಕ್ಷಗಳ ಹೈಕಮಾಂಡ್ ಮಟ್ಟದಲ್ಲಿ ಚರ್ಚೆಗಳು ನಡೆಯುತ್ತಿದ್ದು, ಶೀಘ್ರದಲ್ಲೇ ಅಧಿಕೃತ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸುವ ಸಾಧ್ಯತೆ ಇದೆ. ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಚುನಾವಣೆಗಳು ರಾಜ್ಯ ರಾಜಕಾರಣದಲ್ಲಿ ಹೊಸ ಚರ್ಚೆಗೆ ಕಾರಣವಾಗಿದ್ದು, ಪ್ರಮುಖ ಸ್ಥಾನಗಳನ್ನು ಯಾರಿಗೆ ಪಕ್ಷಗಳು ನೀಡಲಿವೆ ಎಂಬುದು ಕುತೂಹಲ ಮೂಡಿಸಿದೆ.

### ವೇಳಾಪಟ್ಟಿ

- ಅಧಿಸೂಚನೆ: ಸೋಮವಾರ, 2026ರ ಜೂನ್ 1
- ನಾಮಪತ್ರ ಸಲ್ಲಿಕೆಗೆ ಕೊನೇ ದಿನ: ಸೋಮವಾರ, 2026ರ ಜೂನ್ 8
- ನಾಮಪತ್ರ ಪರಿಶೀಲನೆ: ಮಂಗಳವಾರ, 2026ರ ಜೂನ್ 9
- ನಾಮಪತ್ರ ಹಿಂಪಡೆಯಲು ಕೊನೇ ದಿನ: ಗುರುವಾರ, 2026ರ ಜೂನ್ 11
- ಮತದಾನ: ಗುರುವಾರ, 2026ರ ಜೂನ್ 18
- ಫಲಿತಾಂಶ: ಗುರುವಾರ, 2026ರ ಜೂನ್ 18

## ರಾಜ್ಯಸಭೆಗೆ ಸುಮಲತಾ ಹೆಸರು ಮುನ್ನೆಲೆ? ಬಿಜೆಪಿ ಹೈಕಮಾಂಡ್ ಚರ್ಚೆ

**ಬೆಂಗಳೂರು:** ಕರ್ನಾಟಕ ರಾಜ್ಯಸಭಾ ಚುನಾವಣೆಗೆ ಬಿಜೆಪಿ ಅಭ್ಯರ್ಥಿ ಆಯ್ಕೆ ಕುರಿತ ಚರ್ಚೆಗಳ ತೀವ್ರಗೊಂಡಿದ್ದು, ಮಾಜಿ ಸಂಸದೆ ಸುಮಲತಾ ಅಂಬರೀಶ್ ಅವರ ಹೆಸರು ಅಚ್ಚರಿಯಾಗಿ ಮುನ್ನೆಲೆಗೆ ಬಂದಿದೆ. ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ಹೊಸ ಕುತೂಹಲಕ್ಕೆ ಕಾರಣವಾಗಿದೆ. ರಾಜ್ಯಸಭೆಯ ಒಂದು ಸ್ಥಾನಕ್ಕಾಗಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟದಲ್ಲಿ ಚರ್ಚೆಗಳು ನಡೆಯುತ್ತಿದ್ದು, ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡ ಅವರನ್ನು ಮತ್ತೊಮ್ಮೆ ಕಣಕ್ಕಿಳಿಸುವ ಬಗ್ಗೆ ಮಾತುಕತೆ ಮುಂದುವರಿದಿದೆ. ಆದರೆ ಈ ಕುರಿತು ಇನ್ನೂ ಅಂತಿಮ ನಿರ್ಧಾರ ಹೊರಬಂದಿಲ್ಲ. ಇದರ ನಡುವೆ ರಾಜ್ಯ ಬಿಜೆಪಿ ಘಟಕವು ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಅವರ ಹೆಸರನ್ನು ಕೇಂದ್ರೀಯ ಸಂಸದೀಯ ಮಂಡಳಿಗೆ ಶಿಫಾರಸು ಮಾಡಿದೆ.



ಪುಟ 2ಕ್ಕೆ

### ತ್ಯಾಗಕ್ಕೆ ಸಿಗುತ್ತಾ ಪ್ರತಿಫಲ?

ಕಳೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಸೇರ್ಪಡೆಯಾಗಿದ್ದ ಸುಮಲತಾ ಅಂಬರೀಶ್, ಪಕ್ಷದ ಸೂಚನೆಯಂತೆ ಮಂಡ್ಯ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಟ್ಟಿದ್ದರು. ಇದರ ಫಲವಾಗಿ ಎಚ್.ಡಿ.ಕುಮಾರಸ್ವಾಮಿ ಮಂಡ್ಯದಿಂದ ಗೆದ್ದು ಕೇಂದ್ರ ಸಚಿವರಾಗಿದ್ದರು. ಈ ಹಿನ್ನೆಲೆ ಪಕ್ಷಕ್ಕಾಗಿ ಸುಮಲತಾ ಮಾಡಿದ ತ್ಯಾಗವನ್ನು ಬಿಜೆಪಿ ವರಿಷ್ಠರು ಪರಿಗಣಿಸಿ ರಾಜ್ಯಸಭಾ

## ಬಿಜೆಪಿಗೆ ಅಣ್ಣಾಮಲೈ ವಿದಾಯ? ಹೊಸ ಪಕ್ಷದತ್ತ ಅಣ್ಣಾಮಲೈ ಹೆಜ್ಜೆ?

**ಚೆನ್ನೈ:** ತಮಿಳುನಾಡು ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ಹಾಗೂ ಕರ್ನಾಟಕ ಕೇಡರ್‌ನ ಮಾಜಿ ಐಪಿಎಸ್ ಅಧಿಕಾರಿ ಕೆ. ಅಣ್ಣಾಮಲೈ ಬಿಜೆಪಿ ತೊರೆಯುವ ಸಾಧ್ಯತೆಗಳ ಬಗ್ಗೆ ರಾಜಕೀಯ ವಲಯದಲ್ಲಿ ಚರ್ಚೆ ಜೋರಾಗಿದೆ. ಮಂಗಳವಾರ ಅವರು ಪಕ್ಷದ ರಾಷ್ಟ್ರೀಯ ನಾಯಕರನ್ನು ಭೇಟಿ ಮಾಡಿ ತಮ್ಮ ಮುಂದಿನ ನಿರ್ಧಾರದ ಕುರಿತು ಚರ್ಚಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಕಳೆದ ಆರು ವರ್ಷಗಳಿಂದ ಬಿಜೆಪಿಯಲ್ಲಿ ಸಕ್ರಿಯರಾಗಿದ್ದ ಅಣ್ಣಾಮಲೈ, ಇತ್ತೀಚಿನ ರಾಜಕೀಯ ಬೆಳವಣಿಗೆಗಳು ಹಾಗೂ ಪಕ್ಷದ ಕೆಲವು ತೀರ್ಮಾನಗಳ ಬಗ್ಗೆ ಅಸಮಾಧಾನ ಹೊಂದಿದ್ದಾರೆ



## 'ಪಿಕ್ ಪಾಕೆಟ್' ಬಗ್ಗೆ ಎಚ್ಚರದಿಂದಿರಿ; ರಾಹುಲ್ ಗಾಂಧಿ ಕೇಂದ್ರದ ವಿರುದ್ಧ ಲೇವಡಿ

**ನವದೆಹಲಿ:** ಸಿಬಿಎಸ್‌ಇ ಮರುಮೌಲ್ಯಮಾಪನ ಪ್ರಕ್ರಿಯೆ ಮತ್ತು ಸಂಬಂಧಿತ ವೆಚ್ಚಗಳ ಕುರಿತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೋಮವಾರ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಈ ಕುರಿತಂತೆ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ರಾಹುಲ್ ಅವರು, ಸ್ಕ್ಯಾನ್ ಮಾಡಿದ ಪ್ರತಿಗಳು, ಅಂಕಗಳ ಮರುಎಣಿಕೆ ಮತ್ತು ಮರು–ಮೌಲ್ಯಮಾಪನಕ್ಕೆ ಸಂಬಂಧಿಸಿದಂತೆ ಅಧಿಕ ಶುಲ್ಕ ವಿಧಿಸುತ್ತಿರುವ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ವ್ಯವಸ್ಥೆಯ ವೈಫಲ್ಯಕ್ಕೆ ವಿದ್ಯಾರ್ಥಿಗಳಿಗೆ ದಂಡ ವಿಧಿಸಲಾಗುತ್ತಿದೆ ಎಂದು ಕಿಡಿಕಾರಿದ್ದಾರೆ.



ಡಿಜಿಟಲ್ ಸ್ಕ್ಯಾನಿಂಗ್ ಪ್ರಕ್ರಿಯೆಯಲ್ಲಿನ ದೋಷಗಳಿಂದ ಉಂಟಾದ ತಿದ್ದುಪಡಿಗಳಿಗಾಗಿ ವಿದ್ಯಾರ್ಥಿಗಳಿಗೆ ಶುಲ್ಕ ವಿಧಿಸುತ್ತಿರುವುದನ್ನು ರಾಹುಲ್ ಗಾಂಧಿ ಟೀಕಿಸಿದ್ದಾರೆ.

## ಹೆಲಿಕ್ಯಾಪ್ಟರ್ ಪತನ: ಮದುವೆಯಾದ ಕೆಲವೇ ಗಂಟೆಯಲ್ಲಿ ವರ ಸಾವು



**ವಾಷಿಂಗ್ಟನ್:** "ನಾನು ಸಂತೋಷವಾಗಿದ್ದೇನೆ" ಎಂದು ಹೇಳಿದ ಕೆಲವೇ ಗಂಟೆಗಳ ನಂತರ, ಅಮೆರಿಕದ ಜಾರ್ಜಿಯಾದಲ್ಲಿ ಸಂಭವಿಸಿದ ಹೆಲಿಕಾಪ್ಟರ್ ಪತನದಲ್ಲಿ ಭಾರತೀಯ ಮೂಲದ ಪೈಲಟ್ ಒಬ್ಬರು ಮೃತಪಟ್ಟಿದ್ದಾರೆ. ಡೆಲ್ಟಾ ಏರ್ ಲೈನ್ಸ್ ಪೈಲಟ್ ಆಗಿ ಕೆಲಸ ಮಾಡುತ್ತಿದ್ದ ಕೇರಳದ ಮೂಲದ 26 ವರ್ಷದ ಡೇವ್ ಫಿಜಿ ಅವರು, ದಾಂಪತ್ಯ ಜೀವನಕ್ಕೆ ಕಾಲಿಟ್ಟ ನಂತರ ತನ್ನ ಪತ್ನಿಯೊಂದಿಗೆ ಹನಿಮೂನ್‌ಗೆ ತೆರಳುತ್ತಿದ್ದರು. ಈ ವೇಳೆ ಸ್ವತಃ ಡೇವ್ ಹಾರಿಸುತ್ತಿದ್ದ ರಾಬಿನ್ಸನ್ ಖ66 ಹೆಲಿಕಾಪ್ಟರ್ ಡಾಸನ್‌ವಿಲ್ಲೆ ಮದುವೆ ಮಂಟಪದ ಬಳಿಯೇ ಪತನಗೊಂಡಿದೆ ಎಂದು ಮಾಧ್ಯಮ ವರದಿಗಳು ತಿಳಿಸಿವೆ. ಅಟ್ಲಾಂಟಾ ನ್ಯೂಸ್ ಫಸ್ಟ್ ವರದಿಯ ಪ್ರಕಾರ, ಅಧಿಕಾರಿಗಳು ಇನ್ನೂ ಗುರುತಿಸಲಾಗದ ಮತ್ತೊಬ್ಬ ಚಾಪರ್ ಪೈಲಟ್ ಕೂಡ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ವೃತ್ತಿಯಲ್ಲಿ ನರ್ಸ್ ಆಗಿರುವ ಡೇವ್ ಫಿಜಿ ಅವರ ವಧು ಜೆಸ್ಸಿ ಅವರು ಭೀಕರ ಅಪಘಾತದಲ್ಲಿ ಬದುಕುಳಿದಿದ್ದಾರೆ ಮತ್ತು ಮೆಟ್ರೋ ಅಟ್ಲಾಂಟಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ವರದಿ ತಿಳಿಸಿದೆ.

## ಬಿವೈವಿ ಪದತ್ಯಾಗ: ಮಹಿಳೆಗೆ ರಾಜ್ಯ ಬಿಜೆಪಿ ಅಧ್ಯಕ್ಷ ಪಟ್ಟ –ಕಿಣಿ ಭವಿಷ್ಯ

**ಬೆಂಗಳೂರು:** ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಬೆನ್ನಲ್ಲೇ ಶೀಘ್ರದಲ್ಲಿಯೇ ಬಿಜೆಪಿಯ ರಾಜ್ಯ ನಾಯಕತ್ವದಲ್ಲಿ ಮಹತ್ವದ ಬದಲಾವಣೆಯಾಗಲಿದೆ

ಬಿವೈ ವಿಜಯೇಂದ್ರ ಪದತ್ಯಾಗವಾಗಲಿದೆ. ಅವರ ಸ್ಥಾನಕ್ಕೆ ಮಹಿಳಾ ನಾಯಕಿ ಬರಲಿದ್ದಾರೆ ಎಂದು ಜ್ಯೋತಿಷಿ ಪ್ರಶಾಂತ್ ಕಿಣಿ ಭವಿಷ್ಯ ನುಡಿದಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಪ್ರಶಾಂತ್ ಕಿಣಿ, "ಕರ್ನಾಟಕ ಬಿಜೆಪಿ ಅಧ್ಯಕ್ಷ ಸ್ಥಾನದಿಂದ ಬಿವೈ ವಿಜಯೇಂದ್ರ ಕೆಳಗಿಳಿಯಲಿದ್ದಾರೆ. ಅವರ ಸ್ಥಾನಕ್ಕೆ ಒಬ್ಬ ಮಹಿಳೆ ನೇಮಕವಾಗಲಿದ್ದಾರೆ!" ಎಂದು ಬರೆದುಕೊಂಡಿದ್ದಾರೆ.

ಪ್ರಶಾಂತ್ ಕಿಣಿ ಅವರ ಭವಿಷ್ಯದ ಪ್ರಕಾರ, ಪ್ರಸ್ತುತ ಕರ್ನಾಟಕ ರಾಜ್ಯ ಬಿಜೆಪಿ ಅಧ್ಯಕ್ಷರಾಗಿರುವ ಬಿ.ವೈ.ವಿಜಯೇಂದ್ರ ಅವರು ಶೀಘ್ರದಲ್ಲೇ ತಮ್ಮ ಸ್ಥಾನದಿಂದ ಕೆಳಗಿಳಿಯಲಿದ್ದಾರೆ. ವಿಜಯೇಂದ್ರ ಅವರ

ಪುಟ 2ಕ್ಕೆ


## ಝೀರೋ ಟ್ರಾಫಿಕ್ ವಿರೋಧಿಸಿ ಗರ್ಭಿಣಿ ಪತ್ನಿಗಾಗಿ ಪತಿ ಪ್ರತಿಭಟನೆ



**ಬೆಂಗಳೂರು:** ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತೆರಳುತ್ತಿದ್ದ ವೇಳೆ ಝೀರೋ ಟ್ರಾಫಿಕ್ ಅಳವಡಿಕೆ ವಿರೋಧಿಸಿ ರಸ್ತೆ ಮಧ್ಯೆ ಗರ್ಭಿಣಿ ಮಹಿಳೆಯ ಪತಿ ಪ್ರತಿಭಟನೆ ನಡೆಸಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನಗರದ ಹಳೆಯ ವಿಮಾನ ನಿಲ್ದಾಣ ರಸ್ತೆಯಲ್ಲಿ ನಿನ್ನೆ ರಾಜ್ಯಪಾಲರ ಸಂಚಾರದ ಹಿನ್ನೆಲೆಯಲ್ಲಿ ಸುಮಾರು 30 ನಿಮಿಷಗಳ ಕಾಲ ಸಂಚಾರವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗಿತ್ತು. ಇದರಿಂದಾಗಿ ವ್ಯಾಪಕ ಟ್ರಾಫಿಕ್ ಜಾಮ್ ಸೃಷ್ಟಿಯಾಗಿದ್ದು, ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಂಡರ್‌ಪಾಸ್ ಕಾಮಗಾರಿಯಿಂದಾಗಿ ಮೊದಲೇ ಕಿರಿದಾಗಿದ್ದ ರಸ್ತೆಯಲ್ಲಿ ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೆ ಏಕಾಏಕಿ ರಸ್ತೆ ನಿರ್ಬಂಧಿಸಿದ್ದರಿಂದ ಸಂಚಾರ ವ್ಯವಸ್ಥೆ ಸಂಪೂರ್ಣ ಸ್ಥಗಿತವಾಗಿತ್ತು. ಈ ಸಂಚಾರ ದಟ್ಟಣೆಯ ನಡುವೆ ತನ್ನ ಗರ್ಭಿಣಿ ಪತ್ನಿಯನ್ನು

## ಕಾಂಗ್ರೆಸ್ ಅಭ್ಯರ್ಥಿಗೆ ಮತ ಹಾಕಬೇಡಿ: ಜಮೀರ್ ಆಡಿಯೋ ವೈರಲ್–ಭಾರಿ ವಿವಾದ

**ಬೆಂಗಳೂರು:** ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ಅವರದ್ದು ಎನ್ನಲಾಗಿರುವ ಆಡಿಯೋ ವೈರಲ್ ಆಗುತ್ತಿದೆ. ಕಾಕ್ರೋಚ್ ಪಾರ್ಟಿ ಹೆಸರಿನ ಎಕ್ಸ್‌ನಲ್ಲಿ ಆಡಿಯೋ ರಿಲೀಸ್ ಆಗಿದೆ. ದಾವಣಗೆರೆಯ ಕಾಂಗ್ರೆಸ್ ಮುಖಂಡ ಸಿರಾಜ್ ಜೊತೆ ಜಮೀರ್ ಅಹಮ್ಮದ್ ಮಾತನಾಡಿದ್ದಾರೆ ಎನ್ನಲಾದ ಆಡಿಯೋ ಇದಾಗಿದೆ. ಆಡಿಯೋದಲ್ಲಿ ಪಕ್ಷದ ಅಧಿಕೃತ ಅಭ್ಯರ್ಥಿ ವಿರುದ್ಧ ಪಕ್ಷೇತರ ಅಭ್ಯರ್ಥಿಗೆ ಬೆಂಬಲಿಸಿ ಮಾತನಾಡಲಾಗಿದೆ. ಮುಸ್ಲಿಂ ವೋಟಿಂಗ್ ಕಡಿಮೆ ಇದೆ ಹೊರಗಡೆ ಬಂದ್ರೆ ಅವರನ್ನು ನಂಬೋಕಾಗಲ್ಲ ಕಾಂಗ್ರೆಸ್‌ಗೆ ವೋಟ್ ಹಾಕುತ್ತಾರೆ ಎಂದು ಜಮೀರ್ ಹೇಳಿದ್ದಾರೆ ಎನ್ನಲಾಗಿದೆ. ಸದ್ಯ ಈ ಆಡಿಯೋ ಎಲ್ಲೆಡೆ ಹರಿದಾಡುತ್ತಿದೆ. ಜಮೀರ್ ಅಹ್ಮದ್ ಖಾನ್‌ರದ್ದು ಎನ್ನಲಾದ ಆಡಿಯೋದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಬದಲಾಗಿ ಮುಸ್ಲಿಮರೆಲ್ಲಾ ಪಕ್ಷೇತರರಿಗೆ ವೋಟ್ ಹಾಕಬೇಕು ಎಂದು ಆಗ್ರಹಿಸುವುದು ತಿಳಿದು ಬಂದಿದೆ. ಒಂದು ವೇಳೆ ಮುಸ್ಲಿಮರು ವೋಟ್ ಹಾಕಿಲ್ಲ ಅಂದ್ರೂ ಓಕೆ, ಅವನಿಗೆ ಕಾಂಗ್ರೆಸ್ ವೋಟ್‌ಗಳು ಮೈನಸ್ ಆಗಬೇಕು ಎಂದು ತಮ್ಮ ಬಂಟನಿಗೆ ಜಮೀರ್ ಸೂಚನೆ ನೀಡಿರುವುದು ಆಡಿಯೋದಲ್ಲಿದೆ. ಅಷ್ಟೇ ಅಲ್ಲದೆ, ಕಾಂಗ್ರೆಸ್ ಅಭ್ಯರ್ಥಿಗೆ ಜಾಸ್ತಿ ಓಟ್ ಹಾಕಬೇಡಿ. ಬಂಡಾಯ ನಿಂತು ಕಣದಿಂದ ಹಿಂದೆ ಸರಿದಿದ್ದ ಸಾದಿಕ್ ಪೈಲ್ವಾನ್ ವಾರ್ಡ್‌ನಲ್ಲಿ ಕಾಂಗ್ರೆಸ್ ಗೆ ಓಟ್ ಕಡಿಮೆ ಬರುವಂತೆ ನೋಡಿಕೊಳ್ಳಿ. ಜಾಸ್ತಿ ಹಾಕದೇ ಇರುವಂತೆ ನೋಡಿ. ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷೇತರರಿಗೆ ಮತ ಹಾಕಿಸಿ. ಬಲವಂತವಾಗಿ




ಪುಟ 2ಕ್ಕೆ

## ಕೇಂದ್ರ ಸರ್ಕಾರ ಎಲ್ಲ ಕ್ಷೇತ್ರಗಳಲ್ಲೂ ವಿಫಲ: ಖರ್ಗೆ

**ಕಲಬುರಗಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಜನರ ನಿರೀಕ್ಷೆಗಳನ್ನು ಈಡೇರಿಸುವಲ್ಲಿ ವಿಫಲವಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಟೀಕಿಸಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲದ ಬೆಲೆ ನಿರಂತರ ಏರಿಕೆಯಿಂದ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು. ಜನರು ಸರ್ಕಾರಕ್ಕೆ ಬೆಂಬಲ ನೀಡಿದ್ದರೂ, ಅವರ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಸಿಗುತ್ತಿಲ್ಲ ಎಂದು ಆರೋಪಿಸಿದರು. ಕೇಂದ್ರ ಸರ್ಕಾರ ಜನರ ಸಮಸ್ಯೆಗಳನ್ನು ಪರಿಹರಿಸುವ ಬದಲು ಮಾತುಗಳ ಮೂಲಕ ಸಮರ್ಥಿಸಿಕೊಳ್ಳಲು ಪ್ರಯತ್ನಿಸುತ್ತಿದೆ. ಬೆಲೆ ಏರಿಕೆ, ಹಣದುಬ್ಬರ ಹಾಗೂ




ಪುಟ 2ಕ್ಕೆ

## 15 ಜಿಲ್ಲೆಗಳಲ್ಲಿ ಮಳೆ ಅಬ್ಬರ ಯೆಲ್ಲೋ ಅಲರ್ಟ್

**ಬೆಂಗಳೂರು:** ರಾಜ್ಯದ ವಿವಿಧ ಭಾಗಗಳಲ್ಲಿ ಮುಂದಿನ ಕೆಲವು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಹವಾಮಾನ ಇಲಾಖೆ ಹಲವು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಿದೆ. ಜೂನ್ 3ರಿಂದ 5ರವರೆಗೆ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಉತ್ತರ ಒಳನಾಡಿನ ಭಾಗಗಳಲ್ಲಿ ಜೂನ್ 1ರಿಂದ 4ರವರೆಗೆ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಕೆಲವೆಡೆ ಗಂಟೆಗೆ 50ರಿಂದ 60 ಕಿಲೋಮೀಟರ್ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆ ಇದ್ದು, ಜೂನ್ 5ರವರೆಗೂ 40ರಿಂದ 50 ಕಿಲೋಮೀಟರ್ ವೇಗದ ಗಾಳಿ ಮುಂದುವರಿಯಲಿದೆ ಎಂದು ಇಲಾಖೆ ತಿಳಿಸಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಮೈಸೂರು, ಚಾಮರಾಜನಗರ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಸಂಜೆ ಹಾಗೂ ರಾತ್ರಿ ವೇಳೆ ಗುಡುಗು–ಸಿಡಿಲು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಜೂನ್ 2ರಿಂದ 4ರವರೆಗೆ ಬಿರುಗಾಳಿ ಸಹಿತ ಮಳೆಯ ಮುನ್ಸೂಚನೆ ನೀಡಲಾಗಿದೆ. ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ



ಪುಟ 2ಕ್ಕೆ

## ವೃದ್ಧೆ ಕೊಂದು, ಚಿರತೆ ದಾಳಿ ಎಂದು ಬಿಂಬಿಸಿದ್ದ ವ್ಯಕ್ತಿ ಬಂಧನ!

**ನಂಜನಗೂಡು:** ನಿಗೂಢವಾಗಿ ನಾಪತ್ತೆಯಾಗಿದ್ದ ತಾಲೂಕಿನ ಕಸುವಿನಹಳ್ಳಿಯ ವೃದ್ಧೆ ಶಿವರುದ್ರಮ್ಮ (63) ಶವವಾಗಿ ಪತ್ತೆಯಾಗಿದ್ದಾರೆ ಜಮೀನೊಂದರ ಇಂಗು ಗುಂಡಿಯಲ್ಲಿ ಮೃತ ದೇಹ ಸಿಕ್ಕಿದೆ. ಈ ಸಂಬಂಧ ಮಹದೇವಪ್ಪ ಎಂಬಾತನನ್ನು ಬಂಧಿಸಲಾಗಿದೆ. ನಂಜನಗೂಡು ತಾಲೂಕಿನ ಕಸುವಿನಹಳ್ಳಿ ಗ್ರಾಮದಲ್ಲಿ 63 ವರ್ಷದ ಮಹಿಳೆಯನ್ನು ಕೊಲೆ ಮಾಡಿದ್ದ ಮಹದೇವ ಚಿರತೆಯ ನಕಲಿ ಗುರುತುಗಳನ್ನು ಸೃಷ್ಟಿಸಿ, ಕಾಡು ಪ್ರಾಣಿಗಳ ದಾಳಿಯಂತೆ ಬಿಂಬಿಸಲು ಪ್ರಯತ್ನಿಸಿ ಸಿಕ್ಕಿಬಿದ್ದಿದ್ದಾನೆ. ಶಿವರುದ್ರಮ್ಮ ಅವರು ಪೂಜೆಗಾಗಿ ಬಿಲ್ವಪತ್ರೆ ಸಂಗ್ರಹಿಸಲು ಗ್ರಾಮದ ಹೊರವಲಯದಲ್ಲಿರುವ ಮಹಾಲಿಂಗೇಶ್ವರ ಸ್ವಾಮಿ ದೇವಸ್ಥಾನಕ್ಕೆ ಹೋಗಿದ್ದಾಗ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸುಮಾರು 70 ಗ್ರಾಂ ತೂಕದ ಚಿನ್ನದ ಆಭರಣಗಳನ್ನು ಧರಿಸಿದ್ದರು. ಶಿವರುದ್ರಮ್ಮ



ಪುಟ 2ಕ್ಕೆ

## 15ರ ಹರೆಯದಲ್ಲಿ ಐಪಿಎಲ್ ಇತಿಹಾಸ 5 ಪ್ರಶಸ್ತಿ ಗೆದ್ದ ಸೂರ್ಯವಂಶಿ

**ಅಹಮದಾಬಾದ್:** ಕೇವಲ 15 ವರ್ಷದ ವೈಭವ್ ಸೂರ್ಯವಂಶಿ ಐಪಿಎಲ್ ಇತಿಹಾಸದಲ್ಲಿ ಹೊಸ ದಾಖಲೆ ಬರೆದಿದ್ದಾರೆ. 16 ಪಂದ್ಯಗಳಲ್ಲಿ 776 ರನ್ ಗಳಿಸಿ ಅತ್ಯಂತ ಕಿರಿಯ ವಯಸ್ಸಿನಲ್ಲಿ ಆರೆಂಜ್ ಕ್ಯಾಪ್ ಗೆದ್ದ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಸೂರ್ಯವಂಶಿ ಈ ಬಾರಿಯ ಟೂರ್ನಿಯಲ್ಲಿ ಆರೆಂಜ್ ಕ್ಯಾಪ್, ಟೂರ್ನಿಯ ಶ್ರೇಷ್ಠ ಆಟಗಾರ, ಸೂಪರ್ ಸ್ಟ್ರೈಕರ್, ಸೂಪರ್ ಸಿಕ್ಸರ್ ಹಾಗೂ ಉದಯೋನ್ಮುಖ ಆಟಗಾರ ಸೇರಿ ಒಟ್ಟು 5 ಪ್ರಮುಖ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಈ ಸಾಧನೆಗಾಗಿ ಅವರು ಒಟ್ಟು 45 ಲಕ್ಷ ರೂ. ನಗದು ಬಹುಮಾನ ಹಾಗೂ ಟಾಟಾ ಸಿಯೆರಾ ಕಾರು ಪಡೆದಿದ್ದಾರೆ. ಹದಿನೈದರ ವಯಸ್ಸಿನಲ್ಲೇ ಐಪಿಎಲ್‌ನಲ್ಲಿ ಇಂತಹ ಸಾಧನೆ ಮಾಡಿ ಕ್ರಿಕೆಟ್ ಲೋಕದ ಗಮನ ಸೆಳೆದಿದ್ದಾರೆ.



# ಆರ್‌ಸಿಬಿ 2ನೇ ಬಾರಿ ಚಾಂಪಿಯನ್

### ಐಪಿಎಲ್‌ನಲ್ಲಿ ಐತಿಹಾಸಿಕ ಸಾಧನೆ: ರಾಯಲ್ ಚಾಲೆಂಜರ್ಸ್ ಬೆಂಗಳೂರು ಭರ್ಜರಿ ಜಯ

**ಅಹಮದಾಬಾದ್:** ವಿರಾಟ್ ಕೊಹ್ಲಿ ಅವರ ಅದ್ಭುತ ಬ್ಯಾಟಿಂಗ್ ಹಾಗೂ ಬೌಲರ್‌ಗಳ ಸಂಘಟಿತ ಪ್ರದರ್ಶನದ ನೆರವಿನಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡ ಐಪಿಎಲ್ ಇತಿಹಾಸದಲ್ಲಿ ಮತ್ತೊಂದು ಸುವರ್ಣ ಅಧ್ಯಾಯ ಬರೆದಿದೆ. ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ತಂಡವನ್ನು ಐದು ವಿಕೆಟ್‌ಗಳಿಂದ ಮಣಿಸಿದ ಆರ್‌ಸಿಬಿ ಸತತ ಎರಡನೇ ಬಾರಿಗೆ ಚಾಂಪಿಯನ್ ಪಟ್ಟ ಅಲಂಕರಿಸಿ ಹೊಸ ದಾಖಲೆ ನಿರ್ಮಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್ ತಂಡಕ್ಕೆ ಆರಂಭದಲ್ಲೇ ಆಘಾತ ಎದುರಾಯಿತು. ನಾಯಕ ಶುಭ್‌ಮನ್ ಗಿಲ್ ಹಾಗೂ ಸಾಯಿ ಸುದರ್ಶನ್ ಬೇಗನೆ ವಿಕೆಟ್ ಒಪ್ಪಿಸಿದ ಪರಿಣಾಮ ತಂಡ ಒತ್ತಡಕ್ಕೆ ಸಿಲುಕಿತು. ಜೋಸ್ ಬಟ್ಲರ್ 19 ರನ್ ಹಾಗೂ ನಿಶಾಂತ್ ಸಿಂಧು 20 ರನ್ ಗಳಿಸಿದರೂ ದೊಡ್ಡ ಜೊತೆಯಾಟ ಮೂಡಿಬರಲಿಲ್ಲ. ಒಂದೆಡೆ ವಿಕೆಟ್‌ಗಳು ಉರುಳುತ್ತಿದ್ದರೂ ವಾಷಿಂಗ್ಟನ್ ಸುಂದರ್ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿ ಅಜೇಯ ಅರ್ಧಶತಕ ದಾಖಲಿಸಿದರು. ಅವರ 50 ರನ್‌ಗಳ ನೆರವಿನಿಂದ ಗುಜರಾತ್ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 155 ರನ್ ಗಳಿಸಲು ಸಾಧ್ಯವಾಯಿತು. ಆರ್‌ಸಿಬಿ ಪರ ಯುವ ವೇಗಿ ರಸಿಖ್ ಸಲಾಮ್ ಮೂರು ವಿಕೆಟ್ ಕಬಳಿಸಿ ಮಿಂಚಿದರು. ಭುವನೇಶ್ವರ್ ಕುಮಾರ್ ಹಾಗೂ ಜೋಶ್ ಹೇಜಲ್‌ವುಡ್ ತಲಾ ಎರಡು ವಿಕೆಟ್ ಪಡೆದು ಗುಜರಾತ್ ಬ್ಯಾಟಿಂಗ್ ಬೆನ್ನೆಲುಬು ಮುರಿದರು. 156 ರನ್‌ಗಳ ಗುರಿ ಬೆನ್ನಟ್ಟಿದ ಆರ್‌ಸಿಬಿಗೆ ವಿರಾಟ್ ಕೊಹ್ಲಿ ಮತ್ತು ವೆಂಕಟೇಶ್ ಅಯ್ಯರ್ ಸ್ಫೋಟಕ ಆರಂಭ ಒದಗಿಸಿದರು. ಅಯ್ಯರ್ ಕೇವಲ 16 ಎಸೆತಗಳಲ್ಲಿ 32 ರನ್ ಗಳಿಸಿ ತಂಡಕ್ಕೆ ವೇಗ ತುಂಬಿದರು.



ಪುಟ 2ಕ್ಕೆ

## ಮೊದಲನೇ ಪುಟದಿಂದ

### ಬಿಜೆಪಿ ಅಧ್ಯಕ್ಷ ಪಟ್ಟ–ಕಿಣಿ ಭವಿಷ್ಯ

ನಾಯಕತ್ವದಲ್ಲಿ ಬದಲಾವಣೆಯಾಗುವ ಸಾಧ್ಯತೆ ಇದೆ ಎಂದು ಅವರು ಹೇಳಿದ್ದಾರೆ.

**ಯಾರು ಆ ಮಹಿಳೆ?:** ಪ್ರಶಾಂತ್ ಕಿಣಿ ಅವರು ಯಾವುದೇ ನಿರ್ದಿಷ್ಟ ಹೆಸರನ್ನು ಪ್ರಸ್ತಾಪಿಸಿಲ್ಲ. ಆದರೆ, ಈ ಭವಿಷ್ಯದ ಬೆನ್ನಲ್ಲೇ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅಥವಾ ಇತರ ಪ್ರಮುಖ ಮಹಿಳಾ ನಾಯಕಿಯರ ಹೆಸರುಗಳು ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆಯಾಗುತ್ತಿವೆ.

### ತ್ಯಾಗಕ್ಕೆ ಸಿಗುತ್ತಾ ಪ್ರತಿಫಲ?

ಟಿಕೆಟ್ ನೀಡುವ ಸಾಧ್ಯತೆ ಇದೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿಬರುತ್ತಿವೆ. ಆದರೆ ಅಭ್ಯರ್ಥಿ ಆಯ್ಕೆ ಕುರಿತು ಅಂತಿಮ ನಿರ್ಧಾರ ಹೈಕಮಾಂಡ್ ಮಟ್ಟದಲ್ಲೇ ಕೈಗೊಳ್ಳಲಾಗುವುದು. ರಾಜ್ಯಸಭಾ ಚುನಾವಣೆಗೆ ಬಿಜೆಪಿ ಯಾರನ್ನು ಕಣಕ್ಕಿಳಿಸಲಿದೆ ಎಂಬುದು ಸದ್ಯದ ರಾಜಕೀಯ ವಲಯದ ಬಹುದೊಡ್ಡ ಕುತೂಹಲವಾಗಿ ಪರಿಣಮಿಸಿದೆ.

### ಹೊಸ ಪಕ್ಷದತ್ತ ಅಣ್ಣಾಮಲೈ ಹೆಜ್ಜೆ?

ಎನ್ನಲಾಗುತ್ತಿದೆ. ವಿಶೇಷವಾಗಿ ತಮಿಳುನಾಡಿನಲ್ಲಿ ಎಐಎಡಿಎಂಕೆ ಜೊತೆಗಿನ ಮೈತ್ರಿ ಮತ್ತು ಚುನಾವಣಾ ತಂತ್ರಗಳ ಕುರಿತು ಅವರಿಗೆ ಭಿನ್ನಾಭಿಪ್ರಾಯಗಳಿದ್ದವು ಎಂದು ಹೇಳಲಾಗಿದೆ. ತಮಿಳುನಾಡಿನ ರಾಜಕೀಯದಲ್ಲಿ ಪ್ರಾದೇಶಿಕ ಪಕ್ಷಗಳ ಪ್ರಭಾವ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹೊಸ ರಾಜಕೀಯ ಆಯ್ಕೆಗಳ ಕುರಿತು ಅಣ್ಣಾಮಲೈ ಚಿಂತನೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ಆದರೆ ಅವರು ಹೊಸ ಪಕ್ಷ ಸ್ಥಾಪನೆ ಅಥವಾ ಮುಂದಿನ ರಾಜಕೀಯ ಹೆಜ್ಜೆ ಕುರಿತು ಯಾವುದೇ ಅಧಿಕೃತ ಘೋಷಣೆ ಮಾಡಿಲ್ಲ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿದ ನಂತರ ಅಣ್ಣಾಮಲೈ ಪಕ್ಷದ ಚಟುವಟಿಕೆಗಳಲ್ಲಿ ಹೆಚ್ಚು ಕಾಣಿಸಿಕೊಂಡಿರಲಿಲ್ಲ. ಸ್ವತಂತ್ರವಾಗಿ ಸ್ಪರ್ಧಿಸಿದರೆ ಮಾತ್ರ ತಮಿಳುನಾಡಿನಲ್ಲಿ ಬಿಜೆಪಿ ಬಲಗೊಳ್ಳಲಿದೆ ಎಂಬ ನಿಲುವನ್ನು ಅವರು ಹಲವು ಬಾರಿ ವ್ಯಕ್ತಪಡಿಸಿದ್ದರು. ಅವರ ಮುಂದಿನ ನಡೆ ಕುರಿತು ಕುತೂಹಲ ಹೆಚ್ಚಿದ್ದು, ಮಂಗಳವಾರದ ಬೆಳವಣಿಗೆಗಳು ತಮಿಳುನಾಡು ರಾಜಕೀಯದಲ್ಲಿ ಮಹತ್ವದ ತಿರುವು ನೀಡುವ ಸಾಧ್ಯತೆ ಇದೆ.

### ಆರ್‌ಸಿಬಿ 2ನೇ ಬಾರಿ ಚಾಂಪಿಯನ್

ಬಳಿಕ ರಜತ್ ಪಾಟೀದಾರ್ 15 ರನ್ ಮತ್ತು ಟಿಮ್ ಡೇವಿಡ್ 24 ರನ್‌ಗಳ ಮಹತ್ವದ ಕೊಡುಗೆ ನೀಡಿದರು. ಇನ್ನೊಂದೆಡೆ ವಿರಾಟ್ ಕೊಹ್ಲಿ ಸಂಪೂರ್ಣ ಇನ್ನಿಂಗ್ಸ್‌ನ್ನು ನಿಯಂತ್ರಣದಲ್ಲಿಟ್ಟುಕೊಂಡು ಆಡಿದರು. 42 ಎಸೆತಗಳಲ್ಲಿ 75 ರನ್ ಗಳಿಸಿದ ಅವರು 9 ಬೌಂಡರಿ ಹಾಗೂ 3 ಸಿಕ್ಸರ್‌ಗಳನ್ನು ಸಿಡಿಸಿ ಅಜೇಯರಾಗಿ ಉಳಿದರು. ಅವರ ನಿರ್ಣಾಯಕ ಆಟದ ನೆರವಿನಿಂದ ಆರ್‌ಸಿಬಿ 18 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 161 ರನ್ ಗಳಿಸಿ ಭರ್ಜರಿ ಗೆಲುವು ಸಾಧಿಸಿತು. ಈ ಗೆಲುವಿನೊಂದಿಗೆ ಆರ್‌ಸಿಬಿ ಸತತ ಎರಡನೇ ಬಾರಿ ಐಪಿಎಲ್ ಟ್ರೋಫಿ ಗೆದ್ದ ತಂಡಗಳ ಪಟ್ಟಿಗೆ ಸೇರ್ಪಡೆಯಾಗಿದೆ. ದೇಶ–ವಿದೇಶಗಳಲ್ಲಿರುವ ಆರ್‌ಸಿಬಿ ಅಭಿಮಾನಿಗಳು ಸಂಭ್ರಮಾಚರಣೆಯಲ್ಲಿ ತೊಡಗಿದ್ದು, ತಂಡದ ಈ ಐತಿಹಾಸಿಕ ಸಾಧನೆ ಕ್ರಿಕೆಟ್ ಲೋಕದಲ್ಲಿ ವ್ಯಾಪಕ ಮೆಚ್ಚುಗೆಗೆ ಪಾತ್ರವಾಗಿದೆ.

### ಬಿಂಬಿಸಿದ್ದ ವ್ಯಕ್ತಿ ಬಂಧನ!

ಅವರ ಪತಿ ಗುರುಸ್ವಾಮಪ್ಪ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ನಾಪತ್ತೆ ದೂರು ದಾಖಲಿಸಿದ್ದರು. ಶೋಧ ಕಾರ್ಯಾಚರಣೆಯ ಸಮಯದಲ್ಲಿ, ಮಹಾದೇವಪ್ಪ ಸಕ್ರಿಯವಾಗಿ ಭಾಗವಹಿಸಿದ್ದ. ಈ ಪ್ರದೇಶದಲ್ಲಿ ಚಿರತೆ ಕಾಣಿಸಿಕೊಂಡಿದೆ ಹೀಗಾಗಿ ಮಹಿಳೆ ಚಿರತೆ ದಾಳಿಗೆ ಬಲಿಯಾಗಿರಬಹುದು ಎಂದು ಪದೇ ಪದೇ ಹೇಳುತ್ತಿದ್ದ. ಚಿರತೆಯ ಬಗ್ಗೆ ಅವನು ಪದೇ ಪದೇ ಉಲ್ಲೇಖಿಸಿದ್ದರಿಂದ ತನಿಖಾಧಿಕಾರಿಗಳಲ್ಲಿ ಅನುಮಾನ ಹುಟ್ಟಿತು. ನಂತರ ವಿಚಾರಣೆಗಾಗಿ ಅವನನ್ನು ವಶಕ್ಕೆ ತೆಗೆದುಕೊಳ್ಳಲಾಯಿತು. ಮಹದೇವಪ್ಪ ತಾನು ಹಣಕಾಸಿನ ಒತ್ತಡದಲ್ಲಿದ್ದೆ ಹೀಗಾಗಿ ಆಕೆಯ ಆಭರಣಗಳನ್ನು ಕದಿಯಲು ಮತ್ತು ಸಾಲವನ್ನು ಮರುಪಾವತಿಸಲು ಕೊಲೆ ಮಾಡಿದ್ದಾಗಿ ಒಪ್ಪಿಕೊಂಡಿದ್ದಾನೆ. ಪೊಲೀಸರು ಆರೋಪಿಯಿಂದ 53 ಗ್ರಾಂ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

### ಗರ್ಭಿಣಿ ಪತ್ನಿಗಾಗಿ ಪತಿ ಪ್ರತಿಭಟನೆ

ತುರ್ತಾಗಿ ಕರೆದೊಯ್ಯುತ್ತಿದ್ದ ವ್ಯಕ್ತಿಯೊಬ್ಬರು ಸಿಲುಕಿಕೊಂಡಿದ್ದು, ಗರ್ಭಿಣಿ ಪತ್ನಿಯನ್ನು ಆಸ್ಪತ್ರೆಗೆ ತಲುಪಿಸಲಾಗದೆ ಆ ವ್ಯಕ್ತಿ ನಡುರಸ್ತೆಯಲ್ಲೇ ಕುಳಿತು ಪ್ರತಿಭಟನೆ ನಡೆಸಿದ್ದಾರೆ.

### 15 ಜಿಲ್ಲೆಗಳಲ್ಲಿ ಮಳೆ ಅಬ್ಬರ ಯೆಲ್ಲೋ ಅಲರ್ಟ್

ಜಿಲ್ಲೆಗಳಲ್ಲಿ ಮಳೆಯ ಪ್ರಮಾಣ ಹೆಚ್ಚಾಗುವ ನಿರೀಕ್ಷೆಯಿದ್ದು, ಜೂನ್ 3ರಿಂದ 5ರವರೆಗೆ ಗುಡುಗು, ಸಿಡಿಲು ಮತ್ತು ಬಿರುಗಾಳಿಯೊಂದಿಗೆ ಮಳೆಯಾಗುವ ಸಾಧ್ಯತೆ ಇದೆ. ಜೂನ್ 4ರಿಂದ ಕರಾವಳಿಯಲ್ಲಿ ಮುಂಗಾರು ಚಟುವಟಿಕೆಗಳು ಮತ್ತಷ್ಟು ಚುರುಕುಗೊಳ್ಳಲಿವೆ. ಕೊಡಗು, ಹಾಸನ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಸಂಜೆ ಮತ್ತು ರಾತ್ರಿ ವೇಳೆ ಉತ್ತಮ ಮಳೆಯಾಗುವ ಸಾಧ್ಯತೆ ಇದೆ. ಬೆಳಗಾವಿ, ಹಾವೇರಿ, ಕೊಪ್ಪಳ ಹಾಗೂ ರಾಯಚೂರು ಭಾಗಗಳಲ್ಲೂ ಮಳೆಯ ಮುನ್ಸೂಚನೆ ನೀಡಲಾಗಿದೆ. ಜೂನ್ 8ರ ನಂತರ ರಾಜ್ಯದ ಬಹುತೇಕ ಭಾಗಗಳಲ್ಲಿ ಮಳೆಯ ತೀವ್ರತೆ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆಯಿದ್ದು, ಸಿಡಿಲು ಹಾಗೂ ಬಿರುಗಾಳಿ ಸಂದರ್ಭದಲ್ಲಿ ಸುರಕ್ಷಿತ ಸ್ಥಳಗಳಲ್ಲಿ ಆಶ್ರಯ ಪಡೆಯುವಂತೆ ಹವಾಮಾನ ಇಲಾಖೆ ಸಲಹೆ ನೀಡಿದೆ.

### ಕೇಂದ್ರ ಸರ್ಕಾರ ವಿಫಲ: ಖರ್ಗೆ

ನಿರುದ್ಯೋಗ ಹೆಚ್ಚುತ್ತಿರುವುದು ಸರ್ಕಾರದ ವೈಫಲ್ಯವನ್ನು ತೋರಿಸುತ್ತದೆ ಎಂದು ಖರ್ಗೆ ಹೇಳಿದರು. ವಿರೋಧ ಪಕ್ಷಗಳು ದೇಶದ ಅಭಿವೃದ್ಧಿಗೆ ಸದಾ ಬೆಂಬಲ ನೀಡುತ್ತಿವೆ. ಆದರೆ ಬಿಜೆಪಿ ಸರ್ಕಾರ ತನ್ನ ಚುನಾವಣಾ ಭರವಸೆಗಳನ್ನು ಈಡೇರಿಸಲು ವಿಫಲವಾಗಿದೆ ಎಂದು ಅವರು ಟೀಕಿಸಿದರು. ನರೇಗಾ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ದುರ್ಬಲಗೊಳಿಸಲಾಗಿದ್ದು, ಕೇಂದ್ರ ಸರ್ಕಾರ ಆಡಳಿತದ ಎಲ್ಲ ಕ್ಷೇತ್ರಗಳಲ್ಲೂ ವಿಫಲವಾಗಿದೆ ಎಂದು ಖರ್ಗೆ ಆರೋಪಿಸಿದರು.

### ಜಮೀರ್ ಆಡಿಯೋ ವೈರಲ್–ಭಾರಿ ವಿವಾದ

ಮನೆಯಿಂದ ಕರೆದು ಬಂದು ಓಟ್ ಹಾಕಸೇಡಿ ಎಂದು ಆಡಿಯೋದಲ್ಲಿದೆ. ಈ ಸಂಬಂಧ ಜಮೀರ್ ಖಾನ್ ಇದುವರೆಗೂ ಯಾವುದೇ ಸ್ಪಷ್ಟನೆ ನೀಡಿಲ್ಲ.

### ಬಿಜೆಪಿ ಹೈಕಮಾಂಡ್ ಚರ್ಚೆ

ಆದರೆ ಬಿಜೆಪಿ ಹೈಕಮಾಂಡ್, ಸುಮಲತಾ ಅಂಬರೀಶ್ ಅವರ ರಾಜಕೀಯ ಪ್ರಭಾವ ಹಾಗೂ ಸಂಘಟನಾ ಪಾತ್ರದ ಬಗ್ಗೆ ರಾಜ್ಯ ನಾಯ ಕರಿಂದ ಮಾಹಿತಿ ಪಡೆದಿದೆ ಎನ್ನಲಾಗಿದೆ.

## ಮಾಜಿ ಸಚಿವ ಎನ್.ಮಹೇಶ್ ಹುಟ್ಟುಹಬ್ಬ: ರೋಗಿಗಳಿಗೆ ಹಣ್ಣುಹಂಪಲು ವಿತರಣೆ

**ಚಾಮರಾಜನಗರ:** ಮಾಜಿ ಸಚಿವರು, ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಎನ್.ಮಹೇಶ್ ಅವರ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗದ ವತಿಯಿಂದ ನಗರದ ಸರ್ಕಾರಿ ಜಿಲ್ಲಾಸ್ಪತ್ರೆಯಲ್ಲಿ ಒಳರೋಗಿಗಳಿಗೆ ಹಣ್ಣು–ಹಂಪಲು ವಿತರಿಸಲಾಯಿತು.

ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಬಿವಿಎಸ್ ಜಿಲ್ಲಾ ಸಂಯೋಜಕ ಪರ್ವರಾಜ್ ಮಾತನಾಡಿ, ನಮ್ಮ ನೆಚ್ಚಿನ ನಾಯಕರು, ಮಾರ್ಗದರ್ಶಕರಾದಂತಹ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಮಾಜಿ ಸಚಿವರಾದ ಎನ್.ಮಹೇಶ್ ಅವರ 70ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿಗಳ ಬಳಗದ ವತಿಯಿಂದ ನಗರದ ಜಿಲ್ಲಾಸ್ಪತ್ರೆಯಲ್ಲಿ ಒಳರೋಗಿಗಳಿಗೆ ಹಣ್ಣು–ಹಂಪಲು ವಿತರಿಸಲಾಗಿದೆ. ಅವರಿಗೆ ಭಗವಾನ್ ಬುದ್ಧರಿಂದ ಬಾಬಾಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು, ಎಲ್ಲ ಪೂರ್ವಿಕರ ವತಿಯಿಂದ ಅವರಿಗೆ ಹೆಚ್ಚಿನ ಆರೋಗ್ಯ, ಆಯಸ್ಸು ಕರುಣಿಸಲಿ, ಅವರ ಮುಂದಿನ ರಾಜಕೀಯ ಜೀವನ ಅತ್ಯುತ್ತಮವಾಗಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಎನ್.ಮಹೇಶ್ ಅಭಿಮಾನಿ ಬಳಗದ ನಿವೃತ್ತ ಯೋಧ ಮಹದೇವ ಸ್ವಾಮಿ, ಗ್ರಾ.ಪಂ.ಮಾಜಿ ಸದಸ್ಯ ಶಿವಪ್ರಸಾದ್, ಕೆಲ್ಲಂಬಳ್ಳಿ ಶಿವು, ಮಹದೇವಸ್ವಾಮಿ ಕಲರ್, ಕಲಾವಿದ ಹರೀಶ್, ವೆಂಕಟೇಶ್, ಪ್ರಸನ್ನ, ಜನಾರ್ಧನ್ ರಾಮಸಮುದ್ರ, ಶಿವಮೂರ್ತಿ, ಕೃಷ್ಣಮೂರ್ತಿ, ವೆಂಕಟೇಶ್ ಇತರರು ಭಾಗವಹಿಸಿದ್ದರು.



## ಸಚಿವ ಸತೀಶ್ ಜಾರಕಿಹೊಳಿ ಹುಟ್ಟುಹಬ್ಬ: ಅಭಿಮಾನಿ ಬಳಗದಿಂದ ರಕ್ತದಾನ ಶಿಬಿರ




**ಚಾಮರಾಜನಗರ:** ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿ ಹೊಳಿ ಅವರ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗದ ವತಿಯಿಂದ ನಗರದ ಹೊರವಲಯದಲ್ಲಿರುವ ಯಡಬೆಟ್ಟದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ರಕ್ತನಿಧಿ ಕೇಂದ್ರದಲ್ಲಿ ರಕ್ತದಾನ ಶಿಬಿರ ನಡೆಯಿತು. 20ಕ್ಕೂ ಹೆಚ್ಚು ಮಂದಿ ಯುವಕರು ರಕ್ತದಾನ ಮಾಡಿದರು.

ಕಾರ್ಯಕ್ರಮದ ನೇತೃತ್ವ ವಹಿಸಿದ್ದ ಸತೀಶ್ ಜಾರಕಿಹೊಳಿ ಅಭಿಮಾನಿ ಬಳಗದ ಜುಹಾ ಸುಲ್ತಾನ್ ಮಾತನಾಡಿ, ಸತೀಶ್ ಜಾರಕಿ ಅವರ 64ನೇ ಹುಟ್ಟುಹಬ್ಬದ ಅಂಗವಾಗಿ ರಕ್ತ ದಾನ ಶಿಬಿರವನ್ನು ಅವರ ಅಭಿಮಾನಿ ಬಳಗದ ವತಿಯಿಂದ ಹಮ್ಮಿಕೊಳ್ಳಲಾಗಿದೆ. ಬುದ್ಧ, ಬಸವ, ಅಂಬೇಡ್ಕರ್ ಸಿದ್ಧಾಂತಗಳ ಹಾದಿಯಲ್ಲಿ ಸಾಗುತ್ತಿರುವ ಅವರಿಗೆ ಭಗವಂತ ಹೆಚ್ಚಿನ ಆರೋಗ್ಯ ಆಯಸ್ಸು ಕರುಣಿಸಿ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷರಾಗುವ ಭಾಗ್ಯ ಕರಣಿಸಲಿ ಎಂದು ಆಶಿಸಿದರು.

ಸರಳ, ಸಜ್ಜನಿಕೆ ರಾಜಕಾರಣಿಯಾಗಿದ್ದು, ಎಲ್ಲ ಜಾತಿ, ಧರ್ಮಗಳೊಂದಿಗೆ ಉತ್ತಮ ಬಾಂಧವ್ಯವನ್ನು ಬೆಳಸಿಕೊಂಡಿರುವ ಸತೀಶ್ ಜಾರಕಿಹೊಳಿ ಅವರನ್ನು ಕೆಪಿಸಿಸಿ ಅಧ್ಯಕ್ಷರಾಗಿ ಮಾಡುವ ಜೊತೆಗೆ ಪ್ರಬಲವಾದ ಸಚಿವ ಖಾತೆ ನೀಡಬೇಕು ಆಗ ಸಾಮಾಜಿಕ ನ್ಯಾಯ ದೊರೆತಂತಾಗುತ್ತದೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ದೊಡ್ಡಮಟ್ಟದ ಬೆಳೆಯಲು ಸಾಧ್ಯವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಸತೀಶ್ ಜಾರಕಿ ಅಭಿಮಾನಿ ಬಳಗದ ಮನ್ಸೂರ್, ಸುನೀಲ್, ಜಬಿ,ವಿಷ್ಣು, ಮುತ್ತುರಾಜು, ಯೋಗೇಶ್ವರ, ಸಾಗರ್, ಮಂಜುನಾಯಕ, ಕೆಂಪರಾಜು, ನಾಗೇಂದ್ರ, ಶಿವಶಂಕರ್, ಸ್ವಾಮಿ ದೀಪಕ್ ಇತರರು ಹಾಜರಿದ್ದರು.

# ಎತ್ತಿನಗಾಡಿಯಲ್ಲಿ ಶಾಲೆಗೆ ಬಂದ ಜಿಟಿಡಿ

## ಮೈಸೂರಿನ ರಟ್ನಹಳ್ಳಿ ಗ್ರಾಮದಲ್ಲಿ ತಾಲ್ಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ

**ಮೈಸೂರು:** ಶಾಲೆಯ ಮೊದಲ ದಿನದ ಪ್ರಾರಂಭೋತ್ಸವಕ್ಕೆ ಸ್ವತಃ ಎತ್ತಿನಗಾಡಿಯಲ್ಲಿ ಆಗಮಿಸುವ ಮೂಲಕ ಚಿಣ್ಣರ ಗಮನ ಸೆಳೆಯುವ ಮೂಲಕ ವಿಭಿನ್ನವಾಗಿ ಮಕ್ಕಳನ್ನು ಶಾಸಕ ಜಿ.ಟಿ.ದೇವೇಗೌಡ ಸ್ವಾಗತಿಸಿದರು.




ತಾಲ್ಲೂಕಿನ ರಟ್ನಹಳ್ಳಿ ಗ್ರಾಮದಲ್ಲಿ ತಾಲ್ಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ, ಶಾಲಾ ದಾಖಲಾತಿ ಆಂದೋಲನ, ನೂತನ ಕೊಠಡಿಗಳ ಉದ್ಘಾಟನಾ ಸಮಾರಂಭವನ್ನು ನೆರವೇರಿಸಿ ಮಾತನಾಡಿದರು. ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದವರೇ ಇಂದು ದೊಡ್ಡ ಮಟ್ಟದ ನಾಯಕರಾಗಿ, ಸಮಾಜದಲ್ಲಿ ಗಣ್ಯವ್ಯಕ್ತಿಗಳಾಗಿ ಹೊರ ಹೊಮ್ಮಿದ್ದಾರೆ. ಲಕ್ಷಾಂತರ ರೂಪಾಯಿ ಕೊಟ್ಟು ಖಾಸಗಿ ಶಾಲೆಗಳಿಗೆ ಪ್ರವೇಶ ಕೊಡಿಸುವ ಬದಲಿಗೆ ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು. ಈಗ ಸರ್ಕಾರದಿಂದ ಶಾಲೆಗಳಿಗೆ ಮೂಲಸೌಕರ್ಯಗಳನ್ನು ಒದಗಿಸಿ ಅಭಿವೃದ್ಧಿಗೆ ಆದ್ಯತೆ ನೀಡಿರುವುದರಿಂದ ಹೆಚ್ಚಿನ ಮಕ್ಕಳನ್ನು ಸೇರಿಸಲಾಗುತ್ತಿದೆ ಎಂದರು.

ಸಾಯಿ ಗಾರ್ಮೆಂಟ್ಸ್‌ನ ದೇವರಾಜ ಅರಸ್ ರಟ್ನಗಳ್ಳಿ ಗ್ರಾಮಕ್ಕೆ 50ಲಕ್ಷ ರೂಪಾಯಿ ವೆಚ್ಚದಲ್ಲಿ ನೂತನ ಶಾಲಾ ಕೊಠಡಿಗಳ ನಿರ್ಮಾಣ, ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಿಸಿಕೊಟ್ಟಿದ್ದಾರೆ. ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡುವುದನ್ನು ಸರ್ಕಾರ ನಿಲ್ಲಿಸಿಬಿಟ್ಟಿದೆ. ಹಾಗಾಗಿ ಖಾಸಗಿ ಸಂಸ್ಥೆಗಳ ನೆರವಿನಿಂದ ಶಾಲೆಗಳಿಗೆ ಕುಡಿಯುವ ನೀರಿನ ಘಟಕ ನಿರ್ಮಿಸಿ ಕೊಡಲಾಗುತ್ತಿದೆ ಎಂದರು.

ಸಾಯಿ ಗಾರ್ಮೆಂಟ್ಸ್‌ನ ದೇವರಾಜ ಅರಸ್, ಕವಿತಾ, ಡಿಡಿಪಿಐ ಉದಯ್ ಕುಮಾರ್, ಗುಂಗ್ರಾಲ್ ಛತ್ರ ಗ್ರಾಪಂ ಆಡಳಿತಾಧಿಕಾರಿ ಚಿಕ್ಕಣ್ಣ, ಬಿಇಒ ಪ್ರಕಾಶ್,ಪಿಡಿಒ ಶಿವಣ್ಣ, ಮುಖಂಡರಾದ ಯದುವರ, ಅರುಣ್‌ಕುಮಾರ್ ಗ್ರಾಪಂ ಮಾಜಿ ಸದಸ್ಯರಾದ ರೇವಣ್ಣ, ಮಾದೇವಿ, ರೂಪಾ, ಮಂಜು, ಜಿಲ್ಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಡಿ.ಮಾಲೇಗೌಡ, ಉಪಾಧ್ಯಕ್ಷ ಎಸ್.ರಘು, ತಾಲೂಕು ಅಧ್ಯಕ್ಷೆ ಸುಮತಿ, ಉಪಾಧ್ಯಕ್ಷ ಶಿವಪ್ಪ, ಮುರಳಿಧರ್, ರಘು ಮತ್ತಿತರರು ಹಾಜರಿದ್ದರು. ಗ್ರಾಮದ ಮುಖ್ಯರಸ್ತೆಯಿಂದ ಅಲಂಕೃತ ಎತ್ತಿನ ಗಾಡಿಯಲ್ಲಿ ಮಕ್ಕಳನ್ನು ಶಾಲೆಗೆ ಕರೆತರಲಾಯಿತು. ಪೋಷಕರು ಪೂರ್ಣಕುಂಭ ಕಳಸ ಹೊತ್ತು ಸಾಗಿದರೆ, ಎತ್ತಿನ ಗಾಡಿಯಲ್ಲಿ ಮಕ್ಕಳನ್ನು ಮೆರವಣಿಗೆ ಮೂಲಕ ಕರೆತಂದಾಗ ಶಾಲಾ ಶಿಕ್ಷಕರು ಸ್ವಾಗತಿಸಿ ಬರಮಾಡಿಕೊಂಡರು.



> ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೈಸೂರು ತಾಲ್ಲೂಕು ಮೊದಲ ಸ್ಥಾನ ಪಡೆದಿದೆ. ದುಡಿಯುವ ಕೈಗಳಿಗೆ ಉದ್ಯೋಗ ದೊರೆಯಬೇಕು. ಮಕ್ಕಳಿಗೆ ಬರೀ ಶಿಕ್ಷಣ ಕೊಡಿಸುವುದು ಮುಖ್ಯವಲ್ಲ. ಭವಿಷ್ಯದ ನಾಯಕರಾಗುವ ಮಕ್ಕಳಿಗೆ ಸಂಸ್ಕಾರಯುತ ಶಿಕ್ಷಣ ಕೊಡಿಸಬೇಕು. ಮಕ್ಕಳು ಮನೆಯಲ್ಲೇ ಪೋಷಕರು,ಶಾಲೆಯಲ್ಲಿ ಗುರುಗಳಿಗೆ ಗೌರವ ಕೊಡುವಂರೆ ನೀತಿ ಕಲಿಸಬೇಕು.
>
> ▸▸ **ಜಿ.ಟಿ.ದೇವೇಗೌಡ** ಶಾಸಕ



## ವಿಶ್ವ ಹಾಲು ದಿನ : ಚಾಮುಲ್‌ನಿಂದ ಸರ್ಕಾರಿ ಅಸ್ಪತ್ರೆಯ ಹೆರಿಗೆ ವಿಭಾಗದಲ್ಲಿ ಹಾಲು ವಿತರಣೆ

**ಚಾಮರಾಜನಗರ:** ವಿಶ್ವ ಹಾಲು ದಿನದ ಅಂಗವಾಗಿ ಚಾಮರಾಜನಗರ ಜಿಲ್ಲಾ ಹಾಲು ಒಕ್ಕೂಟದಿಂದ ನಗರದಲ್ಲಿರುವ ಜಿಲ್ಲಾ ಅಸ್ಪತ್ರೆಯ ತಾಯಿ ಮತ್ತು ಮಕ್ಕಳ ವಿಭಾಗದಲ್ಲಿರುವ ಒಳ ರೋಗಿಗಳಿಗೆ ನಂದಿನಿ ಹಾಲಿನ ಪ್ಯಾಕೆಗಳನ್ನು ಚಾಮುಲ್ ನಿರ್ದೇಶಕರಾದ ಎಚ್.ಎಸ್. ಬಸವರಾಜು, ಸದಾಶಿವಮೂರ್ತಿ, ಕಮರವಾಡಿ ರೇವಣ್ಣ ಅವರು ವಿತರಣೆ ಮಾಡಿದರು.



ನಗರದ ಬಿ.ರಾಚಯ್ಯ ಜೋಡಿ ರಸ್ತೆಯಲ್ಲಿರುವ ಜಿಲ್ಲಾ ಅಸ್ಪತ್ರೆಯ ಹೆರಿಗೆ ವಿಭಾಗದ ತಾಯಿ ಮತ್ತು ಮಕ್ಕಳ ಅಸ್ಪತ್ರೆಗೆಯಲ್ಲಿ ವಿವಿಧ ವಾರ್ಡುಗಳಿಗೆ ತೆರಳಿ ನಂದಿನಿ ಡೆಟ್ರಾ ಹಾಲಿನ ಪ್ಯಾಕೆಟ್ ಹಾಗು ಸುವಾಸಿತ ಹಾಲಿನ ಬಾಟಲಿಗಳನ್ನು ನಿರ್ದೇಶಕರು ನೀಡಿ, ವಿಶ್ವ ಹಾಲು ದಿನದ ಶುಭ ಕೋರಿ, ತಾಯಿಂದರಿಗೆ ಹಾಲಿನ ಮಹತ್ವ ಮತ್ತು ನಂದಿನಿ ಹಾಲನ್ನೇ ಬಳಸಿ ಎಂದು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಚಾಮುಲ್ ನಿರ್ದೇಶಕ ಎಚ್.ಎಸ್. ಬಸವರಾಜು, ಚಾಮರಾಜನಗರ ಹಾಲು ಒಕ್ಕೂಟ ಪ್ರತಿ ವರ್ಷ ವಿಶ್ವ ಹಾಲು ದಿನದಂದು ಶಾಲಾ ಮಕ್ಕಳಿಗೆ ಹಾಲು ವಿತರಣೆ ಹಾಗೂ ಸರ್ಕಾರಿ ಅಸ್ಪತ್ರೆಯಲ್ಲಿರುವ ತಾಯಿ ಮತ್ತು ಮಕ್ಕಳಿಗೆ ಹಾಲು ವಿತರಣೆ ಮಾಡುತ್ತಾ ಬಂದಿದೆ. ರೈತರ ಸಂಸ್ಥೆಯಾಗಿರುವ ಚಾಮುಲ್ ಬೆಳವಣ ಗೆಯಿಂದ ಜಿಲ್ಲೆಯ ಅಭಿವೃದ್ಧಿಯಾಗುತ್ತದೆ. ಗುಣಮಟ್ಟದ ಹಾಲು ಗ್ರಾಹಕರಿಗೆ ದೊರೆಯುವ ಜೊತೆಗೆ ಇದರ ಸಂಪೂರ್ಣ ಲಾಭ ನಮ್ಮ ಜಿಲ್ಲೆಯ ರೈತರಿಗೆ ಸೇರುತ್ತದೆ. ಹೀಗಾಗಿ ಪ್ರತಿಯೊಬ್ಬರು ನಂದಿನಿ ಹಾಲು ಬಳಕೆ ಮಾಡಿ ಎಂದು ಮನವಿ ಮಾಡಿದರು.

ಚಾಮುಲ್ ನಿರ್ದೇಶಕರಾದ ಸದಾಶಿವಮೂರ್ತಿ, ರೇವಣ್ಣ, ಜಿಲ್ಲಾ ಸರ್ಜನ್ ಚಿನ್ನಬೋವಿ, ಅಸ್ಪತ್ರೆಯ ಹೆರಿಗೆ ವಿಭಾಗದ ಮುಖ್ಯಸ್ಥ ಡಾ.ಪ್ರದೀಪ್, ಚಾಮುಲ್ ಮಾರುಕಟ್ಟೆ ವಿಭಾಗದ ವ್ಯವಸ್ಥಾಪಕ ಇದ್ದರು.

## ಶಾಸಕ ಸಿ. ಪುಟ್ಟರಂಗಶೆಟ್ಟರಿಗೆ ಸಚಿವ ಸ್ಥಾನ ನೀಡಿ: ಕೈ ವೀರಶೈವ ಲಿಂಗಾಯತ ಮುಖಂಡರ ಒತ್ತಾಯ

**ಚಾಮರಾಜನಗರ:** ಸತತವಾಗಿ ನಾಲ್ಕು ಬಾರಿ ಶಾಸಕರಾಗಿ ಉತ್ತಮ ಸೇವೆ ಸಲ್ಲಿಸುತ್ತಿರುವ ಸರಳ ಸಜ್ಜನಿಕೆ ಶಾಸಕರಾದ ಸಿ. ಪುಟ್ಟರಂಗಶೆಟ್ಟರಿಗೆ ಕಾಂಗ್ರೆಸ್ ವರಿಷ್ಠರು ಸಚಿವ ಸ್ಥಾನ ನೀಡುವ ಮೂಲಕ ಗಡಿ ಜಿಲ್ಲೆ ಚಾಮರಾಜನಗರಕ್ಕೆ ಪ್ರಾತಿನಿಧ್ಯ ಕಲ್ಪಿಸಿಕೊಡಬೇಕೆಂದು ಕಾಂಗ್ರೆಸ್ ವೀರಶೈವ ಲಿಂಗಾಯತ ಮುಖಂಡರು ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅರಕಲವಾಡಿ ಎ.ಎಸ್. ಗುರುಸ್ವಾಮಿ ಒತ್ತಾಯಿಸಿದರು.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಿಕಟ ಪೂರ್ವ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಚಾಮರಾಜನಗರ ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದರು. ಅನೇಕ ಬಾರಿ ಚಾಮರಾಜನಗರಕ್ಕೆ ಭೇಟಿ ನೀಡಿ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಿದ್ದರು. ಅಲ್ಲದೇ ಅವರ ಅವಧಿಯಲ್ಲಿ ಜಿಲ್ಲೆಯು ಹೆಚ್ಚಿನ ಅಭಿವೃದ್ಧಿಯಾಗಿದೆ ಎಂದು ಅಭಿನಂದಿಸಿದರು. ನೂತನ ಮುಖ್ಯಮಂತ್ರಿಗಳಾಗಿ ಆಯ್ಕೆಯಾಗಿರುವ ಡಿ.ಕೆ.ಶಿವಕುಮಾರ್ ಅವರಿಗೂ ಸಹ ಅಭಿನಂದನೆಯನ್ನು ಸಲ್ಲಿಸುತ್ತಾ. ಹಿಂದುಳಿದ ವರ್ಗಗಳಿಗೆ ಸಮಾನ ಪ್ರಾತನಿಧ್ಯ ನೀಡುವ ಜೊತೆಗೆ ಉಪ್ಪಾರ ಜನಾಂಗ ಏಕೈಕ ಶಾಸಕರಾದ ಸಿ.ಪುಟ್ಟರಂಗಶೆಟ್ಟರಿಗೆ ಅವರು ತಮ್ಮ ಸಂಪುಟದಲ್ಲಿ ಮೊದಲ ಹಂತದಲ್ಲಿ ಅವಕಾಶ ಮಾಡಿಕೊಡುವ ಮೂಲಕ ಸಾಮಾಜಿಕ ನ್ಯಾಯವನ್ನು ಪ್ರತಿಪಾದಿಸಬೇಕು ಎಂದು ಒತ್ತಾಯಿಸಿದರು.

ಗೋಷ್ಠಿಯಲ್ಲಿ ಮುಖಂಡರಾದ ಯರಗನಹಳ್ಳಿ ಶಂಭಪ್ಪ, ಬದನಗುಪ್ಪೆ ನಾಗರಾಜಮೂರ್ತಿ, ಎಪಿಎಂಸಿ ಮಾಜಿ ಅಧ್ಯಕ್ಷ ಡಿ. ನಾಗೇಂದ್ರ, ಪಿಎಡಿ ಬ್ಯಾಂಕ್ ನಿರ್ದೇಶಕರಾದ ಬಿಸಲವಾಡಿ ರವಿ, ಬೆಂಡರವಾಡಿ ಬಸುಮರಿ, ಕಾಗಲವಾಡಿ ಬಸವರಾಜು, ಇತರರು ಹಾಜರಿದ್ದರು.

**ಅಭಿಮಾನಿ ಬಳಗ ವತಿಯಿಂದ ಪತ್ರಿಕಾಗೋಷ್ಠಿ**

## ಹೆಚ್‌ಸಿಎಂಗೆ ಡಿಸಿಎಂ ಜೊತೆಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯ

**ಗುಂಡ್ಲುಪೇಟೆ:** ಪಟ್ಟಣದ ಹೊಸ ಪ್ರವಾಸಿ ಮಂದಿರದಲ್ಲಿ ಡಾ.ಹೆಚ್ ಸಿ ಮಹದೇವಪ್ಪ ಅವರ ಅಭಿಮಾನಿ ಬಳಗದಿಂದ ಉಪಮುಖ್ಯಮಂತ್ರಿ ಸ್ಥಾನ ಹಾಗೂ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ಪತ್ರಿಕಾಗೋಷ್ಠಿ ನಡೆಸಲಾಯಿತು.



ಪಟ್ಟಣದ ಹೊರವಲಯದಲ್ಲಿರುವ ಡಾ.ಬಿ ಆರ್ ಅಂಬೇಡ್ಕರ್ ಭವನದಿಂದ ಪ್ರತಿಭಟನೆಕಾರರು ಮೆರವಣಿಗೆ ಹೊರಟು ಹೊಸ ಪ್ರವಾಸಿ ಮಂದಿರದ ವರೆಗೆ ಸಾಗಿಬಂದು ಡಾ. ಹೆಚ್ ಸಿ ಮಹದೇವಪ್ಪ ಅಭಿಮಾನಿ ಬಳಗ ನಂತರ ಪ್ರವಾಸಿ ಮಂದಿರದಲ್ಲಿ ಪತ್ರಿಕಗೋಷ್ಠಿ ನಡೆಸಿದರು.

ನಂತರ ಪತ್ರಿಕಾಗೋಷ್ಠಿ ಯಲ್ಲಿ ಮುಖಂಡ ಮಹೇಶ್ ರಾಘವಾಪುರ ಮಾತನಾಡಿ ಶೋಷಿತ ಸಮುದಾಯದ ಗಟ್ಟಿ ಧ್ವನಿ, ಸಮುದಾಯದ ದೈತ್ಯ ಶಕ್ತಿ, ಚಾಮರಾಜನಗರ ದಿಂದ ಬೀದರ್ ವರೆಗೂ ಡಾ.ಹೆಚ್ ಸಿ ಮಹದೇವಪ್ಪ ಅವರ ಬೆಂಬಲಿಗರಿದ್ದು ಅಭಿಮಾನಿಗಳಿದ್ದು ದಲಿತ ಸಮುದಾಯದ ಪ್ರಬುದ್ಧ ನಾಯಕರಾಗಿರುವ ಹಾಗೂ ಸಂವಿಧಾನದ ಆಶೋತ್ತರಗಳನ್ನು ಮನೆ ಮನೆಗೆ ತಲುಪಿಸಿದ ಮೇರು ನಾಯಕತ್ವವಿರುವ ಹೆಚ್. ಸಿ. ಮಹದೇವಪ್ಪ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನದ ಜೊತೆಗೆ ಸಚಿವ ಸ್ಥಾನ ನೀಡಬೇಕು ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಬಳಿಕ ದಲಿತ ಹೋರಾಟಗಾರರ ನ್ಯಾಯಬದ್ಧ ಮನವಿಗಳನ್ನು ಸಂಪುಟ ಸಭೆಗೆ ತಂದು ಇತ್ಯರ್ಥ ಮಾಡುವ ಪ್ರಾಮಾಣಿಕ ಪ್ರಯತ್ನವನ್ನು ಮಹದೇವಪ್ಪ ಮಾಡಿದ್ದಾರೆ. ಶೋಷಿತ ಸಮಾಜದ ಮೇರು ಧ್ವನಿ ಮೈಸೂರು ಪ್ರಾಂತ್ಯದ ಗಟ್ಟಿ ಧ್ವನಿ ಮಹದೇವಪ್ಪ ನವರಿಗೆ ಹೊಸ ಸಂಪುಟ ಪುನರಾಚನೆಯಲ್ಲಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು

ನಂತರ ಡಾ.ಹೆಚ್ ಸಿ ಮಹದೇವಪ್ಪ ಅಭಿಮಾನಿ ಬಳಗದ ಅಧ್ಯಕ್ಷ ರಾಜೇಂದ್ರ ಮಾತನಾಡಿ ಕಾಂಗ್ರೆಸ್ ದಲಿತ ಮುಖ್ಯ ಮಂತ್ರಿ ಮಾಡಬೇಕಿತ್ತು ಆದರೆ ಅದು ತಪ್ಪುತ್ತಾ ಬಂದಿದೆ ಸಾಕಷ್ಟು ದಲಿತರು ಕಾಂಗ್ರೆಸ್ ಬೆಂಬಲಿಸಿದ್ದು ಡಾ.ಹೆಚ್ ಸಿ ಮಹದೇವಪ್ಪ ದಲಿತರ ಧ್ವನಿಯಾಗಿದ್ದು ಅವರಿಗೆ ಉಪಮುಖ್ಯ ಮಂತ್ರಿ ಜೊತೆಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದರು.

ನಂತರ ಕಬ್ಬಹಳ್ಳಿ ನಂಜುಂಡಸ್ವಾಮಿ ,ಮತ್ತು ಹೆಗ್ಗವಾಡಿ ಕೆಂಪರಾಜು ಮಾತನಾಡಿ ಹೆಚ್ ಸಿ ಮಹದೇವಪ್ಪ ಅವರಿಗೆ ಸಚಿವ ಸ್ಥಾನ ನೀಡದಿದ್ದರೆ ದಲಿತ ಸಮುದಾಯ ಹೋರಾಟ ಮಾಡಬೇಕಾಗುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿ.ಪಂ ಮಾಜಿ ಸದಸ್ಯ ಬೊಮ್ಮಯ್ಯ, ಹೊರೆಯಾಲ ಕರಿಯಯ್ಯ ಪುರಸಭಾ ಮಾಜಿ ಸದಸ್ಯ ಮಲ್ಲರಾಜು, ಅರ್.ಸೋಮಣ್ಣ, ಮುತ್ತಣ್ಣ, ಹಿರಿಕಾಟಿ ಶಿವು, ಕಬ್ಬಳ್ಳಿ ಮಹದೇವು, ,ಮುರುಳಿ ಸೋಮಹಳ್ಳಿ, ಸುನಿಲ್, ಪ್ರಕಾಶ್, ಪಾಳ್ಯ ನಾಗರಾಜು,ಮಂಜು ಚನ್ನವಡೆಯನಪುರ, ಪ್ರದೀಪ್ ರಾಘವಾಪುರ, ಸಿದ್ದರಾಜು ಹೊರೆಯಾಲ, ಎಪಿಎಂಸಿ ಉಪಾಧ್ಯಕ್ಷ ರಾಜು, ಅಗತಗೌಡನಹಳ್ಳಿ ರಾಜು. ಲಕ್ಕೂರು ನಾಗೇಶ್ ಬೆಳವಾಡಿ ರವೀಶ್.ಬಸವರಾಜ್ ಹಾಗೂ ಡಾ.ಹೆಚ್.ಸಿ ಮಹದೇವಪ್ಪ ಅಭಿಮಾನಿ ಬಳಗದ ಮುಖಂಡರು ಮತ್ತಿತರರಿದ್ದರು.

## ಶಾಲಾ ಪ್ರಾರಂಭೋತ್ಸವ; ಸಾರೋಟಿನಲ್ಲಿ ಶಾಲೆಗೆ ಬಂದ ಮಕ್ಕಳು

**ಚಾಮರಾಜನಗರ:** ಜಿಲ್ಲೆಯಾದ್ಯಂತ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ ನಡೆಯುತ್ತಿದ್ದು, ನಗರದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಶಾಲಾ ಪ್ರಾರಂಭೋತ್ಸವ ಅಂಗವಾಗಿ ವಿದ್ಯಾರ್ಥಿಗಳನ್ನು ಸಾರೋಟಿನಲ್ಲಿ ಕರೆತರಲಾಯಿತು.



ನಗರದ ಸತ್ತಿ ರಸ್ತೆಯಲ್ಲಿರುವ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಸಹಯೋಗದಲ್ಲಿ ಆಯೋಜಿಸಿದ್ದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಸಾರೋಟಿನಲ್ಲಿಶಾಲೆಗೆಬರಮಾಡಿಕೊಳ್ಳಲಾಯಿತು. ಬಳಿಕ ಜಿಲ್ಲಾಧಿಕಾರಿ ಶ್ರೀರೂಪಾ ಮತ್ತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮೋನಾರೋತ್ ಅವರು ವಿದ್ಯಾರ್ಥಿಗಳಿಗೆ ಹೂ ಹಾಗೂ ಸಿಹಿ ವಿತರಿಸುವ ಮೂಲಕ ಬರಮಾಡಿಕೊಂಡರು. ಕೆಲವು ವಿದ್ಯಾರ್ಥಿಗಳಿಗೆ ಸಾಂಕೇತಿಕವಾಗಿ ಸಮವಸ್ತ್ರ ಹಾಗೂ ಪಠ್ಯಪುಸ್ತಕಗಳನ್ನು ವಿತರಣೆ ಮಾಡಿದರು.

ಈ ಸಾಲಿನಲ್ಲೂ ಉತ್ತಮ ಫಲಿತಾಂಶ ನೀಡುವ ನಿಟ್ಟಿನಲ್ಲಿ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಶ್ರಮವಹಿಸಬೇಕು. ಸರ್ಕಾರಿ ಶಾಲೆಯ ಮಕ್ಕಳಲ್ಲಿ ಹಲವಾರು ಪ್ರತಿಭೆಗಳು ಇದ್ದು, ಅವರಿಗೆ ಉತ್ತಮ ವೇದಿಕೆಗಳನ್ನು ನಿರ್ಮಾಣ ಮಾಡಿಕೊಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಚಂದ್ರ ಪಾಟೀಲ್, ಬಿಇಓ ಹನುಮಶೆಟ್ಟಿ, ಬಿ.ಆರ್.ಸಿ ರಾಜೀವ್, ನಿವೃತ್ತ ಪ್ರಾಂಶುಪಾಲ ಸೋಮಣ್ಣ ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಹಾಜರಿದ್ದರು.

# ಆದಿವಾಸಿ ಮಹಿಳೆಯನ್ನು ಅಲೆಸುತ್ತಿರುವ ಪುರಸಭೆ ಮುಖ್ಯಾಧಿಕಾರಿ

**ಶಿವಕುಮಾರ ತುಂಬಸೋಗೆ**

ಎಚ್.ಡಿ.ಕೋಟೆ: ಪಟ್ಟಣದ ಪುರಸಭೆಯಲ್ಲಿ ಸಕಾಲಕ್ಕೆ ಸಾರ್ವಜನಿಕರ ಕೆಲಸ ಕಾರ್ಯ ಆಗದೆ, ಪ್ರತಿನಿತ್ಯ ಜನರು ಪುರಸಭೆಗೆ ಅಲೆದು ಸಾಕಾಗಿ ಅಧಿಕಾರಿಗಳ ವಿರುದ್ಧ ಹಿಡಿಶಾಪ ಆಕುವಂತಾಗಿದೆ. ಅದಕ್ಕೆ ತಾಜಾ ಉದಾಹರಣೆ ಎಂದರೆ ಆದಿವಾಸಿ ಮಹಿಳೆಯ ಕಣ್ಣೀರಿನ ಈ ಕಥೆ, ವ್ಯಥೆ..!

ಪುರಸಭೆ ವ್ಯಾಪ್ತಿಯಲ್ಲಿರುವ ಸೈಟ್ ನಂಬರ್ 173, 174 ಹಾಗೂ 175ರಲ್ಲಿ ಉಂಟಾಗಿರುವ ಗೊಂದಲವನ್ನು ಬಗೆಹರಿಸುವ ಸಂಬಂಧ ಮೂರು ವರ್ಷಗಳಿಂದ ಮುಖ್ಯಾಧಿಕಾರಿ ಪಿ.ಸುರೇಶ್ ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿ ಆದಿವಾಸಿ ಸೋಲಿಗ ಜನಾಂಗದ ಮಹಿಳೆ ಮಧುಮಾಲತಿ ಅಳಲು ತೋಡಿಕೊಂಡಿದ್ದಾರೆ.

ಪಟ್ಟಣದ ಹನುಮಂತ ನಗರದಲ್ಲಿರುವ ಸೈಟ್ ನಂಬರ್ 173ಅನ್ನು 1996ರಲ್ಲಿ ನಾಗಮ್ಮ ಖರೀದಿಸಿದ್ದಾರೆ. ಸನಿಹದಲ್ಲಿದ್ದ 174, 175 ಸೈಟುಗಳನ್ನು ಸರಸ್ವತಿ, ಕುಮಾರ ಅವರಿಂದ 2011ರಲ್ಲಿ ವಸಂತಕುಮಾರ್ ಖರೀದಿಸಿದ್ದಾರೆ. ಸೈಟ್ ಗಳ ಸಮೀಪವೇ ಇದ್ದ ರಂಗನಾಯಕ ಕ್ಯಾತೆ ತೆಗೆದ ನಂತರ, ಪ್ರಕರಣ ಎಚ್.ಡಿ.ಕೋಟೆಯ ಸಿವಿಲ್ ನ್ಯಾಯಾಲಯದ ಮೆಟ್ಟಿಲೇ ರಿದೆ. ವಸಂತ ಕುಮಾರ್ ಪರವಾಗಿ ನ್ಯಾಯಾಲಯ ಡಿಕ್ರಿ ಮಾಡಿದೆ.

ಡಿಕ್ರಿ ಆದೇಶ ಉಲ್ಲಂಘಿಸಿ ರಂಗನಾಯಕ ಸೈಟ್ ಸಂಬಂಧ ತಗಾದೆ ತೆಗೆದಿದ್ದಾನೆ. ಇದನ್ನು ಖಂಡಿಸಿ, ಪೊಲೀಸ್ ಠಾಣೆಯಲ್ಲಿ ದೂರು ನೀಡಿದ ನಂತರ ರಂಗನಾಯಕನ ಬಂಧನವಾದಾಗ, ನ್ಯಾಯಾಲಯ ನೀಡಿರುವ ಡಿಕ್ರಿ ಆದೇಶವನ್ನು ಉಲ್ಲಂಘನೆ ಮಾಡುವುದಿಲ್ಲ. ವಾದಿಯ ಸ್ವಾಧೀನಕ್ಕೆ ತೊಂದರೆ ನೀಡುವುದಿಲ್ಲ ಎಂದು ರಂಗನಾಯಕ ವಕೀಲರ ಸಾಕ್ಷಿ ಸಮೇತ 2020ರಲ್ಲಿ ಪ್ರಮಾಣ ಪತ್ರ ಸಲ್ಲಿಸಿದ್ದಾರೆ. 2011ರಲ್ಲಿ ವಸಂತಕುಮಾರ್ ಪತ್ನಿ ಮಧುಮಾಲತಿಗೆ ದಾನಪತ್ರದ ಮೂಲಕ ಎರಡು ಸೈಟುಗಳನ್ನು ನೀಡಿದ್ದಾರೆ. ಅವುಗಳಿಗೆ ಕಂದಾಯ ಕಟ್ಟಿದ್ದಾರೆ. ಖಾತೆ ನಂತರ, ಪ್ರಸ್ತುತ ಮಧು ಮಾಲತಿ ಮತ್ತು ನಾಗಮ್ಮ ಹೆಸರಿನಲ್ಲಿ ಪುರಸಭೆಯಲ್ಲಿ ಇ-ಸ್ವತ್ತು ಹೊಂದಿದ್ದಾರೆ. ಸದರಿ ಸ್ವತ್ತುಗಳನ್ನು ಅಳತೆ ಮಾಡಿ, ಹದ್ದುಬಸ್ತು ಗುರತಿಸಿಕೊಡುವಂತೆ 2023 ಮತ್ತು 2024ರಲ್ಲಿ ವಾರಸು ದಾರರು ಪುರಸಭೆಗೆ ಪತ್ರ ಮುಖೇನ ಮನವಿ ಮಾಡಿದ್ದಾರೆ. ಅರ್ಜಿ ನೀಡಿ ವರ್ಷಗಳೇ ಕಳೆದರೂ ಮುಖ್ಯಾಧಿಕಾರಿ ಸುರೇಶ್ ಸೈಟುಗಳನ್ನು ಗುರುತಿಸಿಲ್ಲ ಎನ್ನಲಾಗುತ್ತಿದೆ.




**ಹದ್ದುಬಸ್ತು ಗುರುತಿಸದೆ ಕಾಲಹರಣ**
**ಮಧುಮಾಲತಿ ಆರೋಪ**

### ಮುಖ್ಯಾಧಿಕಾರಿ ಒತ್ತಡಕ್ಕೆ ಮಣಿದಿರುವ ಶಂಕೆ: ಸೈಟ್ ಮಾಲೀಕರ ಆರೋಪ

ಅರ್ಜಿ ಸಂಬಂಧ ನೆಪ ಮಾತ್ರಕ್ಕೆ ಒಂದೆರಡು ಬಾರಿ ಸ್ಥಳ ಪರಿಶೀಲಿಸಿರುವ ಸುರೇಶ್, ಹದ್ದುಬಸ್ತು ಗುರುತಿಸುತ್ತಿಲ್ಲ. ಈ ಸೈಟುಗಳ ಸಂಬಂಧ ನನಗೆ ಒತ್ತಡವಿದೆ. ರಂಗನಾಯಕ ಅವರಿಗೂ ಸೈಟ್ ಗಳನ್ನು ಹಂಚಿಕೆ ಮಾಡಿಕೊಡಬೇಕಾಗಿದೆ ಎಂದು ಕೆಲವೊಮ್ಮೆ ನನ್ನ ಬಳಿ ಮುಖ್ಯಾಧಿಕಾರಿ ತಿಳಿಸಿದ್ದರು ಎಂಬುದಾಗಿ ವರ್ತಮಾನ ಪತ್ರಿಕೆಗೆ ಮಧುಮಾಲತಿ ತಿಳಿಸಿದ್ದಾರೆ. ಈ ಸಂಬಂಧ ನೀವು ರಂಗನಾಯಕರ ಬಳಿ ಪಂಚಾಯಿತಿ ಮಾಡಿ ಬಗೆಹರಿಸಿಕೊಳ್ಳಿ ಎಂದು ಕೆಲವೊಮ್ಮೆ ನನಗೆ ತಾಕೀತು ಮಾಡಿದ್ದಾರೆ. ದಾಖಲೆಗಳೆಲ್ಲವೂ ನಮ್ಮ ಹೆಸರಿನಲ್ಲಿವೆ. ಮತ್ತೊಬ್ಬರಿಗೆ ಮುಖ್ಯಾಧಿಕಾರಿ ಹೇಗೆ ಹಂಚಿಕೆ ಮಾಡುತ್ತಾರೆ ? ಅಳತೆ ಸಂಬಂಧ ನಾನು ನಿತ್ಯವೂ ಪುರಸಭೆಗೆ ಬರುತ್ತಿದ್ದೇನೆ. ನಾಳೆ ಬನ್ನಿ, ನಾಡಿದ್ದು ಬನ್ನಿ ಎಂಬುದಾಗಿ ಸುರೇಶ್ ಹಾರಿಕೆ ಉತ್ತರ ನೀಡುತ್ತಾರೆ. ಮೂರ್ನಾಲ್ಕು ವರ್ಷಗಳಿಂದ ನಾನು ಅಲೆದು, ಅಲೆದು ಸಾಕಾಗಿದೆ. ನಿತ್ಯ ಪ್ರಯಾಣದಿಂದ ನನ್ನ ಆರೋಗ್ಯವೂ ಹದಗೆಡುತ್ತಿದೆ. ಸಂಬಂಧಪಟ್ಟವರು ನನಗೆ ನ್ಯಾಯಕೊಡಿಸಬೇಕೆಂದು ಮಧುಮಾಲತಿ ಪತ್ರಿಕೆ ಜೊತೆ ತಮ್ಮ ಅಳಲು ತೋಡಿಕೊಂಡಿದ್ದಾರೆ.



ದಿನಂಪ್ರತಿ ಕಚೇರಿಗೆ ಬರುತ್ತಿದ್ದರೂ ಯಾವುದೇ ಕೆಲಸವಾಗದೆ, ಸಮಯ ವ್ಯರ್ಥವಾಗುತ್ತಿದೆ. ಈ ಕುರಿತು ನಿರ್ಲಕ್ಷ್ಯವಹಿಸಿರುವ ಪುರಸಭೆ ಮುಖ್ಯಾಧಿಕಾರಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಅಹಿಂದ ಒಕ್ಕೂಟದೊಂದಿಗೆ ನಗರ ಕೋಶಾಧಿಕಾರಿಗೆ ಮೂರು ತಿಂಗಳ ಹಿಂದೆ ಮನವಿ ಸಲ್ಲಿಸಲಾಗಿದೆ. ಆದಷ್ಟು ಬೇಗ ಸೈಟುಗಳನ್ನು ಅಳತೆ ಮಾಡಿ, ಹದ್ದುಬಸ್ತು ಗುರುತಿಸಿಕೊಡದಿದ್ದರೆ ಪುರಸಭೆ ಮುಂಭಾಗ ಪ್ರತಿಭಟನೆ ನಡೆಸಲಾಗುವುದು.

**ಮಧುಮಾಲತಿ** ಸೈಟುಗಳ ಮಾಲೀಕಿ.

# ರಾಜ್ಯಕ್ಕೆ ಭಗವಂತ ಕರುಣಿಸಿದ ವರ

## ಶಾಸಕ ಇಕ್ಬಾಲ್ ಹುಸೇನ್ ಹೇಳಿಕೆ | ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ವಿಚಾರ

ರಾಮನಗರ: ಡಿ.ಕೆ.ಶಿವಕುಮಾರ್ ಅವರೊಬ್ಬ ಛಲಗಾರ, ಅಭಿವೃದ್ಧಿ ಪರ ರಾಜಕಾರಣಿ, ರಾಜ್ಯದ ಮುಖ್ಯಮಂತ್ರಿಯಾಗುತ್ತಿರುವುದು ರಾಜ್ಯಕ್ಕೆ ಭಗವಂತ ಕರುಣಿಸಿದ ವರ, ಡಿಕೆಶಿ ಮುಖ್ಯಮಂತ್ರಿಗಳಾಗಬೇಕು ಎಂಬುದು ಅನೇಕರ ಕೋರಿಯಾಗಿತ್ತು. ಅವರು ಮುಖ್ಯಮಂತ್ರಿಗಳಾಗುತ್ತಿರುವುದು ಎಲ್ಲಾ ವರ್ಗಗಳ ಜನರಲ್ಲಿ ಸಂತಸ ತುಂಬಿದೆ ಎಂದು ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಹೇಳಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಜ್ಯ ಮತ್ತು ದೇಶದೆಲ್ಲಡೆ ಡಿ.ಕೆ.ಶಿವಕುಮಾರ್ ಅವರ ವರ್ಚಸ್ಸು ಇದೆ. ಸಾಮಾಜಿಕ ಕಳಕಳಿ ಬಗ್ಗೆ ಜನರಲ್ಲಿ ಅರಿವಿದೆ. ಎಲ್ಲಾ ವರ್ಗದ ಜನರ ಏಳಿಗೆಯನ್ನು ಬಯಸುವ ಅತ್ಯುತ್ತಮ ವ್ಯಕ್ತಿ. ವಿಶೇಷವಾಗಿ ಮಹಿಳೆಯರು, ಬಡವರು, ಅಲ್ಪಸಂಖ್ಯಾತರು, ದೀನರು, ದಲಿತರ ಬಗ್ಗೆ ಕಾಳಜಿ ಹೆಚ್ಚು. ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗುತ್ತಿರುವುದು ವೈಯಕ್ತಿಕವಾಗಿ ನನಗೂ ಸಂತಸವಾಗಿದೆ. ಕ್ಷೇತ್ರದ ಅಭಿವೃದ್ಧಿಗೆ ವಿಶೇಷವಾಗಿ ನನಗೆ ಆದ್ಯತೆ ಕೊಟ್ಟಿದ್ದಾರೆ. ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ, ಡಿ.ಕೆ.ಶಿವಕುಮಾರ್ ಅವರು ಮಾರ್ಗದರ್ಶನದಲ್ಲಿ ರಾಮನಗರ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗಾಗಿ 1800 ಕೋಟಿ ರೂ ಅನುದಾನ ಲಭ್ಯವಾಗಿದೆ ಎಂದರು.

**ಡಿ.ಕೆ.ಶಿ ಪದಗ್ರಹಣಕ್ಕೆ ಜಿಲ್ಲೆಯಿಂದ ಕಾರ್ಯಕರ್ತರು ಮತ್ತು ಅಭಿಮಾನಿಗಳು**

ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಪದಗ್ರಹಣ ಸಮಾರಂಭ ಸೀಮಿತ ಮಂದಿಯ ಸಮ್ಮುಖದಲ್ಲಿ ನಡೆಯಲಿದೆ. ಆದರೆ ಜಿಲ್ಲೆಯಿಂದ ಸುಮಾಋು 5 ರಿಂದ 6 ಸಾವಿರ ಮಂದಿ ಅವರಿಗೆ ಶುಭಕೋರಲು ತೆರಳಲಿದ್ದಾರೆ. ಪದಗ್ರಹಣ ಸಮಾರಂಭದಲ್ಲೇ ಶುಭ ಹಾರೈಸಬೇಕೆಂದೇನಿಲ್ಲ. ಅವರು ಹೊರಗೆ ಬಂದ ನಂತರ ಜಿಲ್ಲೆಯಿಂದ ತೆರಳಿದ ಎಲ್ಲರು ಅವರಿಗೆ ಶುಭ ಹಾರೈಸಲಿದ್ದಾರೆ ಎಂದರು.



### ಅಭಿವೃದ್ಧಿಯ ಮುಂದಿನ ಭಾಗ ಆರಂಭ!

ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಡಿ.ಕೆ.ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ರಾಮನಗರ ಕ್ಷೇತ್ರದಲ್ಲಿ ಮೂಲ ಸೌಕರ್ಯಗಳನ್ನು ಕಲ್ಪಿಸಲು 1800 ಕೋಟಿ ರೂ ಅನುದಾನ ಲಭ್ಯವಾಗಿದೆ. ಇದೀಗ ಡಿ.ಕೆ.ಶಿವಕುಮಾರ್ ಅವರ ನೇತೃತ್ವದ ಸರ್ಕಾರದ ಅವಧಿಯಲ್ಲಿ ಅಭಿವೃದ್ಧಿ ಪರ್ವ ಮುಂದುವರೆಯಲಿದೆ ಎಂದರು.

ಕಳೆದ ಮೂರು ವರ್ಷಗಳ ಕಾಂಗ್ರೆಸ್ ಆಡಳಿತದ ಸರ್ಕಾರದಲ್ಲಿ ರಾಮನಗರ ನಗರಕ್ಕೆ 24*7 ಕುಡಿಯುವ ನೀರಿನ ವ್ಯವಸ್ಥೆ, 290 ಕೋಟಿ ರೂ ವೆಚ್ಚದಲ್ಲಿ ಕೈಲಾಂಚ ಮತ್ತು ಕಸಬಾ ಹೋಬಳಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಮಂಚನಬೆಲೆ ಎಡ ಮತ್ತು ಬಲ ದಂಡೆಗಳಲ್ಲಿ ನೀರು ಹರಿಯಲಾರಂಭಿಸಿದೆ. 2006ರಲ್ಲಿ ಭೂಮಿ ಪೂಜೆಯಾಗಿ 2025ರವರೆಗೆ ಯಾವುದೇ ಬೆಳವಣಿಗೆ ಇಲ್ಲದ ರಾಜೀವ್ ಗಾಂಧಿ ವಿವಿ ಮತ್ತು ಆಸ್ಪತ್ರೆಗಳ ನಿರ್ಮಾಣಕ್ಕೆ ಚಾಲನೆ ಕೊಡಲಾಗಿದೆ. ನಿವೇಶನ ರಹಿತರಿಗೆ ನಿವೇಶನ ವಿತರಿಸಲು 300 ಎಕರೆ ಭೂಮಿಯನ್ನು ಗುರುತಿಸಲಾಗಿದೆ. ಜಿಲ್ಲಾ ಕೇಂದ್ರ ರಾಮನಗರದಲ್ಲಿ ಸುಸಜ್ಜಿತ ಬಸ್ ನಿಲ್ದಾಣಕ್ಕೆ ಸುಮಾರು 2 ಎಕರೆ ಭೂಮಿಯನ್ನು ಗುರುತಿಸಲಾಗಿದೆ. ರಾಮನಗರ ನಗರಸಭಾ ವ್ಯಾಪ್ತಿಯಲ್ಲಿ ಒಳಚರಂಡಿ ವ್ಯವಸ್ಥೆಗೆ ರೂ 300 ಕೋಟಿ ವೆಚ್ಚದ ಕಾಮಗಾರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಬಗರ್ ಹುಕುಂ ಸಾಗುವಳಿದಾರರು ಸಲ್ಲಿಸಿದ ಸುಮಾರು 3000 ಅರ್ಜಿಗಳ ವಿಲೇವಾರಿಗೆ ಕ್ರಮ ಕೈಗೊಂಡಿದ್ದೇನೆ, ಡಿ.ಕೆ.ಶಿವಕುಮಾರ್ ಮತ್ತು ಡಿ.ಕೆ.ಸುರೇಶ್ ಜಿಲ್ಲೆಯ ಅಭಿವೃದ್ಧಿಗೆ ಕನಸಿದೆ. ಅವರ ಕನಸೇ ನಮ್ಮೆಲ್ಲರ ಕನಸು ಸಹ. ಅಭಿವೃದ್ಧಿ ಪರ್ವ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ಮಗದಷ್ಟು ಮುಂದುವರೆಯಲಿದೆ ಎಂದು ಆಶಾಭಾವನೆ ವ್ಯಕ್ತಪಡಿಸಿದರು. ರಾಮನಗರ ನಗರದಲ್ಲಿರುವ ಐಜೂರು ವೃತ್ತ, ಕೆಂಪೇಗೌಡ ವೃತ್ತ ಸೇರಿದಂತೆ ಪ್ರಮುಖ ವೃತ್ತಗಳ ಸೌಂದರ್ಯೀಕರಣಕ್ಕೆ ಚಿಂತನೆ ನಡೆದಿದೆ ಎಂದ ಅವರು ಅರ್ಕಾವತಿ ರಿವರ್ ಫ್ರಂಟ್ ಯೋಜನೆ ಮುಂದುವರೆಯಲಿದೆ. ಉದ್ಯಾನವನ ನಿರ್ಮಾಣ ಕಾರ್ಯ ಆರಂಭವಾಗಲಿದೆ. ಜನವಸತಿ ಪ್ರದೇಶ, ದೇವಾಲಯಗಳು, ದರ್ಗಾಗಳಿಗೆ ಯಾವ ಧಕ್ಕೆಯೂ ಆಗುವುದಿಲ್ಲ ಎಂದು ಅವರು ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಈ ವೇಳೆ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್ ಪ್ರಮುಖರಾದ ರವಿ, ಕೆ.ವಿ.ಪ್ರಸನ್ನ ಕುಮಾರ್ ಮುಂತಾದವರು ಹಾಜರಿದ್ದರು.

## ಜೂ.5ರಿಂದ ಟ್ರಾವಲ್ ಮಾರ್ಟ್ ಉತ್ಸವ



ಮೈಸೂರು: ವಿಜಯನಗರದಲ್ಲಿನ ಐದನೆಯ ಆವೃತ್ತಿಯ ಮೈಸೂರು ಟ್ರಾವಲ್ ಮಾರ್ಟ್ ವಿಜಯನಗರದ ಜಗನ್ನಾಥ ಸೆಂಟರ್ ಫಾರ್ ಆರ್ಟ್ಸ್ ಅಂಡ್ ಕಲ್ಚರ್ ಸಭಾಂಗಣದಲ್ಲಿ ಜೂ.5ರಿಂದ 7ರವರೆಗೆ ಮೈಸೂರು ಟ್ರಾವಲ್ ಮಾರ್ಟ್ ಉತ್ಸವ ಆಯೋಜನೆ ಮಾಡಲಾಗಿದೆ ಎಂದು ಆಯೋಜನಾ ಸಮಿತಿ ಉಪಾಧ್ಯಕ್ಷ ಸಿ. ನಾರಾಯಣಗೌಡ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಮೈಸೂರು ಟ್ರಾವಲ್ಸ್ ಅಸೋಸಿಯೇಶನ್ ವತಿಯಿಂದ ಕೇಂದ್ರ ಪ್ರವಾಸೋದ್ಯಮ ಇಲಾಖೆ, ಕರ್ನಾಟಕ ಪ್ರವಾಸೋದ್ಯಮ ಇಲಾಖೆ, ಮೈಸೂರು ಹೋಟೆಲ್ ಮಾಲೀಕರ ಸಂಘ, ಸ್ಕೂಲ್ ಇಂಟರ್‌ನ್ಯಾಷನಲ್ ಸೇರಿ ವಿವಿಧ ಸಂಘ-ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜಿಆರ್‌ಎಸ್ ಫ್ಯಾಂಟಸಿ ಪಾರ್ಕ್ ಸಹಯೋಗದಲ್ಲಿ ಆಯೋಜಿಸಲಾಗಿದೆ ಎಂದರು. ಜೂ.5ರಂದು ಮಧ್ಯಾಹ್ನ 2.30ಕ್ಕೆ ಕೇಂದ್ರ ಪ್ರವಾಸೋದ್ಯಮ ಸಚಿವರಾದ ಗಜೇಂದ್ರ ಸಿಂಗ್ ಶೆಕಾವತ್ ಉದ್ಘಾಟಿಸುವರು, ಮಾರನೇ ದಿನ ಬೆಳಗ್ಗೆ 10.30ಕ್ಕೆ ಮಾಧ್ಯಮ ಹಾಗೂ ಪ್ರವಾಸೋದ್ಯಮ, ಮೈಸೂರು ವಿಮಾನ ನಿಲ್ದಾಣ ಅಭಿವೃದ್ಧಿ ಕುರಿತ ಚರ್ಚೆ ಹಾಗೂ ಪ್ರಶಸ್ತಿ ಪ್ರದಾನ ನಡೆಯಲಿದೆ. 7 ರಂದು ಸಂಜೆ 5ಕ್ಕೆ ಸಮಾರೋಪ ಸಮಾರಂಭ ನಡೆಯಲಿದೆ. ಇದರೊಂದಿಗೆ ಮೂರು ದಿನಗಳೂ 100ಕ್ಕೂ ಹೆಚ್ಚು ಮಳಿಗೆಗಳು (ಸ್ಟಾಲ್‌ಗಳು) ಬೆಳಿಗ್ಗೆ 10ರಿಂದ ಸಂಜೆ 8ರವರೆಗೂ ಕಾರ್ಯ ನಿರ್ವಹಿಸಲಿವೆ ಎಂದು ಮಾಹಿತಿ ನೀಡಿದರು. ಮೈಸೂರು ಮಾತ್ರವಲ್ಲದೆ ಕೊಡಗು, ಜೈಪುರ, ರಾಜಸ್ಥಾನ, ಕೇರಳ, ಭುವನೇಶ್ವರ್, ಗುಜರಾತ್, ಜಮ್ಮು-ಕಾಶ್ಮೀರ ಸೇರಿದಂತೆ ವಿವಿಧ ಜಿಲ್ಲೆಗಳು ಹಾಗೂ ಹಲವು ಅಂತಾರಾಷ್ಟ್ರೀಯ ಪ್ರವಾಸೋದ್ಯಮಿಗಳು ಎಕ್ಸಿಬಿಟರ್ಸ್ ಆಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ವಿವರಿಸಿದರು. ಮೈಸೂರು ಟ್ರಾವಲ್ಸ್ ಅಸೋಸಿಯೇಶನ್ ಅಧ್ಯಕ್ಷ ಬಿ.ಎಸ್.ಪ್ರಶಾಂತ್, ಸಿ.ಎ. ಜಯಕುಮಾರ್, ಸಮರ್ಥ್ ಜಿ.ವೈದ್ಯ, ಡೇವಿಡ್ ರಾಜ್, ಮಂಜುನಾಥ್, ರವಿಶಾಸ್ತ್ರಿ ಸೇರಿ ಇತರರು ಹಾಜರಿದ್ದರು.

## ನಾಟಕ ನಡೆಸಿಕೊಡಲು ಆಹ್ವಾನ ನೀಡಿದ ಶ್ರೀಗಳು.



ಗುಂಡ್ಲುಪೇಟೆ :-ತಾಲೂಕಿನ ಮೂಡುಗೂರಿನ ಉದ್ಧಾನೇಶ್ವರ ವಿರಕ್ತ ಮಠ ನಿರ್ಮಿಸಿರುವ " ಚಿನ್ಮಯ ಜ್ಞಾನಿ " ಚೆನ್ನಬಸವಣ್ಣ ದಾಸೋಹ ಭವನದ ಲೋಕಾರ್ಪಣೆ ಕಾರ್ಯಕ್ರಮದ ನಿಮಿತ್ತವಾಗಿ ಅಗಸ್ಟ್ 25 ರ ರಾತ್ರಿ , ಪ್ರಭುಲಿಂಗಲೀಲೆ ಅಥವಾ ಅಲ್ಲಮ ಶರಣ ಸಂದರ್ಶನ ಎಂಬ ಪೌರಾಣಿಕ ನಾಟಕ ನಡೆಸಿಕೊಡಲು ; ಬೆಟ್ಟದ ಮಾದಹಳ್ಳಿಯ ಶ್ರೀ ಬಸವೇಶ್ವರ ಕಲಾಸಂಘಕ್ಕೆ ಭೇಟಿಕೊಟ್ಟು ನಾಟಕದ ಮಾಸ್ಟರ್ ಶಾಂತವೀರ ದೇವರು, ಕಲಾವಿದರನ್ನು, ಇಮ್ಮಡಿ ಉದ್ಧಾನ ಸ್ವಾಮಿಗಳು ಆಹ್ವಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಈ ಹಿಂದಿನ ತಲೆಮಾರಿನ ನಮ್ಮ ಗ್ರಾಮಾಂತರ ಪ್ರದೇಶದ ಜನರು ಕಲೆ,ಸಾಹಿತ್ಯ, ನಾಟಕ, ಮುಂತಾದವುಗಳ ಮೂಲಕ ಸಭ್ಯತೆಯನ್ನು ಸುಂದರ ಬದುಕುಕಟ್ಟಿಕೊಳ್ಳಲು ಬೇಕಾದ ಮೌಲ್ಯಗಳನ್ನು ಕಲಿಯುತ್ತಿದ್ದರು. ಇಂದು ಬದಲಾದ ಕಾಲದಲ್ಲಿ ನಮ್ಮ ಗ್ರಾಮಾಂತರ ಕಲೆಗಳನ್ನು ಉಳಿಸಿಕೊಳ್ಳಲು ನಾವು ನಾಟಕಗಳನ್ನು ನೋಡುವ ಅಗತ್ಯವಿದೆ. ನಮ್ಮ ಮೂಡುಗೂರು ಗ್ರಾಮದಲ್ಲಿ ನಿಮ್ಮ ಪ್ರತಿಭೆಯ ಸ್ಪರ್ಶದೊಂದಿಗೆ ನಮ್ಮ ಕಾರ್ಯಕ್ರಮವೂ ಅರ್ಥವತ್ತಾಗಲೆಂದು ಆಶಯ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ವೀರಶೈವ ಮಹಾಸಭಾದ ತಾಲ್ಲೂಕು ನಿರ್ದೇಶಕರು ಗಾಯಕರು ಆದ ಬಿಸಿ, ಮಹದೇವಸ್ವಾಮಿ, ಪ್ರಮುಖ ಕಲಾವಿದರಾರುಗಳಾದ ಮಲ್ಲು, ಷಣ್ಮುಖಸ್ವಾಮಿ,ಸತೀಶ್,ಪ್ರಭುಸ್ವಾಮಿ,ಸಂತೋಷ್,ಕುಮಾರ್,ಶಿವಾನಂದ

## ಪಠ್ಯಪುಸ್ತಕ, ಬ್ಯಾಗ್ ವಿತರಸಿ ಸ್ವಾಗತ



ಮೈಸೂರು: ಬೇಸಿಗೆ ರಜೆಯ ನಂತರ ಇಂದಿನಿಂದ ಹೊಸ ಶೈಕ್ಷಣಿಕ ವರ್ಷ ಅಧಿಕೃತವಾಗಿ ಪ್ರಾರಂಭಗೊಂಡಿದ್ದು, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಕಲಿಕಾ ಹಬ್ಬಕ್ಕೆ ಸಡಗರಕ್ಕೆ ಶಾಸಕ ಕೆ.ಹರೀಶ್ ಗೌಡ ಶೈಕ್ಷಣಿಕ ವರ್ಷದ ಶಾಲಾ ಬ್ಯಾಗ್ ಹಾಗೂ ಪುಸ್ತಕಗಳನ್ನು ವಿತರಿಸಿ ಸ್ವಾಗತಿಸಿದರು.

ಕುಕ್ಕರಹಳ್ಳಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯದವತಿಯಿಂದ ಮೈಸೂರು ದಕ್ಷಿಣ ವಲಯದ ವ್ಯಾಪ್ತಿಯಲ್ಲಿ ತಾಲ್ಲೂಕು ಮಟ್ಟದ ಶಾಲಾ ಪ್ರಾರಂಭೋತ್ಸವ ಮತ್ತು ಮಹಾಪೋಷಕ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಬೇಸಿಗೆ ರಜೆಯನ್ನು ಸಂತೋಷದಿಂದ ಕಳೆದು ಮರಳಿ ಶಾಲೆಗೆ ಬಂದಿದ್ದೀರಿ ಸರ್ಕಾರಿ ಶಾಲೆಗಳಲ್ಲಿ ಯಾವುದೇ ರೀತಿಯ ತಾರತಮ್ಯವಿಲ್ಲದೆ ಎಲ್ಲ ಮಕ್ಕಳಿಗೂ ಸಮಾನ ಮತ್ತು ಗುಣಮಟ್ಟದ ಶಿಕ್ಷಣವನ್ನು ನೀಡಲಾಗುತ್ತಿದೆ. ಪ್ರತಿಯೊಬ್ಬ ಮಗುವಿನ ಅಗತ್ಯಕ್ಕೆ ತಕ್ಕಂತೆ ಶಿಕ್ಷಕರು ಉತ್ತಮ ಬೋಧನೆ ಮಾಡುತ್ತಿದ್ದಾರೆ. ಸಾರ್ವಜನಿಕರು ಮತ್ತು ವಿವಿಧ ಮಹನೀಯರು ಸರ್ಕಾರಿ ಶಾಲೆಗಳಿಗೆ ಉದಾರವಾಗಿ ದಾನ-ದತ್ತಿಗಳನ್ನು ನೀಡುವ ಮೂಲಕ ಶಾಲೆಗಳನ್ನು ಉನ್ನತ ಮಟ್ಟಕ್ಕೆ ಬೆಳೆಸಲು ಕೈಜೋಡಿಸುತ್ತಿದ್ದಾರೆ. ಆದ್ದರಿಂದ ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು ಎಂದು ಹೇಳಿದರು

ಕ್ಷೇತ್ರ ಶಿಕ್ಷಣಾಧಿಕಾರಿ (ಬಿ.ಇ.ಒ) ಕೃಷ್ಣ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಿಪಿಇಒ ವಿಜಯ್ ಕುಮಾರ್, ಸರ್ಕಾರಿ ಪ್ರೌಢ ಶಾಲೆ ಕುಕ್ಕರಳ್ಳಿಯ ಮುಖ್ಯ ಶಿಕ್ಷಕ ಆರ್.ಚಂದ್ರ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕುಕ್ಕರಲ್ಲಿಯ ಮುಖ್ಯ ಶಿಕ್ಷಕ ಎನ್.ವಿಕ್ಟೋರಿಯ, ನಗರ ಕಾರ್ಯದರ್ಶಿ ಸುಧೀರ್, ಟಿ.ಪಿ.ಸುರೇಶ, ಮಾಜಿ ಸೈನಿಕ ವಿಶ್ವನಾಥ್, ಮಲ್ಲಮ್ಮ ಶಶಿ ಪೈ ಮತ್ತಿತರರು ಉಪಸ್ಥಿತರಿದ್ದರು.

## ಬುದ್ಧಿಮಾಂದ್ಯಮಕ್ಕಳಿಗೆ ವಿಶೇಷ ಭೋಜನ



ಗುಂಡ್ಲುಪೇಟೆ: ಪಟ್ಟಣದ ತಾಲೂಕು ಕಚೇರಿ ಹಾಗೂ ಪೃಥ್ವಿ ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಯಲ್ಲಿ ಕೊಳ್ಳೆಗಾಲ ಕ್ಷೇತ್ರದ ಮಾಜಿ ಶಾಸಕ ಹಾಗೂ ಮಾಜಿ ಸಚಿವ ಎನ್ ಮಹೇಶ್ ಹುಟ್ಟುಹಬ್ಬವನ್ನು ಅವರ ಅಭಿಮಾನಿ ಬಳಗದ ವತಿಯಿಂದ ಪಟ್ಟಣದ ಪೃಥ್ವಿ ಬುದ್ದಿಮಾಂದ್ಯ ವಸತಿ ಶಾಲೆಯಲ್ಲಿ ದೇವರ ಮಕ್ಕಳ ಜೊತೆ ಆಚರಣೆ ಮಾಡಿ ಮಕ್ಕಳಿಗೆ ವಿಶೇಷ ಭೋಜನವನ್ನು ಏರ್ಪಡಿಸಿದ್ದರು.

ಈ ಸಂದರ್ಭದಲ್ಲಿ ಬಿಜೆಪಿ ಎಸ್ಸಿ ಮೋರ್ಚಾ ಜಿಲ್ಲಾ ಅಧ್ಯಕ್ಷ ಡಾ ನವೀನ್ ಮೌರ್ಯ ಹಿರಿಯ ಮುಖಂಡ ಅಗತಗೌಡನಹಳ್ಳಿ ಬಸವರಾಜ್, ರೇವಣ್ಣ ಕಬ್ಬಹಳ್ಳಿ, ವಕೀಲ ಮಾದು, ನಾಗರಾಜ್. ಮದ್ದಯ್ಯನಹುಂಡಿ ಸ್ವಾಮಿ ಜೆ. ಶಾಂತಕುಮಾರ್, ಹರೀಶ್, ಶ್ಯಾಮ್. ಅರೇಪುರ, ಮಹೇಶ್.ರೇವಣ್ಣ ಕಣ್ಣೇಗಾಲ.ಹಾಗೂ ಅಭಿಮಾನಿ ಬಳಗದವರಿದ್ದರು.

**ಮುಖಂಡ ಜಿನ್ನಹಳ್ಳಿ ರಾಜನಾಯಕ ಆಗ್ರಹ**

# ತಾಲೂಕಿನ ಅಭಿವೃದ್ಧಿಗೆ ಅನಿಲ್ ಚಿಕ್ಕಮಾದುಗೆ ಸಚಿವ ಸ್ಥಾನ ನೀಡಿ

ಎಚ್.ಡಿ.ಕೋಟೆ: ರಾಜ್ಯದ ಹಿಂದುಳಿದ ತಾಲೂಕಾಗಿರುವ ಹೆಚ್.ಡಿ.ಕೋಟೆಯನ್ನು ಅಭಿವೃದ್ಧಿ ಪಡಿಸುವ ದೃಷ್ಟಿಯಿಂದ, ಮುಂಬರುವ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರದಲ್ಲಿ ಕ್ಷೇತ್ರದ ಶಾಸಕ ಅನಿಲ್ ಚಿಕ್ಕಮಾದುಗೆ ಸಚಿವ ಸ್ಥಾನ ನೀಡಬೇಕೆಂದು ಮಾಜಿ ಶಾಸಕ ದಿ.ಎಸ್.ಚಿಕ್ಕಮಾದು ಅಭಿಮಾನಿಗಳ ಸಂಘದ ಅಧ್ಯಕ್ಷ ಜಿನ್ನಹಳ್ಳಿ ರಾಜನಾಯಕ ಆಗ್ರಹಿಸಿದರು.

ನಂಜುಂಡಪ್ಪ ವರದಿಯಂತೆ ತಾಲೂಕು ಹಿಂದುಳಿದಿದೆ. ಎರಡನೆ ಅವಧಿಗೆ ಶಾಸಕರಾಗಿರುವ ಅನಿಲ್ ಚಿಕ್ಕಮಾದು ಸಾಕಷ್ಟು ಅನುದಾನ ತಂದು ತಾಲೂಕನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುತ್ತಿದ್ದಾರೆ. ಒಂದೊಂದು ಸ್ಥರದಲ್ಲಿ ಒಂದೊಂದು ರೀತಿಯ ಅನುದಾನಗಳ ಲಭ್ಯತೆಯಿದೆ. ಮಂತ್ರಿಯಾದರೆ ಹೆಚ್ಚಿನ ಅನುದಾನ ತರಲು ಸಹಕಾರಿಯಾಗಲಿದೆ ಆದ್ದರಿಂದ ಅನಿಲ್ ಚಿಕ್ಕಮಾದುಗೆ ಮಂತ್ರಿಸ್ಥಾನ ನೀಡಬೇಕೆಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಏಜಾಜ್ ಪಾಷ ಮುಖಾಂತರ ಹೈಕಮಾಂಡ್‌ಗೆ ಮನವಿ ಪತ್ರ ಸಲ್ಲಿಸಲಾಯಿತು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ, ಮಾಜಿ ಶಾಸಕ ದಿ.ಎಸ್. ಚಿಕ್ಕಮಾದು ಅಭಿಮಾನಿ ಬಳಗದ ಪದಾಧಿಕಾರಿಗಳು ಹಾಗೂ ನಾಯಕ ಸಮುದಾಯದ ಮುಖಂಡರು ಭಾಗವಹಿಸಿ, ಹಿಂದುಳಿದ ತಾಲೂಕಿಗೆ ಮಂತ್ರಿ ಬೇಕು, ಅಭಿವೃದ್ಧಿಗೆ ಮಂತ್ರಿ ಬೇಕು ಎಂದು ಘೋಷಣೆಗಳನ್ನು ಕೂಗಿದರು.



ಜಿನ್ನಹಳ್ಳಿ ರಾಜನಾಯಕ ಮಾತನಾಡಿ, ಸಚಿವ ಸಂಪುಟದಲ್ಲಿ ಯುವ ಪೀಳಿಗೆಗೂ ಅದ್ಯತೆ ನೀಡಬೇಕು ಎಂಬ ಇರಾದೆ ಇದೆ. ಅನಿಲ್ ಚಿಕ್ಕಮಾದು ಎರಡು ಬಾರಿ ಆಯ್ಕೆಯಾಗಿ ದಾಖಲೆ ನಿರ್ಮಿಸುವುದರೊಂದಿಗೆ ಅವಳಿ ತಾಲೂಕಿನಲ್ಲಿ ಪಕ್ಷ ಸಂಘಟಿಸುತ್ತಿದ್ದಾರೆ. ಹಳ್ಳಿ, ಹಳ್ಳಿಗೂ ಸುತ್ತಾಡಿರುವ ಅನಿಲ್ ಚಿಕ್ಕಮಾದು ಪಕ್ಷವನ್ನು ತಳಮಟ್ಟದಿಂದ ಬಲಪಡಿಸುತ್ತಿದ್ದಾರೆ. ಪ್ರಬಲ ನಾಯಕ ಸಮುದಾಯದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಐದು ಲಕ್ಷ ಜನಸಂಖ್ಯೆಯನ್ನು ಪ್ರತಿನಿಧಿಸುತ್ತಿದ್ದಾರೆ. ಆದ್ದರಿಂದ, ಸಚಿವ ಸ್ಥಾನ ನೀಡಬೇಕು ಎಂದರು. ಸಂಘದ ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಖಜಾಂಚಿ ದಾಸನಾಯಕ, ಉಪಾಧ್ಯಕ್ಷರಾದ ಬಿ.ಸಿ.ರಾಜು, ಬಾಚೇಗೌಡನಹಳ್ಳಿ ಸಿದ್ದನಾಯಕ, ಸಂಘಟನಾ ಕಾರ್ಯದರ್ಶಿ ಸೋಮಣ್ಣ, ಜವರನಾಯಕ, ತುಂಬಸೋಗೆ ನಾಗರಾಜು, ಇಟ್ನ ಈರನಾಯಕ, ಮಾದಾಪುರ ಮಹೇಶ್ ನಾಯಕ, ತಾ.ಪಂ.ಮಾಜಿ ಸದಸ್ಯ ಟಿ.ಅಂಕನಾಯಕ, ಕೆ. ಬೆಳತ್ತೂರು ಗೋಪಾಲರಾಜ್, ಮಾರನಾಯಕ, ರವಿನಾಯಕ, ಟಿ.ಎಲ್.ಸ್ವಾಮಿ, ಜಯರಾಮ್, ಸಹಕಾರ ವಿಭಾಗದ ಮಹಿಳಾ ಘಟಕದ ತಾಲೂಕು ಅಧ್ಯಕ್ಷೆ ಶಾಂತಿಪುರ ಲೀಲಾವತಿ ಸೇರಿದಂತೆ ಅನೇಕರಿದ್ದರು.

### ನಾಯಕ ಜನಾಂಗಕ್ಕೆ ಅನ್ಯಾಯ

ರಾಜ್ಯದಲ್ಲಿ ಐವತ್ತು ಲಕ್ಷ ಜನಸಂಖ್ಯೆ ಹೊಂದಿರುವ ನಾಯಕ ಸಮುದಾಯ, ಏಳನೆ ಅತೀದೊಡ್ಡ ಜನಸಂಖ್ಯೆಯಾಗಿದೆ. ಕಳೆದ ಭಾರಿ ಬಿಜೆಪಿ ಸರ್ಕಾರ ಸಮುದಾಯದ ಬಿ.ಶ್ರೀರಾಮಲಯ ಅವರನ್ನು ಉಪ ಮುಖ್ಯಮಂತ್ರಿ ಮಾಡುವುದಾಗಿ ಘೋಷಿಸಿ, ಮತಪಡೆದು ಅಧಿಕಾರಕ್ಕೆ ಬಂದ ಮೇಲೆ ಕಡೆಗಣಿಸಿದೆ. ಕಾಂಗ್ರೆಸ್ ಅಲ್ಲಿದ್ದ ಕೆ.ಎನ್.ರಾಜಣ್ಣ, ಬಿ.ನಾಗೇಂದ್ರ ಸ್ಥಾನ ತೆರವಾದಾಗಲೂ ಜನಾಂಗದ ಯಾವೊಬ್ಬರಿಗೂ ಆ ಸ್ಥಾನ ನೀಡಲಿಲ್ಲ. ಇದರಿಂದ ನಾಯಕ ಜನಾಂಗ ರಾಜಕೀಯವಾಗಿ ಹಿಂದೆ ಉಳಿಯಲು ಕಾರಣವಾಗಿದೆ. ಜನಾಂಗದ ಅಭಿವೃದ್ಧಿ ದೃಷ್ಟಿಯಿಂದ ರಾಜಕೀಯ ಪಕ್ಷಗಳು ನಾಯಕ ಜನಾಂಗಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕು ಎಂದರು.

# ಮೈಸೂರಿನಲ್ಲಿ ಸಡಗರದ ಹಾಲುದಿನ

## ಜಾಗೃತಿ ಜಾಥಾ, ನಂದಿನಿ ಉತ್ಪನ್ನಗಳ ಬಳಕೆಗೆ ಕರೆ । ಸಾರೋಟು ಬೈಕ್ ಮೆರವಣಿಗೆ

ಮೈಸೂರು: ಮೈಸೂರಿನಲ್ಲಿ ವಿಶ್ವ ಹಾಲು ದಿನವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.

"ನಮ್ಮ ನಂದಿನಿ ನಮ್ಮ ಹೆಮ್ಮೆ", "ನಂದಿನಿ ಹಾಲು ಬಳಸಿ ರೈತರ ಹಿತ ಕಾಪಾಡಿ", "ಕ್ಷೀರಕ್ರಾಂತಿಯ ಪಿತಾಮಹ ಡಾ. ವರ್ಗೀಸ್ ಕುರಿಯನ್" ಎಂಬ ಘೋಷವಾಕ್ಯಗಳನ್ನೊಳಗೊಂಡ ನೂರಾರು ನಾಮಫಲಕಗಳನ್ನು ಹಿಡಿದು ಸಾರೋಟು ಹಾಗೂ ಬೈಕ್ಗಳ ಮೂಲಕ ಬೃಹತ್ ಮೆರವಣಿಗೆ ನಡೆಸಲಾಯಿತು.

ಆಲನಹಳ್ಳಿ ಬಡಾವಣೆಯಲ್ಲಿರುವ ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ನಿಯಮಿತದ (ಮೈಮುಲ್) ಕಚೇರಿಯಿಂದ ಈ ಜಾಗೃತಿ ಜಾಥಾವನ್ನು ಹಮ್ಮಿಕೊಳ್ಳಲಾಗಿತ್ತು. ಒಕ್ಕೂಟದ ಆಡಳಿತಾಧಿಕಾರಿ ಸಿ. ಪ್ರಸಾದ್ ರೆಡ್ಡಿ ಅವರು ಜಾಥಾಗೆ ಚಾಲನೆ ನೀಡಿದರು. ನಂದಿನಿ ಡೇರಿಯಿಂದ ಹೊರಟ ಮೆರವಣಿಗೆಯು ಬನ್ನೂರು ಮುಖ್ಯರಸ್ತೆ, ಟೆರಿಶಿಯನ್ ಕಾಲೇಜು ವೃತ್ತ, ನೂತನ ಜಿಲ್ಲಾಧಿಕಾರಿ ಕಚೇರಿ ರಸ್ತೆ ಹಾಗೂ ನಜರಬಾದ್ ಪೊಲೀಸ್ ಠಾಣೆ ಮಾರ್ಗವಾಗಿ ಸಾಗಿ ಕುಪ್ಪಣ್ಣ ಪಾರ್ಕ್ನಲ್ಲಿ ಅಂತ್ಯಗೊಂಡಿತು. ಒಟ್ಟು ಏಳು ಸಾರೋಟಗಳಲ್ಲಿ ನಂದಿನಿ ಉತ್ಪನ್ನಗಳ ಭಿತ್ತಿಪತ್ರಗಳನ್ನು ಪ್ರದರ್ಶಿಸುವ ಮೂಲಕ ಹಾಲಿನ ಮಹತ್ವದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಯಿತು. ಅಲ್ಲದೆ, ಈ ಸಾಲಿನ ಪ್ರಮುಖ ಧ್ಯೇಯವಾದ 'ಮಹಿಳಾ ಸಬಲೀಕರಣ'ವನ್ನು ಸಾರುವ ಉದ್ದೇಶದಿಂದ ಮೈಮುಲ್ನ ಸಾವಿರಾರು ಮಂದಿ ಬೈಕ್ ಮೂಲಕವೂ ಜಾಥಾದಲ್ಲಿ ಪಾಲ್ಗೊಂಡು ಜಾಗೃತಿ ಮೂಡಿಸಿದರು.

### ಹಾಲಿನ ಪೌಷ್ಟಿಕಾಂಶ ಹಾಗೂ ನಂದಿನಿಯ ಶುದ್ಧತೆ

ಕಾರ್ಯಕ್ರಮದಲ್ಲಿ ಮಾತನಾಡಿದ ಒಕ್ಕೂಟದ ಆಡಳಿತಾಧಿಕಾರಿ ಸಿ. ಪ್ರಸಾದ್ ರೆಡ್ಡಿ ಅವರು, ವಿಶ್ವಸಂಸ್ಥೆಯ ವತಿಯಿಂದ 2001ರಿಂದಲೇ ವಿಶ್ವದಾದ್ಯಂತ ಹಾಲು ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ ಎಂದು ತಿಳಿಸಿದರು. ಮನುಷ್ಯನ ಆರೋಗ್ಯಕ್ಕೆ ಪೌಷ್ಟಿಕಾಂಶ ಬಹುಮುಖ್ಯವಾಗಿದ್ದು, ಅದು ಹಾಲಿನಿಂದ ಸಮೃದ್ಧವಾಗಿ ದೊರೆಯುತ್ತದೆ. ವ್ಯಕ್ತಿ ಆರೋಗ್ಯವಾಗಿದ್ದಾಗ ಮಾತ್ರ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯ ಎಂಬ ಕಾರಣಕ್ಕಾಗಿ ಪ್ರತಿಯೊಬ್ಬರಲ್ಲೂ ಹಾಲಿನ ಮಹತ್ವದ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದರು. ಕೆಲವು ಖಾಸಗಿ ಸಂಸ್ಥೆಗಳ ಹಾಲಿನಲ್ಲಿ ಕಲಬೆರಕೆ ಆಗುತ್ತಿರುವುದನ್ನು ಪ್ರಸ್ತಾಪಿಸಿದ ಅವರು, ನಂದಿನಿ ಹಾಲಿನಲ್ಲಿ ಶೇಕಡಾ 100ರಷ್ಟು ಶುದ್ಧತೆಯಿದೆ ಎಂದು ಭರವಸೆ ನೀಡಿದರು. ಪ್ರಪಂಚದಲ್ಲಿಯೇ ಹಾಲು ಮೂರನೇ ಪ್ರಮುಖ ಬ್ರಾಂಡ್ ಆಗಿ ಮಹತ್ವ ಪಡೆದಿದ್ದು, ಜಾಗತಿಕ ಮಟ್ಟದಲ್ಲಿ ಅತಿ ಹೆಚ್ಚು ಹಾಲು ಉತ್ಪಾದಿಸುವ ದೇಶಗಳಲ್ಲಿ ಭಾರತ ಮೊದಲ ಸ್ಥಾನದಲ್ಲಿದೆ ಎಂಬುದನ್ನು ಸ್ಮರಿಸಿದರು. ಮೈಮುಲ್ ಇಂಜಿನಿಯರಿಂಗ್ ವಿಭಾಗದ ವ್ಯವಸ್ಥಾಪಕಿ ಗಿರಿಜಾ ಅವರು ಮಾತನಾಡಿ, ನಮ್ಮ ನಂದಿನಿ ನಮ್ಮ ಹೆಮ್ಮೆಯಾಗಿದ್ದು, ಪ್ರತಿಯೊಬ್ಬರೂ ಪ್ರತಿದಿನ ನಂದಿನಿ ಹಾಲನ್ನೇ ಬಳಸುವ ಮೂಲಕ ರೈತರನ್ನು ಬೆಳೆಸಬೇಕು. ಅಲ್ಲದೆ ತಮ್ಮ ಮನೆಗಳ ಕಾರ್ಯಕ್ರಮಗಳಲ್ಲೂ ಇತರರಿಗೆ ನಂದಿನಿ ಉತ್ಪನ್ನಗಳನ್ನೇ ಬಳಸುವಂತೆ ಸಲಹೆ ನೀಡಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಪ್ರಧಾನ ವ್ಯವಸ್ಥಾಪಕ ಜಯಶಂಕರ್, ವ್ಯವಸ್ಥಾಪಕರಾದ ಗಿರಿಜಾ, ಕರಿ ಬಸವರಾಜು, ಎನ್. ಸೌಮ್ಯ, ಬಬಿತಾ, ಉಪ ವ್ಯವಸ್ಥಾಪಕರುಗಳು, ಅಧಿಕಾರಿಗಳು, ನೌಕರರ ಸಂಘದ ಪದಾಧಿಕಾರಿಗಳು ಹಾಗೂ ಎಲ್ಲಾ ಸಿಬ್ಬಂದಿ ಭಾಗವಹಿಸಿದರು.




### ಆರ್.ಸಿ.ಬಿ. ಗೆಲುವಿನಲ್ಲಿ ನಂದಿನಿ

ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ನಿಯಮಿತದ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್. ಸುರೇಶ್ ನಾಯ್ಕ್ ಅವರು ಹಾಲಿನ ಪೌಷ್ಟಿಕತೆಯ ಬಗ್ಗೆ ವಿವರವಾದ ಮಾಹಿತಿ ನೀಡಿದರು. ರೈತರ ಹಿತಾಸಕ್ತಿಯನ್ನು ಕಾಪಾಡುವ ದೃಷ್ಟಿಯಿಂದ ಉತ್ಪಾದನೆಯಾದ ಹಾಲಿನ ಬಳಕೆಯ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತಿದೆ ಎಂದರು. ಹಾಲು ಒಂದು ಸಂಪೂರ್ಣ ಆಹಾರವಾಗಿದ್ದು, ಒಂದೊಂದು ಧಾನ್ಯದಲ್ಲಿ ಒಂದೊಂದು ವಿಧದ ವಿಟಮಿನ್ ಇದ್ದರೆ, ಹಾಲಿನಲ್ಲಿ ದೇಹಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ಪೋಷಕಾಂಶಗಳು ಹಾಗೂ ವಿಟಮಿನ್ಗಳು ಒಟ್ಟಾಗಿ ಸಿಗುತ್ತವೆ ಎಂದು ವಿವರಿಸಿದರು.

ಮೈಸೂರು ಜಿಲ್ಲೆಯಾದ್ಯಂತ ಐದು ಲಕ್ಷದ ಐವತ್ತು ಸಾವಿರ ಜಾನುವಾರುಗಳು ಹಾಲು ಉತ್ಪಾದನೆಯಲ್ಲಿ ತೊಡಗಿಸಿಕೊಂಡಿವೆ. ಗ್ರಾಮಾಂತರ ಪ್ರದೇಶದ ಜನರು ಹಾಲನ್ನು ಸ್ಥಳೀಯವಾಗಿ ಬಳಸಿಕೊಂಡು ಉಳಿದಿದ್ದನ್ನು ಮಾತ್ರ ಮಾರುಕಟ್ಟೆಗೆ ನೀಡುತ್ತಾರೆ, ಆದರೆ ನಗರ ಪ್ರದೇಶದಲ್ಲಿ ಜನಸಂದಣಿ ಹೆಚ್ಚಿರುವುದರಿಂದ ಅಲ್ಲಿ ಹಾಲಿನ ಉತ್ಪಾದನೆ ಮತ್ತು ಬೇಡಿಕೆ ಹೆಚ್ಚಾಗಿದೆ ಎಂದು ಅವರು ಮಾಹಿತಿ ನೀಡಿದರು. ವಿಶೇಷವಾಗಿ, ಆರ್.ಸಿ.ಬಿ. ಕ್ರಿಕೆಟ್ ತಂಡವು ನಂದಿನಿ ಪ್ರಾಯೋಜಕತ್ವವನ್ನು ಪಡೆದುಕೊಂಡ ಬಳಿಕ ಅವರಿಗೆ ಅದೃಷ್ಟ ಒಲಿದು ಬಂದಿದ್ದು, ಆರ್.ಸಿ.ಬಿ. ಗೆಲುವಿನ ಶಕ್ತಿಯ ಹಿಂದೆ ನಂದಿನಿಯ ಬಲವೂ ಇದೆ. ಇದು "ನಮ್ಮ ನಂದಿನಿ ನಮ್ಮ ಹೆಮ್ಮೆ" ಎಂಬ ಮಾತಿಗೆ ಮತ್ತಷ್ಟು ಗೌರವ ತಂದುಕೊಟ್ಟಿದೆ ಎಂದು ಹರ್ಷ ವ್ಯಕ್ತಪಡಿಸಿದರು.

### ಮಹಿಳಾ ಸಬಲೀಕರಣದತ್ತ ದಿಟ್ಟ ಹೆಜ್ಜೆ, ರೈತರ ಬೆಂಬಲ

ಮೈಮುಲ್ ಆಡಳಿತ ವಿಭಾಗದ ಮ್ಯಾನೇಜರ್ ಸೌಮ್ಯ ಅವರು ಮಾತನಾಡಿ, ವಿಶ್ವ ಹಾಲು ದಿನದ ಪ್ರಯುಕ್ತ ಆಯೋಜಿಸಿರುವ ಈ ಬೈಕ್ ಜಾಥಾದ ಮೂಲಕ ಹೆಚ್ಚು ನಂದಿನಿ ಉತ್ಪನ್ನಗಳನ್ನು ಬಳಸುವಂತೆ ಪ್ರೇರೇಪಿಸಲಾಗುತ್ತಿದ್ದು, ಇದರಿಂದ ರೈತರ ಹಿತ ಕಾಪಾಡಿದಂತೆ ಆಗುತ್ತದೆ ಎಂದರು.ಮೈಮುಲ್ ವ್ಯಾಪ್ತಿಯಲ್ಲಿ 300ಕ್ಕೂ ಹೆಚ್ಚು ಮಹಿಳಾ ಸೊಸೈಟಿಗಳು ಕಾರ್ಯನಿರ್ವಹಿಸುತ್ತಿರುವುದು ಮಹಿಳಾ ಸಬಲೀಕರಣಕ್ಕೆ ಅತ್ಯುತ್ತಮ ಉದಾಹರಣೆಯಾ ಗಿದೆ. ಮೈಸೂರು ಡೇರಿಯಲ್ಲೂ ಹೆಚ್ಚಿನ ಸಂಖ್ಯೆ ಯಲ್ಲಿ ಮಹಿಳಾ ಸಿಬ್ಬಂದಿ ಸೇವೆ ಸಲ್ಲಿಸುತ್ತಿದ್ದು, ಸಮಾಜದ ಎಲ್ಲಾ ಕಡೆಗಳಲ್ಲಿಯೂ ಇದೇ ರೀತಿ ಮಹಿಳಾ ಸಬಲೀಕರಣ ಆಗಬೇಕಿದೆ ಎಂದು ಆಶಿಸಿದರು.

## 8ಕ್ಕೆ ಗರ್ಭ ಸಂಸ್ಕಾರ ವಿದ್ಯಾಲಯದ ಪ್ರಥಮ ವಾರ್ಷಿಕೋತ್ಸವ




ಮೈಸೂರು: ಸಮಾಜದಲ್ಲಿ ಗರ್ಭ ಸಂಸ್ಕಾರದ ಮಹತ್ವ ಸಾರುವ ಗರ್ಭಸಂಸ್ಕಾರ ಮಹಾ ವಿದ್ಯಾಲಯದ ಪ್ರಥಮ ವಾರ್ಷಿಕೋತ್ಸವ ಹಾಗೂ ಪದವೀಧರ ದಿನಾಚಣಾ ಕಾರ್ಯಕ್ರಮ ನಗರದ ಜಿಲ್ಲಾ ಪ್ರಕರ್ತರ ಭವನದಲ್ಲಿ ಜರುಗಿತು.

ಈ ವೇಳೆ ಸಂಸ್ಥಾಪಕ ಡಾ.ಎಸ್.ಕಾವ್ಯ ಮಾತನಾಡಿ, ಶ್ರೀಗರ್ಭ ಗರ್ಭಸಂಸ್ಕಾರವು ಸನಾತನ ಪರಂಪರೆಯಿಂದ ಬಂದ ಅಮೂಲ್ಯ ಸಂಸ್ಕಾರವಾಗಿದ್ದು, ಮುಂದಿನ ಪೀಳಿಗೆಯ ಆರೋಗ್ಯಕರ ಹಾಗೂ ಸಂಸ್ಕಾರಯುತ ಬೆಳವಣಿಗೆಗೆ ಇದು ಅತ್ಯಂತ ಅನಿವಾರ್ಯವೆಂದರು. ಗರ್ಭ ಸಂಸ್ಕಾರದ ಮಹತ್ವವನ್ನು ವೈಜ್ಞಾನಿಕ ಹಾಗೂ ಸಂಸ್ಕಾರಯುತ ದೃಷ್ಟಿಕೋನ ವಿವರಿಸಿ, ಗರ್ಭಾವಸ್ಥೆಯಲ್ಲಿಯೇ ಮಗುವಿನ ಸಮಗ್ರ ಬೆಳವಣಿಗೆಗೆ ಸೂಕ್ತ ಮಾರ್ಗದರ್ಶನ ಅಗತ್ಯವೆಂದು ತಿಳಿಸಿದರು.

ಜೂನ್ 8ರಂದು ನೂತನ ಶ್ರೀ ಗರ್ಭ ಗರ್ಭಸಂಸ್ಕಾರ ಸೆಷನ್ ಆರಂಭವಾಗಲಿದ್ದು, ಆಸಕ್ತರು ಹೆಚ್ಚಿನ ಮಾಹಿತಿಗಾಗಿ 8310634618 ಅನ್ನು ಸಂಪರ್ಕಿಸಿ ಪ್ರಯೋಜನವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಕೆ.ಆರ್. ವೆಂಕಟಾಚಲಶೆಟ್ಟಿ, ವಿ.ಸಹನಶ್ರೀ, ಶಿವರತ್ನ, ಸಿ.ಕೆ.ಶ್ರೀಲಕ್ಷ್ಮಿ, ಎಂ.ಡಿ.ಸ್ವಪ್ನ, ರೂಪಾ ಕುಮಟಗಿ, ಡಿ.ಸ್ಪಂದನಾ, ಎಸ್.ಚಂದನ ಗೆ ಗ್ರಾಜ್ಯುಯೇಷನ್ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ಜಿಲ್ಲಾ ಅಯುಷ್ ಅಧಿಕಾರಿ ಡಾ.ಲಕ್ಷ್ಮೀ ನಾರಾಯಣ್, ಶಿವಪ್ರಕಾಶ್ ಗುರೂಜಿ, ಮೈಸೂರು ಯೋಗ ಒಕ್ಕೂಟ ಅಧ್ಯಕ್ಷ ಕೆ.ಜಿ.ದೇವರಾಜು, ಆಧ್ಯಾತ್ಮಿಕ ಚಿಂತಕ ಮುಕುಂದನ್ ಗುರೂಜಿ ಇದ್ದರು.

## 4ರಂದು ನಾಲ್ವಡಿ ಕೃತಿ ಬಿಡುಗಡೆ




ಮೈಸೂರು: ಬೆಂಗಳೂರು ನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಮೈಸೂರು ವಿ.ವಿ ಕುವೆಂಪು ಅಧ್ಯಯನ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಇಲ್ಲಿನ ಮಾನಸಗಂಗೋತ್ರಿಯ ಬಿಎಂಶ್ರೀ ಸಭಾಂಗಣದಲ್ಲಿ ಜೂನ್ 4ರಂದು ಬೆಳಿಗ್ಗೆ 11 ಗಂಟೆಗೆ 'ನಾಲ್ವಡಿ ಕೃಷ್ಣರಾಜ ಒಡೆಯರು ಮತ್ತು ಆಧುನಿಕ ಮೈಸೂರು' ಕೃತಿ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಧ್ಯಕ್ಷ ಎಂ.ಪ್ರಕಾಶಮೂರ್ತಿ ತಿಳಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಹಿತಿ ಬರುಗೂರು ರಾಮಚಂದ್ರಪ್ಪ ಕೃತಿ ಬಿಡುಗಡೆ ಮಾಡುವರು. ವಿಮರ್ಶಕರಾದ ಪ್ರೊ.ಓ.ಎಲ್.ನಾಗಭೂಷಣ ಸ್ವಾಮಿ ಕೃತಿ ಕುರಿತು ಮಾತನಾಡವರು. ಅಧ್ಯಕ್ಷತೆಯನ್ನು ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ.ಎಂ.ನಂಜಯ್ಯ ಹೊಂಗನೂರು ವಹಿಸುವರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಬೆಂಗಳೂರಿನ ವಾಣಿಜ್ಯ ತೆರಿಗೆ ಇಲಾಖೆಯ ಜಂಟಿ ಆಯುಕ್ತ ಸಂಗಮೇಶ ಉಪಾಸೆ ಭಾಗವಹಿ, ಕೃತಿಯ ಲೇಖಕ ಪ್ರೊ. ಎಸ್.ಚಂದ್ರಶೇಖರ್ ಭಾಗವಹಿಸುವರು ಎಂದರು.

'ಈ ಕೃತಿಯಲ್ಲಿ ಸಾಮಾಜಿಕ ನ್ಯಾಯ, ಸೌಹಾರ್ದತೆ ಮತ್ತು ಪ್ರಜೆಗಳ ಹಿತರಕ್ಷಣೆಗಳು ನಾಲ್ವಡಿ ಅವರ ಮುಖ್ಯ ಧ್ಯೆಯವನ್ನು ನಿರೂಪಿಸಲಾಗಿದೆ. ಮಾರ್ಗದರ್ಶಿತ್ವದ ಇತಿಹಾಸ ತಿಳಿಯುವುದು ಎಲ್ಲರ ಕರ್ತವ್ಯ. ಈ ಕಾರಣಕ್ಕಾಗಿಯೇ ಇದೊಂದು ನಮ್ಮ ವಿನೂತನ ಪ್ರಯತ್ನವಾಗಿದೆ' ಎಂದು ತಿಳಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಮಾತನಾಡಿ, 'ನಾಲ್ವಡಿ ಅವರ ವ್ಯಕ್ತಿತ್ವ ಮತ್ತು ಸಾಧನೆಗಳ ಕುರಿತಾಗಿ ಪ್ರಸ್ತುತ ಪ್ರಚಲಿತವಿರುವ ಪ್ರಜಾಪ್ರಭುತ್ವದ ಆಡಳಿತಕ್ಕೆ ಮಾರ್ಗದರ್ಶನ ನೀಡುವಂತಿವೆ. ಈ ಪುಸ್ತಕವು ಕನ್ನಡ ಸಾಹಿತ್ಯದ, ಇತಿಹಾಸದ ವಿದ್ಯಾರ್ಥಿಗಳಿಗೆ ಹಾಗೂ ಆಸಕ್ತ ಓದುಗರಿಗೆ ಒಂದು ಅತ್ಯುತ್ತಮ ಆಕರವಾಗಲಿದೆ' ಎಂದರು. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ.ಎಂ.ನಂಜಯ್ಯ ಹೊಂಗನೂರು ಇದ್ದರು.

### ವಿದ್ಯುತ್ ವ್ಯತ್ಯಯ

ಮೈಸೂರು:– 66/11 ಕೆ.ವಿ ಬನ್ನಿಮಂಟಪ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಕ.ವಿ.ಪ್ರ.ನಿ.ನಿ ವತಿಯಿಂದ 1 ನೇ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿ ಕೆಲಸದ ನಿಮಿತ್ತ ಜೂನ್ 02 ರಂದು ಬೆಳಿಗ್ಗೆ 10:00 ರಿಂದ ಸಂಜೆ 5:30 ಘಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ಅನಿಯಮಿತ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಎಸ್. ಎಸ್ ನಗರ, ಕಾವೇರಿನಗರ, ಸಿದ್ದಿಖಿನಗರ, ಬನ್ನಿಮಂಟಪ 'ಬಿ' ಬಡಾವಣೆ, ಹೈವೆ ವೃತ್ತ, ಮೇದರ್ ಬ್ಲಾಕ್, ಹನುಮಂತನಗರ, ಅಲೀಮ್‌ನಗರ, ಬಾಲ ಭವನ, ಜೆ.ಎಸ್.ಎಸ್ ದಂತ ವೈದ್ಯಕೀಯ ಕಾಲೇಜು, ಸೆಂಟ್ ಜೋಸೆಫ್ ಆಸ್ಪತ್ರೆ, ಲಕ್ಷ್ಮಿ?ಮೇಪುರ, ಸಿದ್ದಲಿಂಗಪುರ, ಕಳಸ್ತವಾಡಿ, ಶ್ಯಾದನಹಳ್ಳಿ, ನಾಗನಹಳ್ಳಿ, ಕೆ.ಆರ್ ಮಿಲ್ ಕಾಲೋನಿ, ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಚಾ.ವಿ.ಸ.ನಿ.ನಿ. ನ.ರಾ. ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೆರೆದ ವಾಹನ ವೇರಿ ಶಾಸಕರ ಸ್ವಾಗತ




ಮೈಸೂರು: ರಾಜ್ಯಾದ್ಯಂತೆ ಎಲ್ಲೆಡೆ ಸರ್ಕಾರಿ ಶಾಲೆಗಳ ಸ್ವಾಗತ ಕಾರ್ಯಕ್ರಮ ವಿಭಿನ್ನವಾಗಿ ನಡೆಯುತ್ತಿರುವ ಹಿನ್ನೆಲೆಯಲ್ಲಿ ಮೈಸೂರಿನಲ್ಲಿ ಶಾಸಕ ಶ್ರೀವತ್ಸ ತೆರೆದ ವಾಹನ ವೇರಿ ಸುತ್ತು ಹಾಕುವ ಮೂಲಕ ಸರ್ಕಾರಿ ಶಾಲೆಗಳನ್ನು ಸ್ವಾಗತಿಸಿದರಲ್ಲದೆ, ಶಾಲೆಗೆ ಮಕ್ಕಳನ್ನು ಸೇರಿಸುವಂತೆ ಕರೆ ನೀಡಿ ಗಮನ ಸೆಳೆದರು.

ಕುವೆಂಪುನಗರದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ಪ್ರಾರಂಭೋತ್ಸವ ಹಾಗೂ ಪೋಷಕರ ಸಭೆಗೆ ತೆರೆದ ವಾಹನ ಪ್ರಚಾರದ ಮೂಲಕ ಚಾಲನೆ ನೀಡಿದರು. ಬಳಿಕ ಮಾತನಾಡಿ, ಸರ್ಕಾರಿ ಶಾಲೆ ಎಂದರೆ ಮೂಗು ಮುರಿಯುವ ಕಾಲ ಈಗ ದೂರವಾಗಿದೆ. ಗುಣಮಟ್ಟದ ಶಿಕ್ಷಣ ಮತ್ತು ಅತ್ಯಾಧುನಿಕ ಸೌಲಭ್ಯಗಳ ಮೂಲಕ ಸರ್ಕಾರಿ ಶಾಲೆಗಳು ಇಂದು ಖಾಸಗಿ ಶಾಲೆಗಳಿಗೆ ಪೈಪೋಟಿ ನೀಡುತ್ತಿವೆ. ಸರ್ಕಾರಿ ಶಾಲೆಯಲ್ಲಿ 2023ರಲ್ಲಿ ಎಸ್.ಎಸ್. ಎಲ್.ಸಿಯಲ್ಲಿ 620 ಅಂಕ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಕೇವಲ 4 ಇತ್ತು. ಇದು ಏರಿಕೆಯಾಗುತ್ತಿದ್ದು, ಗುಣಾತ್ಮಕ ಶಿಕ್ಷಣಕ್ಕೆ ಸರ್ಕಾರಿ ಶಾಲೆಗಳು ಸಹ ಸಾಕ್ಷಿಯಾಗುತ್ತಿದೆ ಎಂದು ಹೇಳಿದರು. ಸೇರಿರಿ ಸೇರಿರಿ ಸರ್ಕಾರಿ ಶಾಲೆಗೆ ಸೇರಿ', 'ವಿದ್ಯೆಯೇ ಜೀವನದ ಆಧಾರ' ಎಂಬ ಫಲಕಗಳನ್ನು ಹಿಡಿದು ವಿದ್ಯಾರ್ಥಿಗಳು ಜಾಗೃತಿ ಮೂಡಿಸಿದರು.

## ಸತೀಶ್ ಜಾರಕಿಹೊಳಿಗೆ ಡಿಸಿಎಂ ಹುದ್ದೆ ನೀಡಿ



ಮೈಸೂರು: ಅಹಿಂದ ವರ್ಗಗಳ ನಾಯಕ ಹಾಗೂ ಮಾಜಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಕೆಪಿಸಿಸಿ ಅಧ್ಯಕ್ಷ ಹಾಗೂ ಡಿಸಿಎಂ ಸ್ಥಾನ ನೀಡಬೇಕು ಎಂದು ವಾಲ್ಮೀಕಿ ನಾಯಕ ಸಂಘಗಳ ಒಕ್ಕೂಟದ ಅಧ್ಯಕ್ಷ ದ್ಯಾವಪ್ಪನಾಯಕ ಒತ್ತಾಯಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸತೀಶ್ ಜಾರಕಿಹೊಳಿ ಅವರು ಆಹಿಂದ ಮತ್ತು ಶೋಷಿತ ಸಮುದಾಯಗಳ ಪರವಾಗಿ ಸುಮಾರು 30 ವರ್ಷಗಳಿಂದ ನಿರಂತರವಾಗಿ ಕೆಲಸ ನಿರ್ವಹಿಸಿಕೊಂಡು ಬರುತ್ತಿದ್ದಾರೆ. ರಾಜಕೀಯ ಕ್ಷೇತ್ರಕ್ಕೆ ಸೀಮಿತವಾಗದೆ, ಸಾಮಾಜಿಕವಾಗಿಯೂ ತಮ್ಮ ಸ್ವಂತ ಹಣದಿಂದ ಹಲವಾರು ತರಬೇತಿ ಕೇಂದ್ರಗಳನ್ನು ಸ್ಥಾಪನೆ ಮಾಡಿ ವಿವಿಧ ರೀತಿಯ ತರಬೇತಿಗಳನ್ನು ನೀಡುವ ಮೂಲಕ ಹಲವಾರು ಯುವಕರಿಗೆ ಉದ್ಯೋಗ ದೊರಕಿಸಿಕೊಡುವುದರಲ್ಲಿ ಯಶಸ್ವಿಯಾಗಿದ್ದಾರೆ. ಹಾಗೂ ರಾಜ್ಯದಲ್ಲಿ ನಿರಂತರವಾಗಿ ಬುದ್ಧ, ಬಸವ, ಅಂಬೇಡ್ಕರ್ ಅನುಯಾಯಿಯಾಗಿ ಕೆಲಸ ನಿರ್ವಹಿಸಿಕೊಂಡು ಬರುತ್ತಿದ್ದು. ರಾಜ್ಯದ ಆಹಿಂದ ವರ್ಗದ ಏಕೈಕ ನಾಯಕರಾಗಿದ್ದಾರೆ ಎಂದರು.

ಬಾಗಲಕೋಟೆ ಹಾಗೂ ಶಿಗ್ಗಾವಿ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮವಹಿಸಿದ್ದಾರೆ. ಹೀಗೆ ನಿರಂತರವಾಗಿ ಶೋಷಿತ ಸಮುದಾಯಗಳ ಪರವಾಗಿ ಕಾರ್ಯ ನಿರ್ವಹಿಸುತ್ತಿರುವ ಸತೀಶ್ ಜಾರಕಿಹೊಳಿರವರಿಗೆ ಕೆಪಿಸಿಸಿ ಅಧ್ಯಕ್ಷರೂ ಹಾಗೂ ಉಪ ಮುಖ್ಯಮಂತ್ರಿ ಸ್ಥಾನ ನೀಡಿದರೇ, ಸಮುದಾಯ ಹಾಗೂ ಪಕ್ಷ ಸಂಘಟನೆಗೂ ಸಹಕಾರಿಯಾಗುತ್ತದೆ.ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ತಿಪ್ಪೂರು ಮಹಾದೇವ್, ವೆಂಕಟೇಶ್ ನಾಯಕ್, ಪುಟ್ಟರಾಜು, ನರಸಿಂಹನಾಯಕ, ಮುತ್ತುರಾಜ್, ಶಿವಣ್ಣ ಹೊಸ ರಾಮೇನಹಳ್ಳಿ, ಸುರೇಶ್ ಕುಮಾರಬೀಡು ಇದ್ದರು.

## ಯತೀಂದ್ರಗೆ ಡಿಸಿಎಂ ಸ್ಥಾನ ಕೊಡಲಿ



ಮೈಸೂರು: ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರ ಡಾ.ಯತೀಂದ್ರ ಸಿದ್ದರಾಮಯ್ಯಗೆ ಉಪಮುಖ್ಯಮಂತ್ರಿ ಹುದ್ದೆಯೊಂದಿಗೆ ಪ್ರಬಲ ಸಚಿವ ಖಾತೆ ನೀಡುವಂತೆ ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಮನವಿ ಮಾಡಿದರು.

8 ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಸುದೀರ್ಘ ಆಡಳಿತ ನಡೆಸಿದ ಸಿದ್ದರಾಮಯ್ಯ ತಮಗೆ ಶಾಸಕರ ಬಲ ಇದೆ ಅಂತ ಗೊತ್ತಿದ್ದರೂ ಹೈಮಾಂಡ್ ಮಾತಿಗೆ ಬದ್ಧರಾಗಿ ರಾಜೀನಾಮೆ ನೀಡಿ ನುಡಿದಂತೆ ನಡೆದುಕೊಂಡಿದ್ದಾರೆ. ತಮಗೆ ಯಾವುದೇ ಸ್ಥಾನಮಾನ ಬೇಡ ಅಂತಲೂ ಹೇಳಿದ್ದಾರೆ. ಆದ್ದರಿಂದ ಯತೀಂದ್ರ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು. ವೈದ್ಯನಾಗಿ ತಮ್ಮ ಪಾಡಿಗೆ ಕೆಲಸ ಮಾಡಿಕೊಂಡಿದ್ದ ಯತೀಂದ್ರ, ಕಾಂಗ್ರೆಸ್ ಪಕ್ಷಕ್ಕಾಗಿ ರಾಜಕೀಯ ಪ್ರವೇಶಿಸಿದರು. ಅಂದಿನಿಂದಲೂ ರಾಜಕೀಯದಲ್ಲಿ ಸಕ್ರೀಯವಾಗಿ ತೊಡಗಿಸಿಕೊಂಡಿದ್ದಾರೆ. ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದಿದ್ದಾರೆ. ಇತ್ತೀಚೆಗೆ ಮುಕ್ತಾಯಗೊಂಡ ಬಾಗಲ ಕೋಟೆ ಮತ್ತು ದಾವಣಗೆರೆ ಉಪಚುನಾವಣೆಯಲ್ಲಿ ಸಮರ್ಥ್ ಶಾಮನೂರು ಮತ್ತು ಉಮೇಶ್ ಮೇಟಿ ಗೆಲುವಿಗೆ ಯತೀಂದ್ರ ಶ್ರಮಿಸಿದ್ದರು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮೈಸೂರು ಚಾಮರಾಜನಗರ ಮತ್ತು ರಾಜ್ಯಾದ್ಯಂತ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಪರ ಭರ್ಜರಿ ಪ್ರಚಾರ ನಡೆಸಿದ್ದರು. ಇದೆಲ್ಲವನ್ನ ಹೈಕಮಾಂಡ್ ಪರಿಗಣಿಸಬೇಕೆಂದರು.

## ಸಮಾಜ ಸುಧಾರಣೆಗೆ ಮಾಧ್ಯಮಗಳ ಪಾತ್ರ ಪ್ರಮುಖ




ಮೈಸೂರು: ಸಮಾಜ ಸುಧಾರಣೆಯಲ್ಲಿ ಮಾಧ್ಯಮಗಳ ಪಾತ್ರ ಪ್ರಮುಖವಾಗಿದ್ದು, ಈ ಪರಂಪರೆ ಹೀಗೆ ಮುಂದುವರೆಯಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್.ಹೊರಹಟ್ಟಿ ಹೇಳಿದರು.

ನಗರದ ಕಲಾಮಂದಿರ ಆವರಣದಲ್ಲಿನ ಕಿರುರಂಗಮಂದಿರದಲ್ಲಿ ಸೋಮವಾರ ಭಾರತೀ ಪ್ರಕಾಶನದಿಂದ ಆಯೋಜಿಸಿದ್ದ ಹಿರಿಯ ಪತ್ರಕರ್ತ ಕೂಡ್ಲಿ ಗುರುರಾಜ ಅವರ ಸಾಧನೆಯ ಶಿಖರ ಕೃತಿ ಬಿಡುಗಡೆ ಮಾಡಿ ಮಾತನಾಡಿದ ಅವರು, ಇಂದು ಕಾಲ ಬದಲಾದಂತೆ ಮಾಧ್ಯಮ ಕ್ಷೇತ್ರವೂ ಬದಲಾಗಿದೆ. ಜತೆಗೆ ರಾಜಕೀಯವು ಬದಲಾಗಿದೆ. ಪ್ರಜಾಪ್ರಭುತ್ವದ ನಾಲ್ಕು ಅಂಗಗಳಲ್ಲಿ ಮಾಧ್ಯಮವೂ ಒಂದು. ಇತರೆ ಮೂರು ಅಂಗಗಳಾದ ಕಾರ್ಯಾಂಗ, ನ್ಯಾಯಾಂಗ ಮತ್ತು ರಾಜಕೀಯ ಕ್ಷೇತ್ರದ ಎಲ್ಲಾ ಕೆಲಸಗಳನ್ನು ಜನರಿಗೆ ತಿಳಿಸುವುದು ಮಾಧ್ಯಮ. ಹಾಗಾಗಿ ಇದರ ಜವಾಬ್ದಾರಿ ಹೆಚ್ಚಾಗಿರುತ್ತದೆ ಎಂದರು.

ಮಾಧ್ಯಮಗಳು ಆಡಳಿತವ ವರ್ಗದ ತಪ್ಪನ್ನು ತೋರಿಸುವ ಮತ್ತು ಪ್ರಶ್ನಿಸುವ ಮೂಲಕ ಆಡಳಿತ ಯಂತ್ರವನ್ನು ಸರಿದಾರಿಗೆ ತರುವ ಕೆಲಸ ಮಾಡಬೇಕು. ಆದರೆ, ಇತ್ತೀಚೆಗೆ ಆ ಸಂಪ್ರದಾಯ ಮಾಯವಾಗಿ, ಹೊಗಳುವುದು, ಆರಾದಿಸುವುದು ಹೆಚ್ಚಾಗಿದೆ. ನಾವು ಹೇಳಬೇಕಿರುವ ಮಾತಿಗಿಂತ, ಬೇರೆ ಮಾತುಗಳೇ ಹೆಚ್ಚು ಸುದ್ದಿಯಾಗುತ್ತಿವೆ. ಇದು ಕಡಿಮೆಯಾಗಬೇಕು ಎಂದರು. ಸಮಾಜದಲ್ಲಿ ಎತ್ತರಕ್ಕೆ ಬೆಳೆದವರ, ಮಾದರಿಯಾಗಿರುವ ವ್ಯಕ್ತಿಗಳ ಪರಿಚಯವನ್ನು ಮುಂದಿನ ತಲೆಮಾರಿಗೆ ತಿಳಿಸಿಕೊಡುವ ಕೆಲಸ ಆಗಬೇಕು. ಇದಕ್ಕೆ ಪೂರಕವಾಗಿ ಪತ್ರಕರ್ತ ಕೂಡ್ಲಿ ಗುರುರಾಜ್ ಅವರು, 70ಕ್ಕೂ ಹೆಚ್ಚು ಜನರ ಜೀವನ ಚಿತ್ರವಣನ್ನು ಸಾಧನೆಯ ಶಿಖರ ಪುಸ್ತಕದಲ್ಲಿ ಕಟ್ಟಿಕೊಟ್ಟಿದ್ದಾರೆ ಎಂದು ಹೇಳಿದರು.

ಲೇಖಕ ಪ್ರಕಾಶ್ ಬಾಬು ಪುಸ್ತಕ ಕುರಿತು ಮಾತನಾಡಿ, ಸುದ್ದಿಮನೆಯೊಳಗಿದ್ದುಕೊಂಡು ಲೇಖಕರಾಗುವುದು ಕಷ್ಟ. ಸುದ್ದಿಮನೆಯ ಚೌಕಟ್ಟು ಮೀರಿ, ಓದುಗ ಕೃತಿ ರಚಿಸುವುದು ಸುಲಭ ಅಲ್ಲ. ಕೂಡ್ಲಿಂ ಗುರುರಾಜ ಅವರು ಲೇಖಕರಾಗಿ ಓದುಗ ಕೃತಿ ನೀಡಿದ್ದಾರೆ. ಕೃತಿಯಲ್ಲಿ 75 ಮಂದಿಯ ವ್ಯಕ್ತಿ ಚಿತ್ರಣವಿದ್ದು, 5 ಭಾಗಗಳಾಗಿ ವಿಭಜಿಸಿದ್ದಾರೆ. ಪ್ರತಿ ವ್ಯಕ್ತಿ ಚಿತ್ರಣವನ್ನು ಸ್ಪಷ್ಟವಾಗಿ ಮತ್ತು ಸಂಕ್ಷಿಪ್ತವಾಗಿ ಕಟ್ಟಿಕೊಟ್ಟಿರುವುದು ಗಮನಾರ್ಹ ಎಂದು ಕೃತಿಯ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಕೆ. ಶಿವಕುಮಾರ್, ಪತ್ರಕರ್ತ ಮದನ್ ಗೌಡ, ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಭಾರತೀ ಪ್ರಕಾಶನದ ಬಿ. ಎನ್. ಶ್ರೀನಿವಾಸ್, ಪತ್ರಕರ್ತ ಕೂಡ್ಲಿ ಗುರುರಾಜ್ ಇದ್ದರು.

## ಸಚಿವ ಸ್ಥಾನಕ್ಕೆ ದಲಿತ ಹೋರಾಟದ ದುಸ್ಥಿತಿ



ಮೈಸೂರು: ಇದೇ ವೇಳೆ ಸಾಕಷ್ಟು ಅಭಿವೃದ್ಧಿ ಕಾರ್ಯ, ಸಾಧನೆ ಮಾಡಿದ್ದರೂ ದಲಿತರು ತಮಗೆ ದಕ್ಕಬೇಕಾದ ಸ್ಥಾನಕ್ಕಾಗಿ ಬೀದಿ ಹೋರಾಟ ನಡೆಸಬೇಕಾಗಿ ಬಂದಿರುವುದು ಬೇಸರದ ಸಂಗತಿ ಎಂದು ಮಾಜಿ ಮೇಯರ್ ಪುರುಷೋತ್ತಮ್ ಎಚ್ಚರಿಸಿದರು.

ನೂತನ ಸಚಿವ ಸಂಪುಟ ರಚನೆ ವೇಳೆ ಈ ಭಾಗದ ಹಿರಿಯ ರಾಜಕಾರಣಿ ಹಾಗೂ ಮಾಜಿ ಸಚಿವ ಡಾ.ಎ.ಸಿ.ಮಹದೇವಪ್ಪ ಸಂಪುಟದಲ್ಲಿ ಉತ್ತಮ ಸ್ಥಾನಕ್ಕಾಗಿ ಅವರಿವರ ಮನೆ ಮುಂದೆ ನಿಲ್ಲುವಂತೆ ಮಾಡಿದಲ್ಲಿ ಈ ಭಾಗದ ದಲಿತರು ಕಾಂಗ್ರೆಸ್‌ಗೆ ಬೆಂಬಲ ಮುಂದುವರಿಸಬೇಕೇ ಬೇಡವೇ ಎಂದು ಪುನರಾಲೋಚಿಸಬೇಕಾಗುತ್ತದೆ.

ಅಶೋಕಪುರಂ ಆದಿ ಕರ್ನಾಟಕ ಮಹಾ ಸಂಸ್ಥೆ ವತಿಯಿಂದ ನಗರದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಾಂಗ್ರೆಸ್ ಪಕ್ಷದಿಂದ ನೂತನ ಸಿಎಂ ಆಗಿ ಡಿ.ಕೆ.ಶಿವಕು ಮಾರ್ ಅಧಿಕಾರ ಸ್ವೀಕರಿಸಲಿದ್ದಾರೆ ಎಂಬ ಸುದ್ದಿ ಬರುತ್ತಿದ್ದಂತೆಯೇ ಹಲವಾರು ಮಂದಿ ಹಲವರ ಮನೆ ಬಾಗಿಲಿಗೆ ಹೋಗಿ ಲಾಬಿ ಮಾಡಲಾರಂಭಿಸಿದ್ದಾರೆ.

ಇದೇ ವೇಳೆ ರಾಜ್ಯದ ನೂತನ ಸಿಎಂ ಆಯ್ಕೆ ವೇಳೆ ಸಿದ್ದರಾಮಯ್ಯ ಅವರ ದಲಿತ ರೊಬ್ಬರ ಹೆಸರು ಪ್ರಸ್ತಾಪಿಸದಿದ್ದುದು ಬೇಸರದ ಸಂಗತಿಯಾಗಿದೆ. ಈ ಭಾಗದಲ್ಲಿ ಮಾತ್ರವಲ್ಲ, ರಾಜ್ಯದಾದ್ಯಂತ ದಲಿತರು ಸದಾ ಸಿದ್ದರಾ ಮಯ್ಯ ಅವರ ಹಿಂದೆಯೇ ಇದ್ದರು. ಹೀಗಿದ್ದರೂ ಇವರು ಏಕೆ ದಲಿತ ಸಿಎಂ ಪರ ನಿಲ್ಲ ಲಿಲ್ಲ, ಕಾಂಗ್ರೆಸ್ ಪಕ್ಷದಲ್ಲಿ ಅತ್ಯುನ್ನತ ಸ್ಥಾನದ ಲ್ಲಿರುವ ಮಲ್ಲಿಕಾರ್ಜುನ ಖರ್ಗೆ ಸಹಾ ಈ ಬಗ್ಗೆ ಏಕೆ ಉರಿರೆತ್ತಲಿಲ್ಲ ಎಂಬ ಪ್ರಶ್ನೆ ಕಾಡುತ್ತಿದೆ ಎಂದು ನುಡಿದರು.

ಈಗಾಗಲೇ ವಿ.ಶ್ರೀನಿವಾಸ ಪ್ರಸಾದ್ ರನ್ನು ತುಳಿದುದಾಗಿದೆ. ಇದೇ ರೀತಿ ಡಾ.ಎಚ್.ಸಿ. ಮಹದೇವಪ್ಪರನ್ನು ಮೂಲೆಗುಂಪು ಮಾಡುವ ಹುನ್ನಾರ ನಡೆದಿರಬಹುದೇ ಎಂದು ಕೇಳಿದರ ಲ್ಲದೆ, ಕಾಂಗ್ರೆಸ್ ಪಕ್ಷ ಅಧಿಕಾರದ ವಿಷಯದಲ್ಲಿ ದಲಿತರನ್ನು ಸದಾ ಮಲತಾಯಿ ಧೋರಣೆ ಯಿಂದ ನೋಡುತ್ತಿದೆ ಎಂದು ಕಿಡಿಕಾರಿದರು. ಮುಖಂಡರಾದ ಸೋಮಯ್ಯ ಮಲೆಯೂರು, ನಾಗರಾಜು ಬಿಲ್ಲಯ್ಯ, ಸುನಿಲ್, ಆರ್.ಸಿ.ಮಹೇಶ್ ಜೋಗಿ, ಸಿದ್ದಸ್ವಾಮಿ, ವಿಷಕಂಠು ಇನ್ನಿತರರು ಇದ್ದರು.

### ರಾಜ್ಯಾಧ್ಯಕ್ಷ ಸಿ.ನಂಜಪ್ಪ ಘೋಷಣೆ

## ಧರ್ಮರಾಜ್ ಮಡಿವಾಳ ಸಂಘದ ಜಿಲ್ಲಾಧ್ಯಕ್ಷ



ಮೈಸೂರು: ನಗರದ ಜಲದರ್ಶಿನಿ ಅತಿಥಿ ಗೃಹದಲ್ಲಿ ನಡೆದ ಸಭೆಯಲ್ಲಿ ರಾಜ್ಯ ಮಡಿವಾಳ ಸಂಘದ ಮೈಸೂರು ಜಿಲ್ಲಾಧ್ಯಕ್ಷರಾಗಿ ಧರ್ಮರಾಜ್ ಅವರನ್ನು ರಾಜ್ಯಾಧ್ಯಕ್ಷ ಸಿ.ನಂಜಪ್ಪ ಘೋಷಣೆ ಮಾಡಿದರು.

ಜಿಲ್ಲೆಯ ಎಲ್ಲ ತಾಲೂಕುಗಳ ಸಂಘದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಭಾಗವಹಿಸಿದ್ದ ಸಭೆಯಲ್ಲಿ ಎಲ್ಲರ ಒಕ್ಕೊರಲ ಅಭಿಪ್ರಾಯದಂತೆ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ರಾಜ್ಯ ಮಡಿವಾಳರ ಸಂಘದ ರಾಜ್ಯದ್ಯಕ್ಷ ಸಿ.ನಂಜಪ್ಪ ಮಾತನಾಡಿ, ಸಮಾಜದ ಸಂಘಟನೆ ದೃಷ್ಟಿಯಿಂದ ಸರ್ವಾನುಮತದಿಂದ ಅವಿರೋಧವಾಗಿ ಧರ್ಮರಾಜ್ ಅವರನ್ನು ಆಯ್ಕೆ ಮಾಡಲಾಗಿದೆ. ಎಲ್ಲ ತಾಲೂಕುಗಳಲ್ಲೂ ಸಮಾಜದ ಸಂಘಟನೆ ಮತ್ತಷ್ಟು ಬಲಪಡಿಸಬೇಕು.ಸಮುದಾಯದವರ ಕಷ್ಟ, ಸುಖಗಳಿಗೆ ಪರಸ್ಪರ ಸ್ಪಂದಿಸಬೇಕು ಎಂದರು.

ಮೈಸೂರು ಜಿಲ್ಲಾ ಮಡಿವಾಳರ ಸಂಘದ ನೂತನ ಅಧ್ಯಕ್ಷ ಕೆ.ಆರ್ ನಗರ ಧರ್ಮರಾಜ್ ಮಾತನಾಡಿ, ಜನಾಂಗಕ್ಕಾಗಿ, ಸಂಘಕ್ಕಾಗಿ ಪ್ರಾಮಾಣಿಕವಾಗಿ ನಾನು ಕೆಲಸ ಮಾಡುತ್ತೇನೆ. ಸಮಾಜವನ್ನು ಮತ್ತಷ್ಟು ಗಟ್ಟಿಗೊಳಿಸಲು ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಬೇಕಿದೆ. ಪ್ರತಿಯೊಬ್ಬರ ಸಹಕಾರ, ಸಲಹೆ, ಸೂಚನೆಗಳು ಮುಖ್ಯವಾಗಿವೆ. ಆದ್ದರಿಂದ, ಪ್ರತಿಯೊಬ್ಬರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬೇಕು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಮಡಿವಾಳರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರಕಾಶ್, ರಾಜ್ಯ ಗೌರವಾಧ್ಯಕ್ಷ ಈರಣ್ಣ, ಉಪಾಧ್ಯಕ್ಷ ರಾಜಣ್ಣ, ಎಸ್ ಸಿ ಹೊರಟ ಸಮಿತಿಯ ರಾಜ್ಯಾಧ್ಯಕ್ಷ ಸಿದ್ದಗಂಗಯ್ಯ, ನಂಜನಗೂಡು ತಾಲೂಕು ಅಧ್ಯಕ್ಷ ಪ್ರಸನ್ನ, ಬಸವರಾಜು, ಎಚ್.ಡಿ. ಕೋಟೆ ತಾಲೂಕು ಅಧ್ಯಕ್ಷ ಎಲೆಹುಡಿ ಚಂದ್ರಶೆಟ್ಟಿ, ಹೇಮಂತ್, ತಿ.ನರಸೀಪುರ ತಾಲೂಕು ಅಧ್ಯಕ್ಷ ಮಹದೇವಸ್ವಾಮಿ, ಅರುಣ್ ಕುಮಾರ್, ಮೈಸೂರು ತಾ ಅಧ್ಯಕ್ಷ ಜಯರಾಮ್, ಮಹೇಶ್, ಮೈಸೂರು ನಗರ ಅಧ್ಯಕ್ಷ ವರುಣ ಮಹದೇವ್, ನಂಜುಂಡಯ್ಯ, ಹುಣಸೂರು ತಾಲೂಕು ಅಧ್ಯಕ್ಷ ಶಂಕರ್, ನಾಗಪ್ಪ ಶೆಟ್ಟಿ, ಸರಗೂರು ತಾಲೂಕು ಅಧ್ಯಕ್ಷ ಧರಣೇಶ್, ವೆಂಕಟೇಶ್, ಪಿರಿಯಾಪಟ್ಟಣ ಅಧ್ಯಕ್ಷ ಮಾದೇಶ್, ವೆಂಕಟೇಶ್, ಸಾಲಿಗ್ರಾಮ ಅಧ್ಯಕ್ಷ ಉಮೇಶ್, ಹರೀಶ್, ಮೈಸೂರು ಜಿಲ್ಲಾ ಜೆಡಿಎಸ್ ಮಹಿಳೆ ಅಧ್ಯಕ್ಷ ದಾಕ್ಷಾಯಿಣಿ, ಮುಖಂಡರಾದ ಸಿದ್ದಪ್ಪಾಜಿ, ರಮೇಶ್ ಕೋಟೆ, ಭೈರ್ಯ ಹರೀಶ್, ಚೌಡ ಶೆಟ್ಟಿ, ಸಣ್ಣ ಸ್ವಾಮಿ, ನಾಗರಾಜ್, ಹಾಗೂ ಮಡಿವಾಳ ಸಮಾಜದ ಅನೇಕ ಮುಖಂಡರು ಇದ್ದರು.

### ಕೆಯುಡಬ್ಲ್ಯುಜೆ ಪ್ರತಿಭಾ ಪುರಸ್ಕಾರ

# ರಾಜಕಾರಣಿಗಳ ಜೊತೆ ಪತ್ರಕರ್ತರಿಗೂ ಸಾಮಾಜಿಕ ಜವಾಬ್ದಾರಿ ಇದೆ: ಬೊಮ್ಮಾಯಿ

**ಬೆಂಗಳೂರು:** ರಾಜಕಾರಣಿ ಹಾಗೂ ಅಧಿಕಾರದಲ್ಲಿರುವವರಿಗೆ ಸಾರ್ವಜನಿಕವಾಗಿರುವ ಜವಾಬ್ದಾರಿ ಎಷ್ಟಿದೆಯೋ ಅಷ್ಟೇ ಜವಾಬ್ದಾರಿ ಪತ್ರಕರ್ತರಿಗೂ ಇದೆ. ನಾವು ತೆಗೆದುಕೊಳ್ಳುವ ತೀರ್ಮಾನ ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ತಾವು ಬರೆಯುವ ವರದಿ ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ನಮ್ಮ ಬುದ್ದಿವಂತಿಕೆ ಸಮಾಜದ ಒಳಿತಿಗೆ ಬಳಕೆ ಆಗಬೇಕು. ಸಮಾಜದಲ್ಲಿನ ದೃಷ್ಕೃತ್ಯ ಮುಚ್ಚುವುದಕ್ಕೆ ಬಳಕೆ ಆಗಬಾರದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.



ಇಂದು ಚಿಕ್ಕಬಳ್ಳಾಪುರದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಏರ್ಪಡಿಸಿದ್ದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ದಿಕ್ಸೂಚಿ ಭಾಷಣ ಮಾಡಿದರು.

ಪತ್ರಕರ್ತರ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಸನ್ಮಾನಿಸುವ ಮೂಲಕ ಪ್ರೋತ್ಸಾಹಿಸುವ ಸದುದ್ದೇಶಿತ ಕೆಲಸವನ್ನು ಮಾಡುತ್ತಿರುವುದು ಅಭಿನಂದನೀಯ. ಅದಕ್ಕಾಗಿ ಕೆಯುಡಬ್ಲ್ಯುಜೆ ಪದಾಧಿಕಾರಿಗಳನ್ನು ಅಭಿನಂದಿಸುತ್ತೇನೆ. ನಾನು ಸಂತೋಷದಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದೇನೆ ಎಂದರು.

ತಾವು ಸಿಎಂ ಆಗಿದ್ದ ಸಂದರ್ಭದಲ್ಲಿ ಜಾಹಿರಾತುಗಳು ಸೇರಿದಂತೆ ಹಲವು ರೀತಿಯಲ್ಲಿ ಸಹಕಾರ ನೀಡಿದ್ದನ್ನು ಸ್ಮರಿಸಿಕೊಂಡರು.

ಒಬ್ಬ ರಾಜಕಾರಣಿ ಅಧಿಕಾರದಲ್ಲಿದ್ದಾಗ ಕರೆಯುವುದು ಬಹಳ ಸಹಜ.ಆದರೆ ಅಧಿಕಾರದಲ್ಲಿ ಇಲ್ಲದಿರುವಾಗ ನನ್ನನ್ನು ನೆನಪು ಮಾಡಿಕೊಂಡು ಕರೆದಿರುವುದು ನಿಮ್ಮದೊಡ್ಡ ಗುಣ. ಇದು ನಿಮ್ಮ ಕೃತಜ್ಞತಾ ಗುಣ. ಬೈಬಲ್‌ನಲ್ಲಿ ಹೇಳುತ್ತಾರೆ ಕೃತಜ್ಞತೆ ಇಲ್ಲದವರು ಮನುಷ್ಯರು ಅಲ್ಲವೇ ಅಲ್ಲ ಎಂದರು.

ಜಾಗತೀಕರಣ, ಖಾಸಗೀಕರಣದ ನಡುವೆ ನಾವು ಅಂತಕರಣವನ್ನು ಮರೆಯುತ್ತಿದ್ದೇವೆ. ಅಂತಕರಣ ಇಲ್ಲದಿರುವ ಮನುಷ್ಯರ ಸಂಬಂಧವೇ ಇರುವುದಿಲ್ಲ. ಅಂತದರಲಿ ತಾವು ಅಂತಕರಣವನ್ನು ಪುನರ್ ಸ್ಥಾಪನೆ ಮಾಡಿದ್ದೀರಿ ಎಂದು ಹೇಳಿದರು.

**ಪ್ರಶ್ನಿಸುವ ಅಧಿಕಾರ:** ಯಾವುದಾದರೂ ಒಂದು ಶಕ್ತಿ ಬೆಳೆಯಬೇಕೆಂದರೆ ಅದನ್ನು ಪ್ರಶ್ನೆ ಮಾಡಲೇಬೇಕು. ನಂಬಿಕೆಗೆ ಯಾವುದೇ ಆಧಾರ ಇಲ್ಲ. ಆದರೆ, ವಿಜ್ಞಾನಕ್ಕೆ ಆಧಾರ ಬೇಕು. ವಿಜ್ಞಾನಕ್ಕೆ ತರ್ಕಬದ್ಧ ಚಿಂತನೆ ಬೇಕಾದರೆ ಹೊಸ ಚಿಂತನೆ ಹುಟ್ಟು ಹಾಕುತ್ತದೆ. ಪ್ರಜಾಪಭುತ್ತದಲ್ಲಿ ಪಶ್ನೆ ಕೇಳುವ ಅಧಿಕಾರ ಕೊಟ್ಟಿರುವುದು ಪತ್ರಕರ್ತರಿಗೆ ನೀವು ಎಷ್ಟು ಅರ್ಥಗರ್ಭವಾದ ಪ್ರಶ್ನೆಗಳನ್ನು ಕೇಳುತ್ತಿರೋ ಅಷ್ಟು ಒಳ್ಳೆಯ ವಿಚಾರಗಳು ಸಮಾಜಕಷ್ಟೇ ಅಲ್ಲದೇ ರಾಜಕಾರಣಕ್ಕೂ ಬರುತ್ತದೆ. ನೀವು ಕೇಳುವ ಪಶ್ನೆ ಸರಳವಾಗಿದ್ದರೆ ಸರಿಯಾದ ಉತ್ತರ ಬರುವುದಿಲ್ಲ. ಪಶ್ನೆ ಕೇಳುವ ಹಕ್ಕು ಪತ್ರಕರ್ತರಿಗಿದೆ ಎಂದರು.

ಪತ್ರಕರ್ತರು ಮತ್ತು ರಾಜಕಾರಣಿಗಳ ನಡುವೆ ಒಳ್ಳೆಯ ಸಂಬಂಧ ಇದ್ದರೆ ಕಳ್ಳರು ಪೊಲೀಸರ ನಡುವಿನ ಸಂಬಂಧ ಇದ್ದಂಗೆ ಆಗಿದೆ. ಎಲ್ಲಿವರೆಗೂ ಕಠಿಣ ಪಶ್ನೆ ಕೇಳುವುದಿಲ್ಲವೋ ಅಲ್ಲಿಯವರೆಗೂ ರಾಜಕಾರಣಿಗಳಿಂದ ಒಳ್ಳೆಯ ಆಡಳಿತ ನಿರೀಕ್ಷೆ ಮಾಡಬೇಡಿ ಎಂದು ಹೇಳಿದರು.

ಆಡಳಿತಗಾರರಿಗೆ ಒಳ್ಳೆಯ ಪಶ್ನೆ ಕೇಳಿದರೆ ಆಡಳಿತಗಾರರಿಗೂ ಉತ್ತಮ ಆಡಳಿತ ನಡೆಸಲು ಅನುಕೂಲವಾಗುತ್ತದೆ. ಎಲ್ಲರ ಮನೆಯಲ್ಲಿಯೂ ಇಡ್ಲಿ ದೋಸೆ ಇದ್ದೇ ಇರುತ್ತದೆ. ಅದರ ಬಗ್ಗೆ ಎಷ್ಟು ದಿನ ಬರೆಯುತ್ತೀರಿ ಎಂದು ಪಶ್ನಿಸಿದರು.

**ಗಂಡ ಹೆಂಡತಿ ಸಂಬಂಧ:** ಈಗ ಡಿಜಿಟಲ್ ಪತ್ತಿಕೋದ್ಯಮ ಬಂದಿದೆ. ಅದರಲ್ಲಿ ಸತ್ಯ ಎಷ್ಟು ಸುಳ್ಳು ಎಷ್ಟು ಅನ್ನುವುದು ಗೊತ್ತಿಲ್ಲ. ರಾಜಕಾರಣಿಗಳಿಗೆ ಪತಕರ್ತರಿಗೆ ಅವಿನಾಭಾವ ಸಂಬಂಧ. ಗಂಡ ಹೆಂಡತಿ ಸಂಬಂಧ ಇದ್ದಹಾಗೆ. ಪತ್ರಿಕೆ ಇಲ್ಲದಿದ್ದರೆ ರಾಜಕಾರಣಿಗಳ ಪರಿಸ್ಥಿತಿ ಏನಾಗುತ್ತಿತ್ತು. ಅವರು ಮಾಡಿರುವ ಕೆಲಸ, ಅವರ ಸರ್ಕಾರಕ್ಕೆ ಬೇಕಾಗಿರುವ ಪ್ರಚಾರ ಸಿಗದಿದ್ದರೆ ರಾಜಕಾರಣಿಗೆ ಯಾವುದೇ ಪ್ರಯೋಜನ ಇಲ್ಲ. ಪತ್ರಿಕೆಗಳಿಗೂ ರಾಜಕಾರಣಿಯ ಸುದ್ದಿ ಬರೆಯದಿದ್ದರೆ ಅವರ ಪತ್ರಿಕೆಯನ್ನೂ ಓದುವುದಿಲ್ಲ. ಇದೊಂದು ರೀತಿ ಗಂಡ ಹೆಂಡತಿ ಸಂಬಂಧ ಇದ್ದಹಾಗೆ ಎಂದರು.

ರಾಜಕಾರಣಿಗೆ ನಿವೃತ್ತಿ ಇಲ್ಲ. ರಾಜಕಾರಣಕ್ಕೆ ಬರಲು ಅರ್ಹತೆಯೂ ಇಲ್ಲ. ಹಾಗೇ ಪತ್ರಕರ್ತರಿಗೆ ಎಲ್ಲಿಯವರೆಗೂ ಬರೆಯುವ ಶಕ್ತಿ ಇರುತ್ತದೆಯೋ ಅವರು ಪತ್ರಕರ್ತರೇ ಆಗಿರುತ್ತಾರೆ. ಸೇವಕರೆ ಜನಪರ ಇರುವ ರಾಜಕಾರಣಿ. ಪತ್ರಕರ್ತರೂ ಅಷ್ಟೇ ಎಲ್ಲಿಯವರೆಗೂ ಬರೆಯುವ ಇಚ್ಚಾಶಕ್ತಿ ಇದೆಯೋ ಅಲ್ಲಿವರೆಗೂ ನಿಮ್ಮ ವೃತ್ತಿ ಮುಂದುವರೆಸಬಹುದು ಎಂದರು.

**ತಾವು ಬರೆಯುವ ವರದಿ:** ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ ಒಂದು ರೀತಿಯಲ್ಲಿ ನೀವೂ ಕೂಡ ರಾಜಕಾರಣಿಗಳು, ನಾವು ಪತ್ರಕರ್ತರು. ನಿಮಗೆ ಏನು ಉತ್ತರ ಬೇಕೊ ಅದನ್ನು ಪಶ್ನೆ ಕೇಳುತ್ತೀರಿ. ನಾವೂ ಬುದ್ದಿವಂತರಿದ್ದೇವೆ. ಪತ್ರಿಕೆಯಲ್ಲಿ ಏನು ಬರಬೇಕೊ ಅದನ್ನು ಹೇಳುತ್ತೇವೆ. ಈ ಬುದ್ಧಿವಂತಿಕೆ ಸಮಾಜದ ಒಳಿತಿಗೆ ಬಳಕೆ ಆಗಬೇಕು. ಸಮಾಜದ ದೃಷ್ಕೃತ ಮುಚ್ಚುವುದಕ್ಕೆ ಬಳಕೆ ಆಗಬಾರದು ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ ಪ್ರತಿ ವರ್ಷ ಮಕ್ಕಳ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಡಾ.ಸುಧಾಕರ್, ಸಂಸದ ಡಾ. ಕೆ. ಸುಧಾಕರ, ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಬೆಂಗಳೂರು ಉತ್ತರ ವಿವಿ ಕುಲಪತಿ ಡಾ. ಬಿ.ಕೆ. ರವಿ, ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ.ಪ್ರಭು, ಕೆಯುಡಬ್ಲ್ಯುಜೆ ಪದಾಧಿಕಾರಿಗಳು, ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಜಿಲ್ಲಾಧ್ಯಕ್ಷ ರವಿಕುಮಾರ್ ಹಿತಿಯ ಪತ್ರಕರ್ತ ಬಿ.ವಿ.ಮಲ್ಲಿಕಾರ್ಜುನಯ್ಯ ಸೇರಿದಂತೆ ಅನೇಕ ಹಿರಿಯ ಪತ್ರಕರ್ತರು ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಪ್ರತಿಭಾನ್ವಿತ ಪತ್ರಕರ್ತರ ಮಕ್ಕಳನ್ನು ಸನ್ಮಾನಿಸಲಾಯಿತು.

# ಅಭಿನಂದನಾ ಸಮಾರಂಭ: ಇಂದು ಪೂರ್ವಭಾವಿ ಸಭೆ

**ಹಾಸನ:** ಸಾಮಾಜಿಕ ಹೋರಾಟಗಾರ ವೈ.ಎಸ್. ವೀರಭದ್ರಪ್ಪ ಅವರ ಸಾಮಾಜಿಕ ಹೋರಾಟ, ಜನಪರ ಸೇವೆ ಹಾಗೂ ಬದುಕಿನ ಸಾಧನೆಯನ್ನು ದಾಖಲಿಸುವ ಅಭಿನಂದನಾ ಗ್ರಂಥ ಬಿಡುಗಡೆ ಮಾಡುವ ಸಂಬಂಧ ಇಂದು (ಜೂನ್ 2) ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ.

ವೀರಭದ್ರಪ್ಪ ಅವರು ಹಲವು ದಶಕಗಳಿಂದ ಸಾಮಾಜಿಕ ಕಳಕಳಿ, ಜನಪರ ಹೋರಾಟಗಳು ಹಾಗೂ ವಿವಿಧ ಸಾರ್ವಜನಿಕ ವಿಚಾರಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಸಮಾಜಮುಖಿ ಕಾರ್ಯಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಅವರ ಸೇವೆ ಮತ್ತು ಕೊಡುಗೆಯನ್ನು ಗೌರವಿಸುವ ಉದ್ದೇಶದಿಂದ ಅಭಿನಂದನಾ ಸಮಾರಂಭ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆ ಕಾರ್ಯಕ್ರಮ ಆಯೋಜಿಸಲು ನಿರ್ಧರಿಸಲಾಗಿದ್ದು, ಅದರ ಸಿದ್ಧತೆ ಮತ್ತು ರೂಪುರೇಷೆಗಳ ಕುರಿತು ಚರ್ಚಿಸಲು ಈ ಪೂರ್ವಭಾವಿ ಸಭೆ ಕರೆಯಲಾಗಿದೆ.

ಸಭೆಯಲ್ಲಿ ಕಾರ್ಯಕ್ರಮದ ದಿನಾಂಕ, ಸ್ಥಳ, ಆಹ್ವಾನಿತ ಗಣ್ಯರು, ಸಮಿತಿಗಳ ರಚನೆ, ಜವಾಬ್ದಾರಿಗಳ ಹಂಚಿಕೆ, ಅಭಿನಂದನಾ ಗ್ರಂಥದ ಸಂಪಾದನೆ ಹಾಗೂ ಪ್ರಕಟಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಮಗ್ರ ಚರ್ಚೆ ನಡೆಯಲಿದೆ. ಜೊತೆಗೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮತ್ತು ಯಶಸ್ವಿಯಾಗಿ ನಡೆಸಲು ಅಗತ್ಯವಾದ ಸಲಹೆಗಳನ್ನು ಸಂಗ್ರಹಿಸಲಾಗುವುದು ಎಂದು ತಿಳಿಸಲಾಗಿದೆ. ಸಾಹಿತ್ಯಾಸಕ್ತರು, ಹಿತೈಷಿಗಳು, ವಿವಿಧ ಸಂಘಟನೆಗಳ ಮುಖಂಡರು, ಸಾಮಾಜಿಕ ಕಾರ್ಯಕರ್ತರು ಹಾಗೂ ವೀರಭದ್ರಪ್ಪ ಅವರ ಅಭಿಮಾನಿಗಳು ಮತ್ತು ಸ್ನೇಹಿತರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಯಲ್ಲಿ ಭಾಗವಹಿಸಿ ತಮ್ಮ ಸಲಹೆ–ಸಹಕಾರ ನೀಡುವಂತೆ ಅಭಿನಂದನಾ ಸಮಿತಿ ಸದಸ್ಯರು ಮನವಿ ಮಾಡಿದ್ದಾರೆ.

### ಪೊನ್ನಂಪೇಟೆ ತಾಲ್ಲೂಕು ಕನ್ನಡ ಪ್ರಥಮ ಸಾಹಿತ್ಯ ಸಮ್ಮೇಳನ

# ಮಕ್ಕಳಲ್ಲಿ ಕನ್ನಡ ಪ್ರೇಮ ಬೆಳೆಸಿ: ಟಿ.ಎಸ್.ಗೋಪಾಲ್

**ಮಡಿಕೇರಿ:** ಮಕ್ಕಳಲ್ಲಿ ಕನ್ನಡ ಪ್ರೇಮವನ್ನು ಕಡ್ಡಾಯವಾಗಿ ಬೆಳೆಸಿ ಎಂದು ಪೊನ್ನಂಪೇಟೆ ತಾಲ್ಲೂಕು ಕನ್ನಡ ಸಾಹಿತ್ಯ ಪ್ರಥಮ ಸಮ್ಮೇಳನ ಅಧ್ಯಕ್ಷರಾದ ಟಿ.ಎಸ್. ಗೋಪಾಲ್ ಅವರು ಕರೆ ನೀಡಿದ್ದಾರೆ.



ಪೊನ್ನಂಪೇಟೆ ತಾಲ್ಲೂಕಿನ ಹುದಿಕೇರಿಯ ಜನತಾ ಪ್ರೌಢಶಾಲಾ ಮೈದಾನದ ಕೂರ್ಗ್ ಸ್ಟಾರ್ ಚೆಕ್ಕೇರ ಅಪ್ಪಯ್ಯ ವೇದಿಕೆಯಲ್ಲಿ ಸೋಮವಾರ ನಡೆದ ತಾಲ್ಲೂಕು ಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡ ಭಾಷೆಗೆ ಸುಮಾರು 2 ಸಾವಿರಕ್ಕೂ ಹೆಚ್ಚು ವರ್ಷಗಳ ಇತಿಹಾಸವಿದ್ದು, ತನ್ನದೇ ಆದ ಪ್ರಾಚೀನ ಇತಿಹಾಸ ಹೊಂದಿದೆ. ದಕ್ಷಿಣ ಭಾರತದ ದ್ರಾವಿಡ ಭಾಷೆಯಲ್ಲಿ ಕನ್ನಡ ಸೊಗಸಾದ ಭಾಷೆಯಾಗಿದ್ದು, ಮಕ್ಕಳಿಗೆ ಕನ್ನಡ ಭಾಷೆಯನ್ನು ಸರಳೀಕರಿಸಿ ಕಲಿಸುವಂತಾಗಬೇಕು ಎಂದು ಸಲಹೆ ಮಾಡಿದರು.

ನಾಡಿನ ಭಾಷೆಯಾದ ಕನ್ನಡವನ್ನು ಹೆಚ್ಚು ಹೆಚ್ಚು ಕಲಿಯಬೇಕು. ಮಾತೃ ಭಾಷೆ ಜೊತೆಗೆ ನಾಡಿನ ಭಾಷೆಯನ್ನು ಕಲಿಸಬೇಕು ಎಂದು ಟಿ.ಎಸ್.ಗೋಪಾಲ್ ಅವರು ಹೇಳಿದರು.

ದಕ್ಷಿಣ ಕೊಡಗಿನ ಭಾಗದಲ್ಲಿ ಕೇರಳ ರಾಜ್ಯಕ್ಕೆ ಹೊಂದಿಕೊಂಡಿರುವುದರಿಂದ ಕನ್ನಡ, ಕೊಡವ, ಮಲೆಯಾಳ, ಆದಿವಾಸಿ ಭಾಷೆಗಳನ್ನು ಮಾತನಾಡುತ್ತಾರೆ. ಜೊತೆಗೆ ಅಧ್ಯಯನಕ್ಕೆ ಸಂಬಂಧಿಸಿದಂತೆ ಕನ್ನಡ, ಇಂಗ್ಲೀಷ್, ಹಿಂದಿಯನ್ನು ಸಹ ಕಲಿಯುತ್ತಾರೆ. ಮಕ್ಕಳಿಗೆ ಭಾಷೆ ಕಲಿಕೆಗೆ ಒತ್ತು ನೀಡಬೇಕು. ಆದರೆ ಕನ್ನಡ ಭಾಷೆಗೆ ಮೊದಲ ಆದ್ಯತೆ ನೀಡಬೇಕು ಎಂದು ಸಮ್ಮೇಳನಾಧ್ಯಕ್ಷರು ಒತ್ತಿ ಹೇಳಿದರು.

ಯಾವುದೇ ಭಾಷೆಯನ್ನು ಸರಳವಾಗಿ ಅಕ್ಷರವನ್ನು ಮಕ್ಕಳಿಗೆ ಕಲಿಸಬೇಕು. ನಾಡು ನುಡಿ ಬಗ್ಗೆ ಅಭಿಮಾನ ಇರಬೇಕು. ಕನ್ನಡ ಭಾಷೆ, ಸಾಹಿತ್ಯಕ್ಕೆ ಒತ್ತು ನೀಡಬೇಕು. ಕನ್ನಡ ಪ್ರೇಮವನ್ನು ಎಲ್ಲೆಡೆ ಬೆಳೆಸಬೇಕು ಎಂದು ಸಮ್ಮೇಳನಾಧ್ಯಕ್ಷರು ವಿವರಿಸಿದರು.

ಪ್ರಾದೇಶಿಕ ಭಾಷೆ ಜೊತೆಗೆ ಇತರ ಭಾಷೆಗಳನ್ನು ಕಲಿಯುವುದರಲ್ಲಿ ಯಾವುದೇ ತಪ್ಪಿಲ್ಲ. ವರ್ತಮಾನದಲ್ಲಿ ಇಂಗ್ಲೀಷ್ ವ್ಯವಹಾರಿಕವಾಗಿ ಅಂತರರಾಷ್ಟ್ರೀಯ ಮಾನ್ಯತೆ ಗಳಿಸಿರುವ ಭಾಷೆಯಾಗಿದ್ದು, ಎಲ್ಲಾ ಭಾಷೆಯನ್ನು ಕಲಿಯುವಂತಾಗಬೇಕು. ಆದರೆ ಹೊರಗಿನಿಂದ ನಾಡಿಗೆ ಬಂದವರೂ ಸಹ ಕನ್ನಡ ಕಲಿಯುವಂತಾಗಬೇಕು ಮತ್ತು ಕಲಿಸುವಂತಾಗಬೇಕು ಎಂದು ಸಲಹೆ ಮಾಡಿದರು.

ಕನ್ನಡವನ್ನು ಸಲೀಸಾಗಿ ಮಾತನಾಡುವ ಮಕ್ಕಳು ಓದಿ ಬರೆಯಲು ಕಷ್ಟ ಪಡುತ್ತಿರುವ ಬಗ್ಗೆ ಕೇಳಿ ಬರುತ್ತಿದೆ. ಮನೆಯಲ್ಲಿಯೇ ಕನ್ನಡ ಕಲಿಯುವ ಕೆಲಸ ಆಗಬೇಕು. ಹ್ರಸ್ವಸ್ವರ–ದೀರ್ಘ ಸ್ವರ, ಅಲ್ಪಪ್ರಾಣ–ಮಹಾಪ್ರಾಣ ಹೀಗೆ ಉಚ್ಚರಣೆಯ ಬಗ್ಗೆ ಮಾಹಿತಿ ನೀಡುವಂತಾಗಬೇಕು ಎಂದರು.

ಪ್ರತಿಯೊಂದು ಭಾಷೆಯು ಇತರ ಭಾಷೆಗಳಿಂದ ಅನೇಕ ಪದಗಳನ್ನು, ಸಾಹಿತ್ಯಕ್ಕೆ ಪೋಷಕವಾದ ಅಂಶಗಳನ್ನು ಪಡೆಯುವುದು ಸ್ವಾಭಾವಿಕವಾಗಿದ್ದು, ಅವುಗಳನ್ನು ಬಳಸಿಕೊಂಡು ಭಾಷೆಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಬೇಕು ಎಂದು ಸಲಹೆ ಮಾಡಿದರು.

ಕೊಡಗು ಹಿಂದೆ ವಿಶಾಲವಾದ ಪ್ರದೇಶವಾಗಿತ್ತು. ಕೊಡಗಿಗೆ ಭವ್ಯವಾದ ಇತಿಹಾಸವಿದ್ದು, ಹುದಿಕೇರಿ ಭಾಗವನ್ನು ಕಿಗ್ಗಟ್ಟುನಾಡು ಎಂದು ಕರೆಯುತ್ತಿದ್ದರು ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷರಾದ ಟಿ.ಪಿ.ರಮೇಶ್ ಅವರು ಮಾತನಾಡಿ ಕೊಡಗು ಜಿಲ್ಲೆಯಲ್ಲಿ ಹಲವು ಸಾಹಿತಿಗಳು, ಕವಿಗಳು ಕನ್ನಡ ಭಾಷೆ ಬೆಳವಣಿಗೆಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಆ ನಿಟ್ಟಿನಲ್ಲಿ ಚೆಕ್ಕೇರ ಅಪ್ಪಯ್ಯ ಅವರು ಸಂಗೀತ ಕ್ಷೇತ್ರದಲ್ಲಿ ತಮ್ಮದೇ ಆದ ಹೆಸರು ಮಾಡಿದ್ದಾರೆ ಎಂದು ತಿಳಿಸಿದರು.

ಕೊಡಗಿನ ಇತಿಹಾಸದ ಬಗ್ಗೆ ಹಲವು ಸಾಹಿತಿಗಳು ಬರೆದಿದ್ದಾರೆ. ಅಂತವರನ್ನು ಸದಾ ಸ್ಮರಿಸಬೇಕು. ಅಳಿವಿನ ಅಂಚಿನಲ್ಲಿರುವ ಭಾಷೆಯನ್ನು ಬೆಳೆಸಲು ಮತ್ತಷ್ಟು ಕಾರ್ಯಕ್ರಮ ರೂಪಿಸಬೇಕು. ಮಕ್ಕಳಿಗೆ ಮಾತೃ ಭಾಷೆಯ ಬಗ್ಗೆ ಪ್ರೀತಿ ಗೌರವ ಹೆಚ್ಚಿಸಬೇಕು ಎಂದರು.

ಮಕ್ಕಳನ್ನು ಸಾಹಿತ್ಯ ಸಮ್ಮೇಳನಕ್ಕೆ ಕಳುಹಿಸಬೇಕು. ಮಕ್ಕಳಲ್ಲಿ ಕನ್ನಡದ ಪ್ರೇಮ ಬೆಳೆಸಬೇಕು. ಕನ್ನಡ ಭಾಷೆ ಬಳಸುವಂತಾಗಲು ಪ್ರೋತ್ಸಾಹಿಸಬೇಕು. ವಿಷಯವನ್ನು ಮನನ ಮಾಡಿಕೊಳ್ಳಬೇಕು ಎಂದರು.

ಸಾಹಿತ್ಯಪರ ಕಾರ್ಯಕ್ರಮಗಳಿಗೆ ಮಕ್ಕಳು ಹೋಗದಂತೆ ಸುತ್ತೋಲೆ ಹೊರಡಿಸಿದಲ್ಲಿ ಅದನ್ನು ವಾಪಸ್ಸು ಪಡೆಯಬೇಕು. ಸಾಹಿತ್ಯ ಚಟುವಟಿಕೆಯಲ್ಲಿ ಮಕ್ಕಳು ಪಾಲ್ಗೊಂಡಲ್ಲಿ ಯಾವುದೇ ರೀತಿಯ ನಷ್ಟವಿಲ್ಲ ಎಂದು ಟಿ.ಪಿ.ರಮೇಶ್ ಅವರು ಪ್ರತಿಪಾದಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷರಾದ ಎಂ.ಪಿ.ಕೇಶವ ಕಾಮತ್ ಅವರು ಮಾತನಾಡಿ ಕನ್ನಡದ ಮನಸ್ಸುಗಳು ಒಂದಾಗಬೇಕು. ಕನ್ನಡ ಭಾಷೆ ಎಲ್ಲೆಡೆ ಪಸರಿಸಬೇಕು. ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನ ಆಯೋಜಿಸುವುದರಿಂದ ಅಲ್ಲಿನ ಕನ್ನಡ ಸಂಸ್ಕೃತಿ, ಸ್ಥಳೀಯ ಭಾಷೆ ಬಗ್ಗೆ ಮಾಹಿತಿ ನೀಡಲು ಸಹಕಾರಿಯಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸ್ಥಳೀಯ ಸಂಸ್ಕೃತಿ, ಕಲೆಗಳನ್ನು ಪ್ರತಿಬಿಂಬಿಸುವಲ್ಲಿ ಕವಿಗೋಷ್ಠಿ, ವಿಚಾರಗೋಷ್ಠಿಗಳು ನಡೆಯಲಿವೆ. ಯುವಜನರು ಸಾಹಿತ್ಯ ಅಭಿಮಾನ ಬೆಳೆಸಿಕೊಳ್ಳಲು ಕನ್ನಡ ಸಾಹಿತ್ಯ ಸಮ್ಮೇಳನ ವೇದಿಕೆಯಾಗಿದೆ ಎಂದು ನುಡಿದರು.

ಬೆಂಗಳೂರು ಕೊಡವ ಸಮಾಜದ ಅಧ್ಯಕ್ಷರಾದ ಚೆರಿಯಪ್ಪಂಡ ಸುರೇಶ್ ನಂಜಪ್ಪ ಅವರು ಮಾತನಾಡಿ ಹತ್ತನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ಓದಿದ್ದೇನೆ. ಕನ್ನಡ ಭಾಷೆ ಕಲಿಯುವುದಿರಿಂದ ಇತರೆ ಭಾಷೆ ಕಲಿಯಲು ಸಹಕಾರಿಯಾಗಿದೆ ಎಂದರು.

ಮಾತೃ ಭಾಷೆ ಕಲಿಯುವುದರಿಂದ ಇತರೆ ಭಾಷೆ ಕಲಿಯಲು ಸಹಕಾರಿಯಾಗಿದೆ. ಗಡಿ ಭಾಗದಲ್ಲಿ ಕನ್ನಡ ಕಲಿಕೆ ಹೆಚ್ಚಾಗಿ ಆಗಬೇಕು. ಕೇರಳ ಗಡಿಭಾಗದಲ್ಲಿ ಹತ್ತಿರದಲ್ಲಿರುವ ಪ್ರದೇಶದಲ್ಲಿ ಕನ್ನಡ ಕಲಿಕೆಗೆ ಹೆಚ್ಚಿನ ಒತ್ತು ನೀಡಬೇಕು ಎಂದರು.

ಮಾಹಿತಿ ತಂತ್ರಜ್ಞಾನ ಯುಗದಲ್ಲಿ ಕನ್ನಡ ಭಾಷೆ ಜೊತೆಗೆ ಇತರೆ ಭಾಷೆ ಕಲಿಯುವಂತಾಗಬೇಕು ಎಂದು ಸಲಹೆ ಮಾಡಿದರು.

# ಪ್ರವರ್ಗ–1 ನಾಯಕರಿಗೆ ಸಚಿವ ಸ್ಥಾನ ನೀಡಲು ಆಗ್ರಹ



**ಮಂಡ್ಯ:** ರಾಜ್ಯದಲ್ಲಿ ಪ್ರವರ್ಗ–1ರ ಅಡಿಯಲ್ಲಿನ ನಾಯಕರಿಗೆ ಸಚಿವ ಹಾಗೂ ವಿಧಾನಪರಿಷತ್ ಸ್ಥಾನಗಳನ್ನು ನೀಡುವಂಎ ಕರ್ನಾಟಕ ರಾಜ್ಯ ಪ್ರವರ್ಗ–1ರ ಜಾತಿಗಳ ಒಕ್ಕೂಟದ ರಾಜ್ಯ ಸಂಘಟನಾ ಕಾರ್ಯದರ್ಶಿ ನಾಗರತ್ನ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರವರ್ಗ–1ರ ಅಡಿಯಲ್ಲಿ 95 ಜಾತಿಗಳು, 390ಕ್ಕೂ ಹೆಚ್ಚು ಉಪಜಾತಿಗಳಿವೆ. ಅವುಗಳಲ್ಲಿ ಯಾದವ, ಉಪ್ಪಾರ ಹಾಗೂ ಗಂಗಮತ ಪ್ರಮುಖರಾಗಿದ್ದಾರೆ ಎಂದರು.

ಹಿಂದುಳಿದ ಸಮುದಾಯದ ಹೆಚ್ಚು ಜನರು ಕಡುಬಡತನದಿಂದ ರಾಜಕೀಯ, ಸಾಮಾಜಿಕ, ಆರ್ಥಿಕವಾಗಿ ಹಿಂದುಳಿದಿದ್ದು, ಯಾದವ ಸಮುದಾಯದ ಡಿ.ಟಿ.ಶ್ರೀನಿವಾಸ್, ಹಾಗೂ ಉಪ್ಪಾರ ಸಮುದಾಯದ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ಹಾಗೂ ಗಂಗಾಮತ ಸಮುದಾಯದ ತಿಮ್ಮಪ್ಪಣ್ಣ ಕುಮಕನೂರ ಅವರನ್ನು ವಿಧಾನ ಪರಿಷತ್ ಸದಸ್ಯರಾಗಿ ಮುದುವರೆಸುವಂತೆ ಆಗ್ರಹಿಸಿದರು.

ಗೋಷ್ಠಿಯಲ್ಲಿ ಒಕ್ಕೂಟದ ಜಿಲ್ಲಾಧ್ಯಕ್ಷ ಬಿ.ಲಿಂಗಯ್ಯ, ಉಪಾಧ್ಯಕ್ಷ ಪ್ರಕಾಶ್, ನಿರ್ದೇಶಕ ಸಿದ್ದರಾಜು ಇದ್ದರು.

# ರಾಜಕೀಯ ಪಕ್ಷಗಳು ಮತದಾರರ ಪರಿಷ್ಕರಣೆ ಕಾರ್ಯದಲ್ಲಿ ಭಾಗಿಯಾಗಬೇಕು: ಡಾ ಕುಮಾರ

**ಮಂಡ್ಯ:** ಭಾರತ ಚುನಾವಣಾ ಆಯೋಗವು ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ(ಖಖಖ) ವೇಳಾಪಟ್ಟಿ ಪ್ರಕಟವಾಗಿದ್ದು ಜೂನ್ 20 ರಿಂದ ಅಕ್ಟೋಬರ್ 7 ವರೆಗೆ ನಡೆಯುವ ಪ್ರಕ್ರಿಯೆ ಬಗ್ಗೆ ರಾಜಕೀಯ ಪಕ್ಷಗಳ ಅಧ್ಯಕ್ಷರು/ ಉಪಾಧ್ಯಕ್ಷರು ಮತ್ತು ಪದಾಧಿಕಾರಿಗಳಿಗೆ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯ ಬಗ್ಗೆ ಮಾಹಿತಿಯನ್ನು ನೀಡಿದರು.



ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ –2026 ರ ಕಾರ್ಯವನ್ನು ಜರುಗಿಸಲು ಭಾರತ ಚುನಾವಣಾ ಆಯೋಗವು ದಿನಾಂಕಃ 14–05–2026ರಂದು ಹೊರಡಿಸಿದ ಹಿನ್ನೆಲೆಯಲ್ಲಿ ದಿನಾಂಕಃ 01–06–2026 ರಂದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ –2026 ಸಂಬಂಧಿಸಿದ ವಿಷಯಗಳ ಕುರಿತು ಸಮಗ್ರ ಮಾಹಿತಿಯನ್ನು ನೀಡಲು ಜಿಲ್ಲೆಯ ನೋಂದಾಯಿತ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ ಆಯೋಜಿಸಲಾಗಿದೆ ಎಂದರು.

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಯು, ಮತದಾರರು, ರಾಜಕೀಯ ಪಕ್ಷಗಳು ಮತ್ತು ಚುನಾವಣಾ ಸಿಬ್ಬಂದಿ ಒಳಗೊಂಡಂತಹ ಪಾರದರ್ಶಕ ಹಾಗೂ ಪಾಲ್ಗೊಳ್ಳುವಿಕೆಯ ಪ್ರಕ್ರಿಯೆಯಾಗಿದೆ. ಇದಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಮುಖ್ಯ ಉದ್ದೇಶ ಅರ್ಹ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸುವುದು ಮತ್ತು ಅನರ್ಹರರನ್ನು ನಿಯಮಾನುಸಾರ ಮತದಾರರ ಪಟ್ಟಿಯಿಂದ ಕೈಬಿಡುವುದಾಗಿದೆ ಎಂದರು.

ಜೂನ್ 20, 2026 ರಿಂದ ಜೂನ್ 29, 2026 ರವರೆಗೆ ಪೂರ್ವ ಸಿದ್ದತೆ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ನಡೆಯಲ್ಲಿದೆ. ಜೂನ್ 30, 2026 ರಿಂದ ಜುಲೈ 29, 2026 ವರೆಗೆ ಮತಗಟ್ಟೆ ಅಧಿಕಾರಿಗಳಿಂದ ಮನೆ–ಮನೆ ಸಮಿಕ್ಷೆ ಗಣತಿ ನಮೂನೆಗಳನ್ನು ಮತದಾರರಿಗೆ ಹಂಚುವುದು ಮತ್ತು ಸಂಗ್ರಹಸುವ ಕಾರ್ಯ ನಡೆಯಲ್ಲಿದೆ. ಅಂತರ್ಜಾಲದ ಮೂಲಕ ಮತದಾರರು ಗಣತಿ ನಮೂನೆಯನ್ನು ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಜುಲೈ 29, 2026 ರಂದು ಮತಗಟ್ಟೆ ಪುನರ್ ವಿಂಗಡಣೆ ಸಂಬಂಧ ನಿಯಾಮನುಸಾರ ಪ್ರಸ್ತಾವನೆಯನ್ನು ಮುಖ್ಯ ಚುನಾವಣಾಧಿಕಾರಿಗಳಿಗೆ ಸಲ್ಲಿಸುವುದು.

ಆಗಸ್ಟ್ 5, 2026 ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ, ಆಗಸ್ಟ್ 5, 2026 ರಿಂದ ಸೆಪ್ಟೆಂಬರ್ 4, 2026 ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆಗೆ ಅವಕಾಶ ನೀಡಲಾಗಿದೆ. ಆಗಸ್ಟ್ 5, 2026 ರಿಂದ ಅಕ್ಟೋಬರ್ 3, 2026 ರವರೆಗೆ ಹಕ್ಕು ಮತ್ತು ಆಕ್ಷೇಪಣೆ ವಿಲೇವಾರಿ ನಡೆಯಲ್ಲಿದೆ. ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟವಾಗುತ್ತದೆ ಎಂದು ಸಭೆಯಲ್ಲಿ ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

ಗಣತಿ ನಮೂನೆಯನ್ನು ಸಹಿ ಮಾಡದೆ ಬಿ.ಎಲ್.ಓ., ರವರಿಗೆ ನೀಡದೆ ಇದ್ದಲ್ಲಿ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾವಣಿ ಮಾಡಿರುವುದಿಲ್ಲ. ಇಂತಹವರಿಗೆ ನೋಟಿಸನ್ನು ನೀಡಿ ಹಕ್ಕು ಆಕ್ಷೇಪಣೆ ಅವಧಿಯಲ್ಲಿ ಮತದಾರರು ಆಯೋಗವು ನಿಗದಿಪಡಿಸಿರುವ 12 ವಿವಿಧ ದಾಖಲೆಗಳಲ್ಲಿ ಒಂದು ದಾಖಲೆ ನೀಡಿ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಹೊಸ ಅರ್ಜಿ ನೀಡಬಹುದು ಎಂದು ತಿಳಿಸಿದರು.

ಬಿ.ಎಲ್.ಓ., ಗಳು ಕನಿಷ್ಠ ಮೂರು ಬಾರಿ ಮನೆ ಮನೆಗೆ ಭೇಟಿ ನೀಡಲಿದ್ದು, ಒಂದು ವೇಳೆ ಮತದಾರರು ಸಿಗದಿದ್ದ ಪಕ್ಷದಲ್ಲಿ ಮಹಜರು ಸಿದ್ದಪಡಿಸಿ ವರದಿ ನೀಡಲಿದ್ದಾರೆ. ಮತದಾರರ ಪೈಕಿ ಅವರ ಮನೆಯ 18 ವರ್ಷ ವಯಸ್ಕರು ಸಹಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. ಮತದಾರರ ಪಟ್ಟಿಯ ಸಮಗ್ರ ಪರಿಷ್ಕರಣೆಗೆ ಮತದಾರರು ಹಾಗೂ ರಾಜಕೀಯ ಪಕ್ಷಗಳು ಅಧಿಕಾರಿಗಳು ಪರಸ್ಪರ ಸಹಕಾರ ನೀಡುವುದರೊಂದಿಗೆ ಸಮಗ್ರ ಪರಿಷ್ಕರಣೆ ಪ್ರಕ್ರಿಯೆನ್ನು ಯಶಸ್ವಿಗೊಳಿಸಬೇಕು ಎಂದರು.

ಸಭೆಯಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರಾದ ಪ್ರತೀಕ ಹೆಗ್ಡೆ, ಚುನಾವಣಾ ತಹಶೀಲ್ದಾರ್ ರವರಾದ ಸಿ.ಜೆ. ರವಿಶಂಕರ್ ಹಾಗೂ ಮಂಡ್ಯ ಜಿಲ್ಲೆಯ ವಿವಿಧ ರಾಜಕೀಯ ಪಕ್ಷದ ಜಿಲ್ಲಾಧ್ಯಕ್ಷರುಗಳಾದ ಸಿ.ಡಿ. ಗಂಗಾದರ್, ಇಂಡಿಯನ್ ನ್ಯಾಷನಲ್ ಕಾಂಗ್ರೇಸ್ ಪಕ್ಷ, ಡಿ. ರಮೇಶ್, ಜನತಾದಳ (ಎಸ್), ಬೂದನೂರು ಬೊಮ್ಮಯ್ಯ, ಆಮ್ ಅದ್ಮಿ, ಶಿವಶಂಕರ್ , ಬಹುಜನ ಸಮಾಜ ಪಕ್ಷ, ಭಾರತೀಯ ಜನತಾಪಾರ್ಟಿಯ ಮಂಡ್ಯ ನಗರ ಅಧ್ಯಕ್ಷರಾದ ಹೆಚ್ .ಬಿ. ಪ್ರಸನ್ನ ಕುಮಾರ್ ಸಿ.ಪಿ.ಐ.ಎಂ., ಪಕ್ಷದ ಜಿಲ್ಲಾ ಕಾರ್ಯದರ್ಶಿ ಮಂಡಳಿ ಸದಸ್ಯರಾದ ಸಿ. ಕುಮಾರಿ ಹಾಗೂ ಮುಖಂಡರುಗಳು ಉಪಸ್ಥಿತರಿದ್ದರು.

# ಸುಮಲತಾ ಅಂಬರೀಶ್‌ಗೆ ರಾಜ್ಯಸಭಾ ಸ್ಥಾನ ನೀಡಲು ಆಗ್ರಹ

**ಮಂಡ್ಯ:** ಮಾಜಿ ಸಂಸದೆ ಸುಮಲತಾ ಅಂಬರೀಶ್ ಅವರನ್ನು ರಾಜ್ಯಸಭಾ ಸ್ಥಾನಕ್ಕೆ ಪರಿಗಣಿಸಬೇಕು ಎಂದು ಸ್ವಾಭಿಮಾನಿ ಪಡೆಯ ಅಧ್ಯಕ್ಷ ಹನಕೆರೆ ಶಶಿಕುಮಾರ್ ಆಗ್ರಹಿಸಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಲೋಕಸಭಾ ಚುನಾವಣೆಯಲ್ಲಿ ಹಾಲಿ ಸಂಸದೆಯಾಗಿದ್ದ ಸುಮಲತಾ ಅವರು ಸ್ಪರ್ಧೆಯನ್ನು ತ್ಯಾಗ ಮಾಡಿದ್ದು, ಅವರಿಗೆ ಅಧಿಕಾರದ ಭರವಸೆ ನೀಡಿದ ಬಿಜೆಪಿ ಸರಕಾರ ಅವರನ್ನು ಕಡೆಗಣಿಸಿದೆ ಎಂದು ಹೇಳಿದರು.

ಅವರು ಪಕ್ಷೇತರವಾಗಿ ಸಂಸದರಾಗಿ ಆಯ್ಕೆಯಾಗಲು ಶೇ.80ರಷ್ಟು ಕಾಂಗ್ರೆಸ ಕಾರ್ಯಕರ್ತರು ಸಹಕಾರು ನೀದ್ದರು. ಕಳೆದ ಚುನಾವಣೆಯಲ್ಲಿ ಅವರಿಗೆ ರಾಷ್ಟ್ರೀಯ ಪಕ್ಷಗಳ ಸೇರ್ಪಡೆ ಸೇರಿದಂತೆ ಅನೇಕ ಅವಕಾಶಗಳಿದ್ದವು. ನರೇಂದ್ರ ಮೋದಿ ಅವರ ನಾಯಕತ್ವವನ್ನು ನಂಬಿ ಚುನಾವಣೆ ತ್ಯಾಗ ಮಾಡಿದ್ದರು. ಸುಮಲತಾ ಹಾಗೂ ಅಂಬರೀಶ್ ಅಭಿಮಾನಿಗಳ ಬೇಡಿಕೆಯನ್ನು ಪರಿಗಣನೆ ಮಾಡಿದಿದ್ದರೆ ನಮಗೆ ಬಿಜೆಪಿ ಮೇಲಿನ ಗೌರವ ಕ್ಷೀಣಿಸುತ್ತದೆ ಎಂದು ಎಚ್ಚರಿಸಿದರು. ಪಕ್ಷೇತರ ಅಭ್ಯರ್ಥಿಯಾಗಿ ಸಂಸದರಾದ ಅವರ ಅವಧಿಯಲ್ಲಿ ಜಿಲ್ಲೆಯಲ್ಲಿ ಗಮನಾರ್ಹ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಕೆಆರ್‌ಎಸ್ ಅಣೆಕಟ್ಟೆಗೆ ಮಾರಕವಾದ ಕಲ್ಲುಗಣಿಗಾರಿಕೆ ವಿರುದ್ಧ ಹೋರಾಟ ಮಾಡಿದ್ದಾರೆ. ಅನೇಕ ಗ್ರಾಮಗಳಿಗೆ ಬಸ್ ತಂಗುದಾಣ, ಹಾಗೂ ಶುದ್ಧ ನೀರಿನ ಕುಡಿಯುವ ಘಟಕವನ್ನು ಆರಂಭಿಸಿದ್ದಾರೆ. ಬಿಜೆಪಿ ಅಧಿಕಾರ ನೀಡುವ ಭರವಸೆಯಿಂದ ಚುನಾವಣೆಯ ತ್ಯಾಗ ಮಾಡಿದ ಅವರನ್ನು ರಾಜ್ಯಸಭಾ ಸದಸ್ಯರನ್ನಾಗಿ ಮಾಡುವಂತೆ ಒತ್ತಾಯಿಸಿದರು.

ಗೋಷ್ಠಿಯಲ್ಲಿ ಜಿ.ಪಂ ಮಾಜಿ ಸದಸ್ಯ ನಿಂಗರಾಜು, ಅಭಿಮಾನಿಗಳಾದ ಶಶಿ, ಕಾರಸವಾಡಿ ಬಸವರಾಜು ಇದ್ದರು.

# ದೇವೇಗೌಡರ ಕುಟುಂಬದ ಬಗ್ಗೆ ಹೇಳಿಕೆ ಖಂಡನೆ: ಸಚಿವರ ವಿರುದ್ಧ ಸುರೇಶ್ ಗೌಡ ಕಿಡಿ

**ಮಂಡ್ಯ:** ಸಚಿವ ಎನ್.ಚಲುವರಾಯಸ್ವಾಮಿ ಅವರು ಜೆಡಿಎಸ್ ಪಕ್ಷದ ವರಿಷ್ಠರ ಕುಟುಂಬದಲ್ಲಿ ಸೂತಕದ ಛಾಯೆ ಕಾಣುತ್ತಿದೆ ಎಂದು ಹೇಳಿರುವುದು ಅವರಿಗೆ ಶೋಭೆ ತರುವುದಿಲ್ಲ ಎಂದು ಮಾಜಿ ಶಾಸಕ ಕೆ.ಸುರೇಶ್‌ಗೌಡ ಕಿಡಿಕಾರಿದರು.



ಸುದ್ದಿಗೋಷ್ಟಿಯಲಿ ಮಾತನಾಡಿದ ಅವರು, ಅವರು ಯಾರನ್ನೋ ಮೆಚ್ಚಿಸುವ ಸಲುವಾಗಿ ನಮ್ಮ ಪಕ್ಷದ ವರಿಷ್ಟರ ಕುಟುಂಬದಲ್ಲಿ ಸೂತವಕಿದೆ ಎಂಬ ಕಿಡಿಗೇಡಿ ಹೇಳಿಕೆ ನೀಡಿದ್ದಾರೆ. ನಮ್ಮ ವರಿಷ್ಟರ ಬಗ್ಗೆ ಮಾತನಾಡಿದರೆ ದೊಡ್ಡ ವ್ಯಕ್ತಿಗಳಾಗುತ್ತೇವೆ ಎಂಬ ಭಾವನೆಯಲ್ಲಿ ಮಾತನಾಡಿರುವುದನ್ನು ಖಂಡಿಸಿದರು.

ಸೂತಕದ ಛಾಯೆ ಮೂಡುವುದು ಒಂದು ಮನೆಯಲ್ಲಿ ಸಾವಾದಾಗ. ದೇವೇಗೌಡರ ಮನೆಯಲ್ಲಿ ಸೂತಕದ ಛಾಯೆ ಎಂದು ಹೇಳುವ ಇವರು ಯಾರ ಸಾವನ್ನು ಬಯಸುತ್ತಿದ್ದಾರೆ ಎಂದು ಬಹಿರಂಗ ಪಡಿಸಬೇಕು. ಈ ರೀತಿಯ ಹೇಳಿಕೆ ಮೂಲಕ ತಾಲೂಕಿನ ಜನತೆಗೆ ಅವಮಾನ ಮಾಡಲಾಗುತ್ತಿದೆ. ಅವರ ಪಕ್ಷದ ಕಾರ್ಯಕರ್ತರೆ ಅವರಿಗೆ ಕಪಾಳ ಮೋಕ್ಷ ಮಾಡಿದರೂ ಇನ್ನೂ ಅವರಿಗೆ ಬುದ್ಧಿ ಬಂದಿಲ್ಲ ಎಂದು ಆಕ್ರೋಶ ವ್ಯಕ್ತ ಪಡಿಸಿದರು.

ದೇವೇಗೌಡ ಇತಿಹಾಸ ತಿಳಿಯದೇ ಯಾರನ್ನೋ ಮೆಚ್ಚಿಸುವ ಕೆಲಸಕ್ಕೆ ಮುಂದಾಗಿದ್ದಾರೆ. ಮಾಜಿ ಮುಖ್ಯಮಂತ್ರಿ ಎಸ್. ಎಂ.ಕೃಷ್ಣ ಅವರಿಗೆ ರಾಜಕೀಯವಾಗಿ ಜೀವ ಕೊಟ್ಟರು. ಡಿ.ವಿ.ಸದಾನಂದಗೌಡರು ಸಿಎಂ ಆದ ವೇಳೆ ಸಂಪೂರ್ಣವಾಗಿ ಸಹಕಾರ ನೀಡಿದ್ದರು. ಈಗ ಡಿ.ಕೆ.ಶಿವಕುಮಾರ್ ಅವರು ಸಿಎಂ ಆದರೆ ಹೊಟ್ಟೆಉರಿ ಎಂದು ಹೇಳುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು. ಕಾಂಗ್ರೆಸ್ ಪಕ್ಷದ ಯಾರೇ ಮುಖ್ಯಮಂತ್ರಿಯಾದರೂ ಅವರನ್ನು ವಿರೋಧ ಪಕ್ಷವಾಗಿ ವಿರೋಧ ವ್ಯಕ್ತಪಡಿಸುತ್ತೇವೆ. ಅವರ ತಪ್ಪು ಕೆಲಸಗಳನ್ನು ವಿರೋಧಿಸಿ ಸರಿದಾರಿಗೆ ತರುವ ಕೆಲಸ ಮಾಡುತ್ತೇವೆ. ಒಳ್ಳೆ ಕೆಲಸಗಳನ್ನು ಒಪ್ಪುತ್ತೇವೆ. ಆದರೆ ನಾಡು ಕಂಡಂತ ಶ್ರೇಷ್ಠ ಆಡಳಿತಗಾರ ದೇವೇಗೌಡರ ಮನೆ ಸೂತಕದ ಮನೆ ಎಂದು ಹೇಳುತ್ತಿದ್ದು, ಇವರೇನಾದರೂ ಮಾಟಾ ಮಂತ್ರ ಮಾಡಿಸಲು ಹೋಗಿದ್ದರೆ ಎಂದು ಹೇಳಿದರು.

ತಮ್ಮ ಸಚಿವ ಸ್ಥಾನ ಉಳಿಸಿಕೊಳ್ಳಲು ಯಾರನ್ನೋ ಮೆಚ್ಚಿಸಲು, ಅಧಿಕಾರ–ಹಣದ ಮದದಿಂದ ವರ್ತಿಸುತ್ತಿದ್ದಾರೆ. ಇವರ ಹೇಳಿಕೆಯನ್ನು ಕಂಡತುಂಡವಾಗಿ ಖಂಡುತ್ತೇವೆ. ಮುಂದೆ ಇದೇ ರೀತಿ ಹೇಳಿಕೆಗಳನ್ನು ನೀಡಿದರೆ ಅದರ ಪರಿಣಾಮಗಳನ್ನುಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಮುಖಂಡ ಬಿ.ಆರ್.ರಾಮಚಂದ್ರು ಇತರರಿದ್ದರು.

# ಅನ್ನದಾಸೋಹ ಪುಣ್ಯ–ಪವಿತ್ರದ ಕೆಲಸ

## ಸಂಘದ ನಡೆ ರಾಜ್ಯಕ್ಕೆ ಮಾದರಿ: ಶ್ರೀ ಶಂಭುನಾಥ ಸ್ವಾಮೀಜಿ ಮೆಚ್ಚುಗೆ





**ಹಾಸನ:** ಮಠ ಮಾನ್ಯಗಳ ರೀತಿಯಲ್ಲಿ ಹಾಸನ ಜಿಲ್ಲಾ ಪತ್ರಕರ್ತರ ಸಂಘದಲ್ಲೂ ನಿತ್ಯ ಅನ್ನದಾಸೋಹ ಕಾರ್ಯ ನಡೆಯುತ್ತಿರುವುದು ಅತ್ಯಂತ ಪವಿತ್ರ ಹಾಗೂ ಇಡೀ ರಾಜ್ಯಕ್ಕೆ ಮಾದರಿ ಎಂದು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಮೆಚ್ಚುಗೆ ವ್ಯಕ್ತಪಡಿಸಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿರುವ ಡಿವಿಜಿ ಸಭಾಂಗಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಅನ್ನದಾಸೋಹ ಶತದಿನೋತ್ಸವ, ಪ್ರತಿಭಾ

ಪುರಸ್ಕಾರ ಹಾಗೂ ಕೆನರಾ ಬ್ಯಾಂಕ್ ಗಿಗ್ ಸ್ಟಾರ್ ಯೋಜನೆಗೆ ಚಾಲನೆ ನೀಡಿ ಆಶೀರ್ವಚನ ನೀಡಿದರು.

ಕಾರ್ಯ ಎಂದು ವಾದ ಮಾದರಿ ಕಾರ್ಯಕ್ರಮವಾಗಿದ್ದು, ಜೊತೆಗೆ ಸಂಘದ ಪತ್ರಕರ್ತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಏರ್ಪಡಿಸಿರುವುದು ಉತ್ತಮವಾಗಿದೆ ಎಂದು ಶ್ರೀ ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಮೆಚ್ಚುಗೆವ್ಯಕ್ತಪಡಿಸಿದರು.

ಹಸಿವು ಎಂಬುದು ಅತ್ಯಂತ ಕಷ್ಟ ಮತ್ತು ನೋವಿನ ಪರಿಸ್ಥಿತಿಗೆ ದೂಡುತ್ತದೆ. ಎಷ್ಟೋ ಮಂದಿಗೆ ಹಸಿದವರಿಗೆ ಅಂಜಿಕೆ ಇರಲಿದೆ, ಇಂಥ ಸಂದರ್ಭದಲ್ಲಿ ಹಸಿದವರಿಗೆ ಆಹಾರ ಒದಗಿಸುವುದು ಅತ್ಯಂತ ಶ್ರೇಷ್ಠ ಹಾಗೂ ಪುಣ್ಯದ ಕಾರ್ಯವಾಗಿದೆ ಎಂದರು. ಪತ್ರಕರ್ತರ ಸಂಘವು ಕೇವಲ ಪತ್ರಕರ್ತರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಸಮಾಜಮುಖಿ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ. ಯುವಕರಿಗೆ ಮಧ್ಯಾಹ್ನದ ಊಟ ವ್ಯವಸ್ಥೆ ಕಲ್ಪಿಸಿರುವುದು ಶ್ಲಾಘನೀಯ.

ಅನ್ನದಾಸೋಹದ ಬಗ್ಗೆ ಮಾತನಾಡುವಾಗ ಸಿದ್ಧಗಂಗಾ ಶ್ರೀಗಳು, ಡಾ. ಬಾಲಗಂಗಾಧರನಾಥ ಸ್ವಾಮೀಜಿ ಸೇರಿದಂತೆ ಅನೇಕ ಮಹನೀಯರ ಸೇವೆ ಸ್ಮರಣೀಯ

ಪತ್ರಕರ್ತರ ಸಂಘದ ಅನ್ನದಾಸೋಹ ಕೇವಲ ನೂರು ದಿನಗಳಿಗೆ ಸೀಮಿತವಾಗದೆ ತಲಾತಲಾಂತರದವರೆಗೂ ಮುಂದುವರಿಯಲಿ, ಯುವಕರು ಮುಂದುವರಿಸಿಕೊಂಡು ಹೋಗಬೇಕು. ಹೊಸ ಕೆಲಸ ಆರಂಭಿಸಿದಾಗ ಟೀಕೆ–ಟಿಪ್ಪಣಿಗಳು ಸಾಮಾನ್ಯ. ಅದಕ್ಕೆ ಕಿವಿಗೊಡದೆ ಸಮಾಜದ ಹಿತದತ್ತ ಸಾಗಬೇಕು. ಒಳ್ಳೆಯ ಕೆಲಸ ಮಾಡಲಾಗದಿದ್ದರೂ ಪರವಾಗಿಲ್ಲ, ಆದರೆ ಇತರರಿಗೆ ತೊಂದರೆ ಕೊಡಬಾರದು ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಅನ್ನದಾನ ಅತ್ಯಂತ ಪವಿತ್ರ ದಾನ. ಜಲದಾನ, ಅನ್ನದಾನ ಹಾಗೂ ಒಳ್ಳೆಯ ಮಾತುಗಳು ಸಮಾಜದ ನಿರ್ಮಾಣಕ್ಕೆ ಅಗತ್ಯ. ಪತ್ರಕರ್ತರ ಕುಟುಂಬಗಳು ಅಕ್ಷರ ದಾಸೋಹ

**ಪಿಯುಸಿ ವಿಭಾಗದಲ್ಲಿ ತನಿಷ್ಕ ಎನ್.ಕುಚ್ಚಳ್ಳಿ, ಸಮೃದ್ಧಿ ವಿ, ಸಮನ್ವಿತಾ, ಭುವನ್ ಕೆ.ಎನ್, ಆಕಾಂಕ್ಷ ಎಸ್.ವಿ. ಮತ್ತು ಚಿನ್ಮಯಿ ಎಂ.ಎಸ್ ಹಾಗೂ ಎಸ್‌ಎಲ್‌ಎಲ್ಸಿ ವಿಭಾಗದಲ್ಲಿ ನವಮಿ ಎಸ್.ಎಸ್., ಎನ್.ಎನ್. ವರ್ಷಿಣಿ ರಾಜ್ ಮತ್ತು ಚೈತನ್ಯ ಯು ಅವರಿಗೆ ಸ್ವಾಮೀಜಿ ಹಾಗೂ ಇತರರು ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಿದರು.**

ಜೊತೆಗೆ ಅನ್ನದಾಸೋಹವನ್ನೂ ನಡೆಸುತ್ತಿರುವುದು ಸಂತೋಷದ ವಿಷಯ. ಹಿಂದಿನಿಂದಲೂ ಜಿಲ್ಲೆಯ ಪತ್ರಕರ್ತರು ಹಾಗೂ ಶ್ರೀಮಠದೊಂದಿನ ಸಂಬಂಧ ಅವಿನಾಭಾವದಿಂದ ಹಾಲು–ಸಿಹಿಯಂತೆ ಕೂಡಿದೆ. ಮುಂದೆಯೂ ಶ್ರೀಮಠ ನಿಮ್ಮ ಜೊತೆಗಿರಲಿದೆ ಎಂದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ ಮಾತನಾಡಿ, ಸಂಘವು ಅನ್ನದಾಸೋಹ ಸೇರಿದಂತೆ ಹಲವು ಜನಪರ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ವಿಸ್ತರಿಸುವ ಉದ್ದೇಶ ಹೊಂದಿದೆ. ಆದಿಚುಂಚನಗಿರಿ ಮಠ, ಶಿಕ್ಷಣ, ಆರೋಗ್ಯ, ಕ್ರೀಡೆ ಹಾಗೂ ದಾಸೋಹ ಕ್ಷೇತ್ರಗಳಲ್ಲಿ ರಾಜ್ಯಕ್ಕೆ ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ. ಸುರೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿನಿತ್ಯ ನಡೆಯುವ ಅನ್ನದಾಸೋಹ ಯೋಜನೆಯಡಿ 30ಕ್ಕೂ ಹೆಚ್ಚು ಯುವಕರು ಸೌಲಭ್ಯ ಪಡೆಯುತ್ತಿದ್ದಾರೆ. ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡುವ ಮೂಲಕ ಅವರಿಗೆ ಉತ್ತೇಜನ ನೀಡಲಾಗುತ್ತಿದೆ. ಕೆನರಾ ಬ್ಯಾಂಕ್‌ನ ಗಿಗ್ ಸ್ಟಾರ್ ಯೋಜನೆ ಕುರಿತು ಮಾಹಿತಿ ನೀಡಿದರು. ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಲತಾ ಸರಸ್ವತಿ ಮಾತನಾಡಿ, 18 ವರ್ಷ ಮೇಲ್ಪಟ್ಟ ಅಸಂಘಟಿತ ಕಾರ್ಮಿಕರು ಗಿಗ್ ಸ್ಟಾರ್ ಖಾತೆ ತೆರೆಯಬಹುದಾಗಿದೆ. ಆದಾಯ ತೆರಿಗೆ ದಾಖಲೆ ಅಥವಾ ವೇತನ ಪ್ರಮಾಣ ಪತ್ರವಿಲ್ಲದೆ ವಾಹನ ಹಾಗೂ ಗೃಹಸಾಲ ಸೌಲಭ್ಯ, ಅಪಘಾತ ವಿಮೆ ಸೇರಿದಂತೆ ಹಲವು ಪ್ರಯೋಜನಗಳಿವೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಪತ್ರಕರ್ತರ ಪ್ರತಿಭಾವಂತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅಭಿನಂದಿಸಲಾಯಿತು. ಈ ವೇಳೆ ಭಾರತ್ ಗ್ಯಾಸ್ ಏಜೆನ್ಸಿ ಮಾಲೀಕ ಕೃಷ್ಣ ಅವರನ್ನೂ ಅಭಿನಂದಿಸಲಾಯಿತು. ಸಂಘದ ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್, ಕಾರ್ಯದರ್ಶಿಗಳಾದ ಬಿ.ಆರ್.ಬೊಮ್ಮೇಗೌಡ, ಕೆ.ಎಂ. ಹರೀಶ್, ಖುಷ್ವಂತ್, ಖಜಾಂಚಿ ಪ್ರಕಾಶ್ ಬೆಳವಾಡಿ, ಬಿಸಿಯೂಟ ಮೇಲ್ವಿಚಾರಕ ಪ್ರತಾಪ್ ಜೆ.ಹಿರೀಸಾವೆ ಇದ್ದರು.

## ಜೂ.02 ರಂದು ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ಧೆ

**ಮಡಿಕೇರಿ:** ವಿಶ್ವ ಪರಿಸರ ದಿನಾಚರಣೆ–2026 ರ ಅಂಗವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಚೇರಿ, ಕೊಡಗು ವತಿಯಿಂದ "ಪ್ರಕೃತಿಯಿಂದ ಸ್ಫೂರ್ತಿ, ಹವಾಮಾನಕ್ಕಾಗಿ. ನಮ್ಮ ಭವಿಷ್ಯಕ್ಕಾಗಿ." ಕುರಿತು ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗಾಗಿ ಚಿತ್ರಕಲೆ ಸ್ಪರ್ಧೆ ಹಾಗೂ ಪ್ರೌಢಶಾಲಾ ಮಕ್ಕಳಿಗಾಗಿ ಪ್ರಬಂಧ ಸ್ಪರ್ಧೆಯು ಜೂ.2 ರಂದು ಬೆಳಗ್ಗೆ 09.30 ಗಂಟೆಗೆ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರೌಢಶಾಲೆ ವಿಭಾಗದ ಜಿಮ್ನಾಸ್ಟಿಕ್ ಹಾಲ್‌ನಲ್ಲಿ ನಡೆಯಲಿದೆ. (ಈ ಸ್ಪರ್ಧೆಗಳಲ್ಲಿ ಭಾಗವಹಿಸುವ ಮಕ್ಕಳಿಗೆ ಡ್ರಾಯಿಂಗ್ ಶೀಟ್ ಮತ್ತು ಪ್ರಬಂಧ ಬರೆಯುವ ಹಾಳೆ ಮಾತ್ರ ನೀಡಲಾಗುವುದು).

ಚಿತ್ರಕಲೆ ಹಾಗೂ ಪ್ರಬಂಧ ಬರೆಯಲು ಬೇಕಾಗುವ ಬಣ್ಣ ಇನ್ನಿತರೆ ವಸ್ತುಗಳನ್ನು ವಿದ್ಯಾರ್ಥಿಗಳೇ ತರಬೇಕು). ಸ್ಪರ್ಧೆಯಲ್ಲಿ ಭಾಗವಹಿಸುವ ಎಲ್ಲಾ ವಿದ್ಯಾಥಿಗಳಿಗೆ ಅಭಿನಂದನಾ ಪತ್ರ ನೀಡಿ ಗೌರವಿಸಲಾಗುವುದು. ಈ ವರ್ಷದ ಘೋಷಣ ವಾಕ್ಯವು "ಪ್ರಕೃತಿಯಿಂದ ಸ್ಫೂರ್ತಿ. ಹವಾಮಾನಕ್ಕಾಗಿ. ನಮ್ಮ ಭವಿಷ್ಯಕ್ಕಾಗಿ." "Inspired by Nature. For Climate. For Our Future" ಆಗಿರುತ್ತದೆ.

ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ಸ್ಥಳದಲ್ಲಿಯೇ ತಮ್ಮ ಹೆಸರು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ 08272–221855, 7760738447, 6361713238 ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸ್ಥಳೀಯ ಸಾರ್ವಜನಿಕ ಶಿಕ್ಷಣ ಇಲಾಖೆ ಇವರನ್ನು ಸಂಪರ್ಕಿಸಬಹುದು ಎಂದು ಪ್ರಾದೇಶಿಕ ಕಚೇರಿ–ಕೊಡಗು ಪರಿಸರ ಅಧಿಕಾರಿ ತಿಳಿಸಿದ್ದಾರೆ.

## ಶಾಲಾ ಪ್ರಾರಂಭೋತ್ಸವ

**ಮಡಿಕೇರಿ:** ಹೂಗುಚ್ಛ ಮತ್ತು ಸಿಹಿಯನ್ನು ನೀಡುವುದರೊಂದಿಗೆ ಶಾಲಾ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಲಾಯಿತು. ಮಡಿಕೇರಿ ಪಿಎಂಶ್ರೀ ಶಾಲೆ ವತಿಯಿಂದ ಸೋಮವಾರ ಶಾಲಾ ಪ್ರಾರಂಭೋತ್ಸವ ಪ್ರಯುಕ್ತ ವಿದ್ಯಾರ್ಥಿಗಳಿಗೆ ಹೂಗುಚ್ಛ ಮತ್ತು ಸಿಹಿಯನ್ನು ವಿತರಿಸುವ ಮೂಲಕ ವಿದ್ಯಾರ್ಥಿಗಳನ್ನು ಶಾಲೆಗೆ ಸ್ವಾಗತದ ಮೂಲಕ ಬರಮಾಡಿಕೊಳ್ಳಲಾಯಿತು.

ವಿದ್ಯಾರ್ಥಿಗಳು ತುಂಬಾ ಆಸಕ್ತಿಯಿಂದ ಸರ್ಕಾರಿ ಶಾಲೆಗೆ ಬರುವುದರಿಂದ ಸರ್ಕಾರಿ ಶಾಲೆಯ ಗುಣಮಟ್ಟ ಹೆಚ್ಚಾಗುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಬಸವರಾಜು ತಿಳಿಸಿದರು. ಹಾಗೆಯೇ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ಮಾಡಿದಾಗ ವಿದ್ಯಾರ್ಥಿಗಳು ತುಂಬಾ ಸಂತಸದಿಂದ ಶಾಲೆಗೆ ಬಂದಿದ್ದೇವೆ ಎಂಬ ಮಾತನ್ನು ವ್ಯಕ್ತಪಡಿಸಿದರು.

# ನಿರ್ಭೀತ ಶರಣ....ಅಂಬಿಗರ ಚೌಡಯ್ಯ



ವೀಣಾ ಹೇಮಂತ್‌ಗೌಡ ಪಾಟೀಲ್

ಉಪೇಕ್ಷಿತ ವಚನಕಾರರು

ಅದೊಂದು ಸೋಮವಾರದ ದಿನ ಮಂತ್ರಿಮಂಡಲಕ್ಕೆ ರಜೆ. ಅಣ್ಣ ಬಸವಣ್ಣನವರು ತಮ್ಮ ಇಬ್ಬರು ಪತ್ನಿಯರನ್ನು ಕರೆದು ಇಂದು ಹೊಳೆಯ ಆಚೆಗಿನ ಶಿವ ದೇವಾಲಯಕ್ಕೆ ಹೋಗಿ ಬರೋಣ ಎಂದು ಹೇಳಿದರು. ಸಪತ್ರಿಕರಾಗಿ ಶಿವ ದೇವಾಲಯಕ್ಕೆ ಹೊರಟ ಬಸವಣ್ಣನವರು ಹೊಳೆಯ ಈಚೆ ಬದಿಯಲ್ಲಿ ಬಿಜ್ಜಳ ಮಹಾರಾಜನು ಕಟ್ಟಿಸುತ್ತಿದ್ದ ಅರಮನೆಯನ್ನು ವೀಕ್ಷಿಸಿದರು. ನಂತರ ಹೊಳೆಯ ಬಳಿ ಸಾಗಿ ತೆಪ್ಪ ನಡೆಸುವ ಅಂಬಿಗನನ್ನು ಹೊಳೆಯಾಚೆಗಿನ ಶಿವ ದೇವಾಲಯಕ್ಕೆ ಬರುವಿರಾ ಎಂದು ಕೇಳಿದಾಗ ಆತ ಅತ್ಯಂತ ಅದ್ಭುತವಾಗಿ ಈ ಹೊಳೆಯನ್ನು ನಾನು ದಾಟಿಸಬಲ್ಲೆ ಭವದ ಹೊಳೆಯಲ್ಲ ಎಂದು ಹೇಳಿದನು. ಆತನ ಮಾತಿನಿಂದ ಚಕಿತರಾದ ಬಸವಣ್ಣನವರು ಆತನ ನಿರ್ಭಿಡೆಯ ವ್ಯಕ್ತಿತ್ವ, ಬಿರುಸಾದ ಮಾತುಗಳು ಒಂದು ಕ್ಷಣ ಅವನನ್ನೇ ದಿಟ್ಟಿಸಿ ನೋಡುವಂತೆ ಮಾಡಿದವು. ಮುಂದೆ ಲೋಕಾಭಿರಾಮದ ಮಾತುಗಳನ್ನಾಡುತ್ತಾ ಆಚೆ ದಡ ಸೇರಿದ ಬಸವಣ್ಣನವರು ಬನ್ನಿ ದೇವರ ದರ್ಶನ ಮಾಡಿ ಬರೋಣ ಎಂದು ಅಂಬಿಗನನ್ನು ಕರೆದರು.... ಮತ್ತೊಮ್ಮೆ ಚಾಟಿ ಏಟಿನಂತೆ ನಮ್ಮಂತ ಹೀನ ಜಾತಿಯವರಿಗೆ ಯಾವ ದೇವರು ಇಲ್ಲ ದಿಂಡರು ಇಲ್ಲ ಎಂದು ಉತ್ತರಿಸಿದನು ಆ ಅಂಬಿಗ. ಈಗ ಬಸವಣ್ಣನವರಿಗೆ ನಿಚ್ಚಳವಾಯಿತು. ಸಾಮಾಜಿಕವಾಗಿ ಸಾಂಸ್ಕೃತಿಕವಾಗಿ ಬಹಿಷ್ಕೃತರೆನಿಸಿಕೊಂಡ ದೇವರ ಪೂಜೆಗೆ ಅನರ್ಹರೆನಿಸಿಕೊಂಡ ಹಿಂದುಳಿದ



ವರ್ಗದ ಜನರ ಮನದಾಳದ ನೋವು ಈ ರೀತಿ ವ್ಯಕ್ತಗೊಳ್ಳುತ್ತಿದೆ ಎಂದು. ಆ ಅಂಬಿಗರ ವ್ಯಕ್ತಿಯೇ ನೇರ ನಿಷ್ಠುರವಾದಿಯಾದ ಅಂಬಿಗರ ಚೌಡಯ್ಯ. ಬಸವಾದಿ ಶರಣರ ಜೊತೆಯಲ್ಲಿಯೇ ಕಲ್ಯಾಣದ ವಚನಕಾರರ ಪಂಕ್ತಿಯಲ್ಲಿ ಕಾಣಿಸಿಕೊಂಡಾತ.

ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲೂಕಿನ ಅಂದಿನ ಶಿವಪುರ ಇಂದಿನ ಚೌಡದಾನಪುರ ಎಂಬ ಊರಿನಲ್ಲಿ ಜನಿಸಿದವರು ಅಂಬಿಗರ ಚೌಡಯ್ಯ. ಇವರ ಗುರುಗಳು ಉದ್ದಾಲಕರು.ಪೂರ್ವ ಪಶ್ಚಿಮವಾಹಿನಿಯಾಗಿ ಹರಿಯುತ್ತಿರುವ ತುಂಗಭದ್ರಾನದಿಯಲ್ಲಿ ದೋಣಿ ಮೂಲಕ ನದಿ ದಾಟಿಸುವ ಕಾಯಕ ಮಾಡುತ್ತ ವಚನಗಳನ್ನು ರಚಿಸಿದ್ದಾರೆ. ಗುರುವಿನ ಘನಕೃಪೆಗೆ ಪಾತ್ರರಾಗಿ ಅವರ ಮೂಲಕ ಲಿಂಗಾಂಗ ಸಾಮರಸ್ಯವನ್ನರಿತು ಅಪಾರ ಪಾಂಡಿತ್ಯವನ್ನು ಗಳಿಸಿದರು. ಕಲ್ಯಾಣದ ಕೀರ್ತಿಯನ್ನು ಕೇಳಿ ಅನುಭವಮಂಟಪಕ್ಕೆ ಬಂದ ಈ ಶರಣದಂಪತಿಯನ್ನು ಶರಣ ಪ್ರಮಥರೆಲ್ಲ ಆದರದಿಂದ ಬರಮಾಡಿಕೊಂಡರು.

**ಬಸವಣ್ಣನೇ ಭಕ್ತ ಪ್ರಭುದೇವರೇ ಜಂಗಮರು**
**ಇಂತೆಂಬ ಭೇದವಿಲ್ಲಯ್ಯ, ಅರಿವೇ ಗುರು,**
**ಗುರುವೇ ಪರಶಿವನು ಇದು ತಿಳಿದವನೇ**
**ಪರಂಜ್ಯೋತಿಯೆಂದ ಅಂಬಿಗರ ಚೌಡಯ್ಯ?**

ಎಂಬ ವಚನದ ಮೂಲಕ ಬಸವಣ್ಣ ಮತ್ತು ಪ್ರಭುದೇವರನ್ನು ಚೌಡಯ್ಯನವರು ಮನಸಾರೆ ಹೊಗಳಿದ್ದಾರೆ. ಶಿವಶರಣರ ಸಂಗದಲ್ಲಿ ಕಾಲಕಳೆದು ಪರಿಪಕ್ವರಾದ ಇವರು ರಚಿಸಿದ ವಚನಗಳು ಹಸಿಗೋಡೆಯಲ್ಲಿ ಹರಳು ಎಸೆದಂತಿವೆ. ಇವರ ವಚನಗಳನ್ನು ಕೂಲಂಕುಶವಾಗಿ ಅಧ್ಯಯನಗೈದ ಕವಿ ಕಾವ್ಯಾನಂದರು

**?ನಿಜದ ನಗಾರಿ ನಿರ್ಭಯತೆಯ ಭೇರಿ**
**ಈ ಅಂಬಿಗರ ಚೌಡಯ್ಯ?** ಎಂದಿದ್ದಾರೆ.

ಮುಪ್ಪಿನ ಷಡಕ್ಷರಿಯವರು ತಮ್ಮ ಸುಬೋಧ ಸಾಗರದಲ್ಲಿ ?ಅಂಬಿಗರ ಚೌಡಯ್ಯನ ಮುಂಬಾಗಿಲನ್ನು ಕಾಯುವ ನಂಬಿಗೆಯ ಸೇವಕರು ಕುಂಭಿನಿಯೊಳಗಿನ್ನು ಸರಿಯದಾರು?? ಎಂದು ಹಾಡಿ ಹರಸಿದ್ದಾರೆ.

ಘನಲಿಂಗದೇವನು (1480) ?ಡೋಹರ ಕಕ್ಕಯ್ಯ, ಮಾದಾರ ಚೆನ್ನಯ್ಯ, ಅಂಬಿಗರ ಚೌಡಯ್ಯಯಿಂತಿಪ್ಪ ಶಿವಶರಣರ ಮನೆ ಬಾಗಿಲನಿಕ್ಕುವ ಸೊಣಗನ ಮಾಡಿ ಎನ್ನಿರಿಸಯ್ಯ ಎಂದು ತಮ್ಮ ವಚನವೊಂದರಲ್ಲಿ ಹೇಳಿರುವುದೇ ಇದಕ್ಕೆ ನಿದರ್ಶನವಾಗಿದೆ. ಮಹಾಕವಿ ಷಡಕ್ಷರಿಯವರು ತಮ್ಮ ?ಬಸವರಾಜ ವಿಜಯ?ದಲ್ಲಿ ?ನಿಡುಗುಡಿಮಾರನಂಬಿಗರ ಚೌಡಯ್ಯ? ಎಂದು ಸ್ಮರಿಸಿದ್ದರೆ, ಮಹಾಲಿಂಗ ವಿರಚಿತ ಗುರುಬೋಧಾಮೃತದ ಕುಂಬಾರ ಗುಂಡಯ್ಯ

ಅಂಬಿಗರ ಚೌಡಯ್ಯ, ಕೆಂಭಾವಿಯೊಳಗೆ ಮೆರೆವ ಬೋಗಣ್ಣನಿಗೆ ಸಂಭ್ರಮದೊಳೆರಗಿ ನಮಿಸುವೆ*ಎಂಬ ಪದಗಳು ಅಂಬಿಗರ ಚೌಡಯ್ಯನವರ ಮೇರು ವ್ಯಕ್ತಿತ್ವವನ್ನು ಪರಿಚಯಿಸುತ್ತವೆ.

ಚೌಡಯ್ಯನವರ ಪಾರಮಾರ್ಥ ಸಾಧನೆಯನ್ನು ಕಂಡು ಮಾರುಹೋದ ಗುತ್ತಲ ಪ್ರಾಂತ್ಯದ ಅರಸನು ಅವರಿಗೆ ದಾಸೋಹಕ್ಕೆಂದು ಶಿವಪುರಕ್ಕೆ ಹೊಂದಿಕೊಂಡಿರುವ ಭೂಮಿಯನ್ನು ಕಾಣಿಕೆಯಾಗಿ ನೀಡಿದನು. ತಮಗೆ ನೀಡಿದ ಈ ಭೂಮಿಯನ್ನು ಚೌಡಯ್ಯನವರು ತಮ್ಮ ಮಗ ಪುರವಂತ ಹಾಗೂ ಶಿವದೇವರಿಗೆ ದಾನವಾಗಿ ನೀಡಿದರು. ಅದೇ ಕಾರಣಕ್ಕಾಗಿ ಶಿವಪುರಕ್ಕೆ ?ಚೌಡಯ್ಯ ದಾನಪುರ? ಎಂಬ ಹೆಸರು ಬಂದಿತೆಂದು ಹೇಳಲಾಗುತ್ತಿದ್ದು, ಅದೇ ಇಂದು ಚೌಡದಾನಪುರವಾಗಿದೆ. ಬಸವಣ್ಣನವರ ಗರಡಿಯಲ್ಲಿ ಪಳಗಿದ ಇವರ ಅನುಭವವು ಅಮೃತಧಾರೆಯಾಗಿ ವಚನಗಳ ರೂಪದಲ್ಲಿ ಹರಿದುಬಂದಿವೆ. ನಿಜವಾದ ಭಕ್ತನಾರು? ಎಂಬುದನ್ನು ಕುರಿತು ತಮ್ಮ ವಚನದಲ್ಲಿ

**ಓಡುವಾತ ಲೆಂಕನಲ್ಲ ಬೇಡುವಾತ ಭಕ್ತನಲ್ಲ**
**ಓಡಲಾಗದು ಲೆಂಕನು, ಬೇಡಲಾಗದು ಭಕ್ತನು**
**ಓಡೆನಯ್ಯ, ಬೇಡೆನಯ್ಯ ಎಂದ ಅಂಬಿಗರ ಚೌಡಯ್ಯ?**

ಎಂದು ಸಾರಿದ್ದು ಅಮೋಘವಾಗಿದೆ.

ಪರಮಾತ್ಮನ ನಿಜಸ್ವರೂಪವನ್ನು ಕುರಿತು
ಅಸುರ ಮಾಲೆಗಳಿಲ್ಲ, ತ್ರಿಶೂಲ ಡಮರುಗವಿಲ್ಲ
ಬ್ರಹ್ಮಕಪಾಲವಿಲ್ಲ ಭಸ್ಮಭೂಷಣನಲ್ಲ
ವೃಷಭ ವಾಹನನಲ್ಲ, ಋಷಿಯ ಮಗಳೊಡನಿರ್ದಾತನಲ್ಲ
ಎಸಗುವ ಸಂಸಾರದ ಕುರುಹಿಲ್ಲದಾತಂಗೆ
ಹೆಸರಾವುದೆಂದಾತ ಅಂಬಿಗರ ಚೌಡಯ್ಯ?
ಎಂದಿದ್ದಾರೆ.

ಸಾವಿರಾರು ವರ್ಷಗಳಿಂದ ಧರ್ಮ–ದೇವರುಗಳ ಬಗೆಗೆ ಜನ ಸಮೂಹದಲ್ಲಿದ್ದ ಮೂಢನಂಬಿಕೆಗಳನ್ನೆಲ್ಲ ಬಸವಣ್ಣ ಮತ್ತಿತರೆ ಶಿವಶರಣರೊಂದಿಗೆ ಅಂಬಿಗರ ಚೌಡಯ್ಯ ಹೊಡೆದೋಡಿಸುತ್ತಲೇ ವಿಚಾರ ಪರವಾದ ವಾಸ್ತವ ಅಂಶಗಳನ್ನು ಜನಮನದಲ್ಲಿ ಮೂಡಿಸಿದರು.

ಧರ್ಮ–ದೇವರು ಕೇವಲ ಶ್ರೀಮಂತರ ಸೊತ್ತಾಗಿದ್ದ ಅಂದಿನ ಸಂದರ್ಭದಲ್ಲಿ ಪೂಜೆ ಪುರಸ್ಕಾರಗಳು ಕೇವಲ ನೇಮವಂತರ, ಬ್ರಾಹ್ಮಣರ ಗುತ್ತಿಗೆಯಾಗಿದ್ದ ಸಮಯದಲ್ಲಿ ಭಾಷ್ಯಕಾರರು ಹೇಳಿದ್ದೇ ಸರಿಯೆನ್ನುವ ವ್ಯವಸ್ಥೆಯಲ್ಲಿ ಚೌಡಯ್ಯ ಈ ಮೂವರನ್ನು ಕ್ರೂರ ಕರ್ಮಿಗಳೆಂದು, ಸಂದೇಹಿಗಳೆಂದು ಕಟುವಾಗಿ ಟೀಕಿಸುವುದರ ಮೂಲಕ ಇವರು ಹೋದ ದಾರಿಯಲ್ಲಿ ಯಾರೂ ಹೋಗ ಬಾರದೆಂದು ಸ್ಪಷ್ಟಪಡಿಸುತ್ತಾನೆ. ಇವರ ವಚನಗಳು ತುಂಬಾ ಖಾರವಾಗಿರುವುದು ಅವರ ಆತ್ಮ ಬಲವನ್ನು ಹಾಗೂ ಸತ್ಯವನ್ನು ಪ್ರತಿಪಾದಿಸುವಲ್ಲಿ ಹೊಂದಿದ್ದ ಧೈರ್ಯವನ್ನು ತೋರಿಸುತ್ತವೆ.

ಹನ್ನೆರಡನೇ ಶತಮಾನದಲ್ಲಿ ಕಲ್ಯಾಣದ ಶಿವಶರಣರ ಮಧ್ಯದಲ್ಲಿ ಪ್ರಜ್ವಲವಾಗಿ ಬೆಳಗಿದ ಶರಣನೆಂದರೆ ಅಂಬಿಗರ ಚೌಡಯ್ಯ. ಮಾತು ಕಟುವಾದರೂ ದಿಟವನ್ನೆ ನುಡಿದ ದಿಟ್ಟನೀತ ನುಡಿದಂತೆ ನಡೆದವನು, ನಡೆದಂತೆ ನುಡಿದವನು ಅಂಬಿಗರ ಚೌಡಯ್ಯ. ನಿಜಾರ್ಥದಲ್ಲಿ ಒಬ್ಬ ಬಂಡುಕೋರ, ಕ್ರಾಂತಿಕಾರಿ ಶರಣ, ನಿಷ್ಠೂರ ಮನುಷ್ಯ. ಎಲ್ಲಾ ಶರಣರಂತೆ ಈತ ಕಾಯಕಯೋಗಿ. ದೋಣಿ ನಡೆಸುವುದು ಅವನ ಕಾಯಕ ಅಂಬಿಗ ವೃತ್ತಿ.

ಸ್ಥಿತಪ್ರಜ್ಞರಾದ ಅವರು ಕೊನೆಯಲ್ಲಿ ಚೌಡದಾನಪುರದ ನದಿಯ ದಡದಲ್ಲಿ ಸಮಾಧಿಸ್ಥರಾದರೆಂದು ತಿಳಿದುಬರುತ್ತದೆ. ಆದ್ದರಿಂದ ಈ ನದಿದಡದಲ್ಲಿರುವ ದಿಬ್ಬದ ಮೇಲಿರುವ ಸಮಾಧಿಯನ್ನು ?ಅಂಬಿಗರ ಚೌಡಯ್ಯನವರ ಸಮಾಧಿ? ಎಂದು ಗುರುತಿಸಲಾಗಿದೆ. ಪ್ರತಿವರ್ಷ ಅಂಬಿಗರ ಚೌಡಯ್ಯನವರ ಜಯಂತಿಯ ನಿಮಿತ್ಯ ಸಂಕ್ರಮಣದ ಪರ್ವ ಕಾಲದಲ್ಲಿ ಬಹು ಸಡಗರ ಸಂಭ್ರಮದಿಂದ ಇಲ್ಲಿ ಜಾತ್ರಾಮಹೋತ್ಸವವು ಜರಗುತ್ತಲಿತ್ತು. ಈಗ ಪ್ರತಿವರ್ಷ ಜನವರಿ 21ರಂದು ಅಂಬಿಗರ ಚೌಡಯ್ಯನವರ ಜಯಂತಿಯನ್ನು ನಮ್ಮ ಕರ್ನಾಟಕ ಸರಕಾರದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ನಿಜಶರಣ ಅಂಬಿಗರ ಚೌಡಯ್ಯನವರ ದಿವ್ಯ ವ್ಯಕ್ತಿತ್ವಕ್ಕೆ ಶಿರಬಾಗಿ ನಮಿಸುತ್ತಾ ಅವರು ತೋರಿದ ದಾರಿಯಲಿ ನಾವೆಲ್ಲರೂ ನಡೆದು ಸಾಗುವ

# ಧ್ಯಾನ ಏಕಾಗ್ರತೆ



ಗಿರಿಜಾ.ಎಸ್. ದೇಶಪಾಂಡೆ. ಬೆಂಗಳೂರು.

ಶಿವನ ಆಶೀರ್ವಾದ ಪಡೆಯಲು ಶಿವಭಕ್ತರು ಸಾಮಾನ್ಯವಾಗಿ" ಓಂ ನಮಃ ಶಿವಾಯ". ಎನ್ನುವ ಮಂತ್ರ ಪಠಿಸುತ್ತಾರೆ.ನಮ್ಮ ದೈನಂದಿನ ಜೀವನ ಒತ್ತಡ,ಮತ್ತು ಸಂಕಷ್ಟಗಳಿಂದ ಪಾರಾಗಲು ಪ್ರತಿಯೊಬ್ಬರೂ ಯೋಗ ಮತ್ತು ಅಧ್ಯಾತ್ಮಿಕತೆಯತ್ತ ಮುಖ ಮಾಡುತ್ತಾರೆ.ಹಿಂದೂ ಧರ್ಮದ ಪ್ರಕಾರ "ಓಂ ನಮಃ ಶಿವಾಯ" ಎನ್ನುವ ಶಿವಮಂತ್ರವು ಶುದ್ಧೀಕರಣ ,ಒತ್ತಡ,ಆತ್ಮದ ವಿಮೋಚನೆಗಾಗಿ ಪಠಿಸಬಹುದಾದ ಸರಳ ಮಂತ್ರವಾಗಿದೆ.ಈ ಮಂತ್ರ ಪಠಿಸುವದು ಅಥವಾ ಕೇಳುವದು ನಮ್ಮ ಜೀವನದಲ್ಲಿ ಸಕಾರಾತ್ಮಕ ಭಾವನೆ ಉಂಟುಮಾಡುವ ಕಂಪನವನ್ನು ಸೃಷ್ಟಿಸುತ್ತದೆ.ಓಂ ನಮಃ ಶಿವಾಯದಿಂದ ಶಕ್ತಿಯುತ ಪರಿಣಾಮಗಳ ಅದರ ಅರ್ಥ ನಾವೆಲ್ಲ ತಿಳಿಯುವದು ಮುಖ್ಯವಾಗಿದೆ.

ಹಿಂದೂ ಧರ್ಮದಲ್ಲಿ ಓಂ ನಮಃ ಶಿವಾಯ ಮಂತ್ರವನ್ನು ಶಿವಪಂಚಾಕ್ಷರ ಮಂತ್ರ ಅಥವಾ ಪಂಚಾಕ್ಷರಿ ಶಿವಮಂತ್ರ ಎಂದು ಕರೆಯಲಾಗುತ್ತದೆ. ಇದನ್ನು ಐದು ಅಂಶಗಳ ಸಂಕೇತವೆಂದು ಪರಿಗಣಿಸಲಾಗುತ್ತದೆ.ಐದು ಅಂಶಗಳ ಒಡೆಯ ಶಿವನೇ.ಆದ್ದರಿಂದ ಓಂ ನಮಃ ಶಿವಾಯ ಮಂತ್ರವು



ಅವನಿಗೆ ಸಂಬಂಧಿಸಿದೆ.'ಓಂ' ಅನ್ನು ಬ್ರಹ್ಮಾಂಡದ ಧ್ವನಿ ಎಂದು ಕರೆಯಲಾಗುತ್ತದೆ.ಓಂ ಎಂದರೆ ಶಾಂತಿ,ಮತ್ತು ಪ್ರೀತಿ,ಹಾಗೂ ಐದು ಅಂಶಗಳ ಸಾಮರಸ್ಯಕ್ಕಾಗಿ ಜಪಿಸಲಾಗುತ್ತದೆ.

**ಪ್ರಯೋಜನಗಳು**

ಈ ಮಂತ್ರ ಪಠಣೆಯಿಂದ ಓರ್ವ ವ್ಯಕ್ತಿಯ ಎಲ್ಲ ಅಡೆತಡೆಗಳು ದೂರವಾಗುತ್ತವೆ ಎನ್ನುವ ನಂಬಿಕೆಯಿದೆ.ಕಾಮ,ಕ್ರೋಧ,ದ್ವೇಷ,ಮೋಹ,ಲೋಭ ,ಭಯ,ಖಿನ್ನತೆ ನಿವಾರಣೆಯಾಗುತ್ತದೆ.ಈ ಮಂತ್ರದ ಪಠಣೆಯಿಂದ ವ್ಯಕ್ತಿಯಲ್ಲಿ ಧೈರ್ಯ,ಉತ್ಸಾಹ ಉಂಟಾಗುತ್ತದೆ.ಪಠಣದ ಮೂಲಕ ಸಾವಿನ ಭಯ ನಿಯಂತ್ರಿಸಬಹುದು.ಈ ಮಂತ್ರದಿಂದ ನಕಾರಾತ್ಮಕತೆಯು ನಮ್ಮಿಂದ ದೂರಾಗುತ್ತದೆ.

**ಮಂತ್ರದ ಜಪ:** ಬೆಳಿಗ್ಗೆ ಸ್ನಾನ ಮಾಡಿ ದೇವರನ್ನು ಪೂಜಿಸಿ ನಂತರ ಮಂತ್ರ ಪಠಿಸಬೇಕು.ಸೂರ್ಯೋದಯದ ಸಮಯ,ಸೂರ್ಯಾಸ್ತದ ಸಮಯ ಅತ್ಯಂತ ಶುಭಸಮಯವಾಗಿರುತ್ತದೆ.ಈ ಮಂತ್ರವನ್ನು ಮನಸ್ಸಿನಲ್ಲಿ ಕೂಡ ಪಠಿಸಬಹುದು. ಉತ್ತಮ ಅನುಭವ ಪಡೆಯಲು 108 ಬಾರಿ ಪಠಿಸಬೇಕು.ಶಿವಪಂಚಾಕ್ಷರಿ ಮಂತ್ರವು ಸರಳವಾದ ಅತ್ಯಂತ ಪ್ರಯೋಜನಕಾರಿಯಾದ ಮಂತ್ರಗಳಲ್ಲಿ ಒಂದಾಗಿದ್ದು ಪ್ರತಿಯೊಬ್ಬ ವ್ಯಕ್ತಿಗೆ ಜೀವನದುದ್ದಕ್ಕೂ ಪ್ರಯೋಜನ ನೀಡುವಂತಹ ಮಂತ್ರವಾಗಿದೆ.ಧನಾತ್ಮಕ ಆಕರ್ಷಣೆ ,ಇಂದ್ರಿಯ ನಿಯಂತ್ರಣ,ಜೀವನದ ಉದ್ದೇಶ ಅರಿತುಕೊಳ್ಳಲು ,ಗ್ರಹದೋಷ ನಿವಾರಣೆಗೆ ಪ್ರಯೋಜನಕಾರಿಯಾಗಿದೆ.ನಾವೂ ಪ್ರತಿನಿತ್ಯ ಪಠಿಸಿ ಮಾನಸಿಕ ಶಾಂತಿ ಪಡೆಯೋಣ.

# ಹಿಮಶಿಖರವನ್ನೇ ಮಣಿಸಿದ ಮಿಂಚು: ದಿವ್ಯಾಸಿಂಗ್



ಡಾ.ಸುಧಾಕರ.ಜಿ.ಲಕ್ಕವಳ್ಳಿ

ಮೈನಸ್ ಹನ್ನೆರಡು ಡಿಗ್ರಿಯ ಮೈಕೊರೆಯುವ ಚಳಿ, ಕಿವಿ ಸೀಳುವ ಬಿರುಗಾಳಿ, ಉಸಿರು ಕಟ್ಟಿಸುವ ವಿರಳ ಗಾಳಿ. ಇವೆಲ್ಲವನ್ನೂ ಮೆಟ್ಟಿ ಹಿಮಾಲಯದ ಎದೆಯ ಮೇಲೆ ಸೈಕಲ್ ಚಕ್ರದ ಕೆಚ್ಚೆದೆಯ ಗುರುತು ಮೂಡಿಸಿದವರು ಉತ್ತರಪ್ರದೇಶದ 28ರ ಹರೆಯದ ಶಿಕ್ಷಕಿ ದಿವ್ಯಾಸಿಂಗ್. ಅಸಾಧ್ಯವೆಂದು ಜಗ ಅಂದಾಜಿಸಿದ್ದ ಕನಸನ್ನು ಸುಸಾಧ್ಯವಾಗಿಸಿ, ಎವರೆಸ್ಟ್ ಬೇಸ್ ಕ್ಯಾಂಪ್ ತಲುಪಿದ ಭಾರತದ ಮೊದಲ ಮಹಿಳೆ ಎಂಬ ಚರಿತ್ರೆ ಬರೆದರು.

ಅವರ ಪಯಣ ಹೂವಿನ ಹಾಸಿಗೆಯಾಗಿರಲಿಲ್ಲ. ಕಲ್ಲುಮುಳ್ಳಿನ ಕಡಿದಾದ ದಾರಿ, ಹಿಮದ ಹೊದಿಕೆ, ತೂಗುಸೇತುವೆಗಳ ನಡುಕ. ದಿನಕ್ಕೆ ಹತ್ತು–ಹನ್ನೆರಡು ಗಂಟೆಗಳ ಕಾಲ ಪೆಡಲ್ ತುಳಿದು, ಕೇವಲ ಹದಿನಾಲ್ಕು ದಿನಗಳಲ್ಲಿ 17,560 ಅಡಿ ಎತ್ತರಕ್ಕೆ ದಾಪುಗಾಲು ಹಾಕಿದಳು. ಚಕ್ರ ಸಾಗದ ಕಡೆ ಸೈಕಲ್ಲನ್ನೇ ಹೆಗಲಿಗೇರಿಸಿ ಸಾಗಿದರು. ಪ್ರತಿ ಉಸಿರಿನಲ್ಲೂ ಗೆಲ್ಲಲೇಬೇಕು ಎಂಬ ಮಂತ್ರ, ಪ್ರತಿ ಹನಿ ಬೆವರಿನಲ್ಲೂ ಛಲದ ಕಿಡಿ.

ದಿವ್ಯಾರ ಈ ಗೆಲುವು ಕೇವಲ ಶಿಖರಾರೋಹಣವಲ್ಲ, ಕೋಟಿ ಕನಸುಗಳಿಗೆ ಹೊತ್ತಿಸಿದ ದೀವಿಗೆ. ಹೆಣ್ಣು ಅಬಲೆ ಎಂಬ ಹಳಸಲು ನುಡಿಗೆ ಹಿಮದ ಬಂಡೆಯೇಟು ಕೊಟ್ಟ ಸಾಧನೆ ಇದು. ಗುರಿ ಕಣ್ಣ ಮುಂದಿದ್ದರೆ, ಬೆವರು



ಸ್ಫೂರ್ತಿ ಸುಧೆ - 33

ಸುರಿಸುವ ಎದೆಗಾರಿಕೆ ಇದ್ದರೆ ಯಾವ ಎವರೆಸ್ಟೂ ಮಂಡಿಯೂರುತ್ತದೆ ಎಂದು ಜಗಕ್ಕೆ ಸಾರಿದರು.

ಅವರ ಚಕ್ರದ ಜಾಡು ಹೇಳುತ್ತಿದೆ: ಧೈರ್ಯವೊಂದಿದ್ದರೆ ದಾರಿ ತಾನೇ ಹುಟ್ಟುತ್ತದೆ. ವಿಫಲತೆಗೆ ಬೆದರದೆ ಮುನ್ನುಗ್ಗಿದರೆ ಯಶಸ್ಸು ತಾನಾಗಿ ತಲೆಬಾಗುತ್ತದೆ. ದಿವ್ಯಾಸಿಂಗ್ ಇಂದಿನ ಯುವಜನತೆಗೆ, ಅದರಲ್ಲೂ ಹೆಣ್ಣುಮಕ್ಕಳಿಗೆ ಆಕಾಶವೇ ಮಿತಿ ಎಂಬ ಆತ್ಮವಿಶ್ವಾಸದ ಕಿಡಿ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,